VOLUME: 16 | 01 MAY 2026 | ಶುಕ್ರವಾರ | RS: 2 | PAGE: 06 ISSUE: 85 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಿತ್ಯಾ ಮೆನನ್ ಮದುವೆಯ ಬಗ್ಗೆ ಇಲ್ಲಿಯವರೆಗೆ ಏನನ್ನೂ ಉಲ್ಲೇಖಿಸಿಲ್ಲ. ಹಿಂದೆ, ನಿತ್ಯಾ ಮೆನನ್ ಮದುವೆಯ ಬಗ್ಗೆ ಹಲವು ಸುದ್ದಿಗಳು ಹರಿದಾಡಿದ್ದವು. ಪ್ರಸ್ತುತ, ಅವರು ಒಂಟಿ ಜೀವನ ನಡೆಸುತ್ತಿದ್ದಾರೆ. ಈಗ ನಟಿ ಮದುವೆಯ ಬಗ್ಗೆ ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿದ್ದಾರೆ. ಮದುವೆ ಜೀವನದ ಒಂದು ಭಾಗ ಅಷ್ಟೇ, ಅದೇ ಜೀವನವಲ್ಲ ಎಂದು ಹೇಳಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ನೇಮಕಾತಿಒಳಮೀಸಲಾತಿ: ರೋಸ್ಟರ್ ಜಾರಿ ಮಾಡಲು ನಿರ್ಧಾರ

ಬೆಂಗಳೂರು: ಇತ್ತೀಚೆಗೆ ರಾಜ್ಯ ಸರ್ಕಾರ ನೇಮಕಾತಿಗಳಲ್ಲಿ ಒಳಮೀಸಲಾತಿ ಜಾರಿಗೊಳಿಸಿ ಆದೇಶ ಹೊಡಿಸಿತ್ತು. ಆದರೆ ಏಪ್ರಿಲ್ 27ರಂದು ಮಾಡಲಾಗಿದ್ದ ಆದೇಶವನ್ನು ಹಿಂಪಡೆಯಲು ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ಪರಿಷ್ಕೃತ ಮಾದರಿಯಲ್ಲಿ ರೋಸ್ಟರ್ ಜಾರಿ ಮಾಡಲು ನಿರ್ಧರಿಸಲಾಗಿದ್ದು, ಸಮಾಜಕಲ್ಯಾಣ ಇಲಾಖೆ ಪರಿಷ್ಕೃತ ಆದೇಶವನ್ನು ಹೊರಡಿಸಲಿದೆ.

ಸಚಿವ ಸಂಪುಟ ಸಭೆ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಕಾನೂನು ಸಚಿವ ಹೆಚ್.ಕೆ.ಪಾಟೀಲ್, ಆರೋಗ್ಯ ವಲಯದಲ್ಲಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 'ರಾಷ್ಟ್ರೀಯ ಉಚಿತ ರೋಗ ಪತ್ತೆ' ಯೋಜನೆಯಡಿ 6 ಎಂಆರ್ಐ ಯಂತ್ರಗಳನ್ನು ಖರೀದಿಸಲು ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಸಾರಿಗೆ ಸಂಪರ್ಕವನ್ನು ಬಲಪಡಿಸುವ ದೃಷ್ಟಿಯಿಂದ ಹೈದರಾಬಾದ್–ಬೆಂಗಳೂರು ಹೈಸ್ಪೀಡ್ ರೈಲು ಯೋಜನೆಯ ಕುರಿತು ಚರ್ಚೆ ನಡೆಸಲಾಗಿದ್ದು, ಈ ಯೋಜನೆಯಡಿ ಕರ್ನಾಟಕದಲ್ಲಿ ಒಟ್ಟು 15 ರೈಲು ನಿಲ್ದಾಣಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ. ಇದರೊಂದಿಗೆ, ಬೀದರ್–ಬೆಂಗಳೂರು ಹಾಗೂ ಕಲಬುರಗಿ– ಬೆಂಗಳೂರು ನಡುವಿನ ವಿಮಾನಯಾನ ಸೇವೆಗಳ ನಿರ್ವಹಣೆಗೆ ಉತ್ತೇಜನ ನೀಡುವ ಸಲುವಾಗಿ, ವಾರ್ಷಿಕ 28.7 ಕೋಟಿ ರೂ. ಪ್ರೋತ್ಸಾಹಧನ ನೀಡಲು ಸಚಿವ ಸಂಪುಟ ಒಪ್ಪಿಗೆ ಸೂಚಿಸಿದೆ ಎಂದರು.



ಅಲ್ಲದೆ, ಸಾಮಾಜಿಕ ಅಭಿವೃದ್ಧಿ ಹಾಗೂ ಆಡಳಿತಾತ್ಮಕ ಕಾಮಗಾರಿಗಳಿಗೂ ಹೆಚ್ಚಿನ ಒತ್ತು ನೀಡಲಾಗಿದ್ದು, ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಮುಂದಿನ ಎರಡು ವರ್ಷಗಳಿಗೆ 600 ಕೋಟಿ ರೂ ವೆಚ್ಚದ ಯೋಜನೆಗೆ ಸಂಪುಟ ಅನುಮೋದನೆ ನೀಡಿದೆ.

ಜತೆಗೆ, ಬೆಳಗಾವಿ ಜಿಲ್ಲಾಧಿಕಾರಿ ಕಚೇರಿ ಕಟ್ಟಡ ನಿರ್ಮಾಣಕ್ಕಾಗಿ ಹೆಚ್ಚುವರಿಯಾಗಿ 20 ಕೋಟಿ ರೂ ಅನುದಾನ ಬಿಡುಗಡೆ ಮಾಡಲು ಸರ್ಕಾರ ನಿರ್ಧರಿಸಿದೆ ಎಂದು ಹೇಳಿದರು.

ರಾಜ್ಯದಲ್ಲಿ ಜಿಬಿಎ ಬಿಡದಿ ಟೌನ್‌ಶಿಪ್ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು, ಈ ಬೃಹತ್ ಯೋಜನೆಗಾಗಿ 18,133 ಕೋಟಿ ರೂ. ಅನುದಾನವನ್ನು ಮೀಸಲಿಡಲಾಗಿದೆ.

ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ ತಾಲೂಕಿನ 9 ಗ್ರಾಮಗಳ ವ್ಯಾಪ್ತಿಯಲ್ಲಿ ಬರುವ ಸುಮಾರು 7,481 ಎಕರೆ 21.08 ಗುಂಟೆ ಪ್ರದೇಶವನ್ನು ಈ ಯೋಜನೆಗಾಗಿ ಸ್ವಾಧೀನಪಡಿಸಿಕೊಳ್ಳಲಾಗುತ್ತಿದೆ.

ಈ ಯೋಜನೆಯಲ್ಲಿ ಜಮೀನು ಕಳೆದುಕೊಳ್ಳುವ ರೈತರಿಗೆ ಆರ್ಥಿಕವಾಗಿ ಹೆಚ್ಚಿನ ಅನುಕೂಲ ಕಲ್ಪಿಸಲು ಅಭಿವೃದ್ಧಿಪಡಿಸಿದ ಭೂಮಿಯನ್ನು ನೀಡಲು ನಿರ್ಧರಿಸಲಾಗಿದ್ದು, ಪ್ರತಿ ಎಕರೆಗೆ 9,600 ಚದರ ಅಡಿ ಭೂಮಿಯನ್ನು ಹಂಚಿಕೆ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

ಅಲ್ಲದೆ, ಕಟ್ಟಡ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಸರ್ಕಾರ ಮಹತ್ವದ ತೀರ್ಮಾನ ಕೈಗೊಂಡಿದೆ.

ನೋಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳಿಗಾಗಿ ವಿವಿಧ ಲೇಖನ ಸಾಮಗ್ರಿ ಹಾಗೂ ಶಾಲಾ ಪುಸ್ತಕಗಳನ್ನು ಒಳಗೊಂಡಿರುವ ಸುಮಾರು 8,600 ರೂ. ಮೌಲ್ಯದ ಕಿಟ್‌ಗಳನ್ನು ವಿತರಿಸಲು ಸಂಪುಟ ಸಭೆ ಒಪ್ಪಿಗೆ ನೀಡಿದೆ.

## ಗೋಡೆ ಕುಸಿತ: ಅಧಿಕಾರಿಗಳ ಅಮಾನತು

ಬೆಂಗಳೂರು: ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿದು ಏಳು ಜನರ ಸಾವಿಗೆ ಕಾರಣವಾಗಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಕಾರ್ಯಪಾಲಕ ಇಂಜಿನಿಯರ್ ಅಮಾನತುಗೊಳಿಸಿ, ನೋಟಿಸ್ ಜಾರಿ ಮಾಡುವಂತೆ ಸಿಎಂ ಸಿದ್ದರಾಮಯ್ಯ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ.

ಬುಧವಾರ ಸುರಿದ ಭಾರಿ ಮಳೆಯಿಂದಾಗಿ ಬೌರಿಂಗ್ ಆಸ್ಪತ್ರೆಯ ಗೋಡೆ ಕುಸಿದು, ಏಳು ಮಂದಿ ಸಾವನ್ನಪ್ಪಿದ ಹಿನ್ನೆಲೆ ಇಂದು ವಿಧಾನಸೌಧದ ಸಿಎಂ ಕೊಠಡಿಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಆಯುಕ್ತರೊಂದಿಗೆ ಸಿಎಂ ಸಿದ್ದರಾಮಯ್ಯ ಸಭೆ ಮಾಡಿದರು. ಗೋಡೆಗೆ ಹಾನಿ ಆಗಲಿದೆ ಎಂದು ತಿಳಿದಿದ್ದರೂ ಕಾಮಗಾರಿ ನಡೆಯುವಾಗ ಮಣ್ಣು ಸುರಿದದ್ದು ಏಕೆ ಎಂದು ಸಭೆಯಲ್ಲಿ ಬೌರಿಂಗ್ ಆಸ್ಪತ್ರೆ ಮುಖ್ಯಸ್ಥರನ್ನು ಸಿಎಂ ತರಾಟೆಗೆ ತೆಗೆದುಕೊಂಡರು. ಕೂಡಲೇ ಸಂಬಂಧಪಟ್ಟ ಇಇ ಅಮಾನತುಗೊಳಿಸುವಂತೆ ತಿಳಿಸಿದರು.

ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿದು ಏಳು ಜನರ ಸಾವಿಗೆ ಕಾರಣವಾಗಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಕಾರ್ಯಪಾಲಕ ಇಂಜಿನಿಯರ್ ಅವರನ್ನು ಅಮಾನತುಗೊಳಿಸಿ, ನೋಟೀಸ್ ಜಾರಿ ಮಾಡಬೇಕು. ಕೇವಲ ಒಂದು ಗಂಟೆಯ ಮಳೆಗೆ ನಗರದಲ್ಲಿ 250ಕ್ಕೂ ಹೆಚ್ಚು ಮರಗಳು ಉರುಳಿಬಿದ್ದಿರುವ ಮತ್ತು ರಸ್ತೆಗಳು ಜಲಾವೃತವಾಗಿರುವ ಬಗ್ಗೆ ಅಧಿಕಾರಿಗಳ ವಿರುದ್ಧ ಗರಂ ಆದ ಸಿಎಂ ಸಿದ್ದರಾಮಯ್ಯ, 90 ಮಿ.ಮೀ. ಮಳೆಯಾದರೂ ಯಾಕೆ ಸೂಕ್ತ ಕ್ರಮಕೈಗೊಂಡಿಲ್ಲ ಎಂದು ಪ್ರಶ್ನಿಸಿದರು.

ನಗರದ ಮೂಲಸೌಕರ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದ ಸಿಎಂ, ಮುಂಗಾರು ಮಳೆ ಪ್ರಾರಂಭವಾಗುವ ಮೊದಲೇ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಬೆಂಗಳೂರಿನ ಐದೂ ವಲಯಗಳ ಆಯುಕ್ತರು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ರಸ್ತೆ ಗುಂಡಿಗಳನ್ನು ತುರ್ತಾಗಿ ಮುಚ್ಚಬೇಕು.

ರಾಜಕಾಲುವೆಗಳಲ್ಲಿನ ಹೂಳನ್ನು ತೆರವುಗೊಳಿಸಬೇಕು ಮತ್ತು ಅಂಡರ್ ಪಾಸ್‌ಗಳಲ್ಲಿ ಮಳೆ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಎಂದರು. ಒಂದು ವೇಳೆ ಅಂಡರ್ ಪಾಸ್‌ಗಳಲ್ಲಿ ನೀರು ತುಂಬಿದರೆ ಪಂಪ್ ಸೆಟ್ ಬಳಸಿ ಕೂಡಲೇ ನೀರು ಹೊರಹಾಕಲು ವ್ಯವಸ್ಥೆ ಮಾಡಬೇಕು ಹಾಗೂ ಅಗತ್ಯಬಿದ್ದರೆ ಅಂಡರ್ ಪಾಸ್ ಮುಚ್ಚುವಂತೆಯೂ ನಿರ್ದೇಶನ ನೀಡಿದ್ದಾರೆ.

ಇನ್ನು ಮುಂಜಾಗ್ರತಾ ಕ್ರಮವಾಗಿ, ನಗರದಲ್ಲಿ ಶಿಥಿಲಗೊಂಡಿರುವ ಸರ್ಕಾರಿ ಮತ್ತು ಖಾಸಗಿ ಕಟ್ಟಡಗಳ ಬಗ್ಗೆ ಸಮಗ್ರ ವರದಿ ಸಿದ್ಧಪಡಿಸುವಂತೆ ಸೂಚಿಸಿದ ಸಿದ್ದರಾಮಯ್ಯ, ಅಪಾಯಕಾರಿ ಸ್ಥಿತಿಯಲ್ಲಿರುವ ಖಾಸಗಿ ಕಾಂಪೌಂಡ್ ಹಾಗೂ ಕಟ್ಟಡಗಳ ಮಾಲೀಕರಿಗೆ ಕೂಡಲೇ ನೋಟಿಸ್ ಜಾರಿ ಮಾಡಲು ತಿಳಿಸಿದರು. ಅಲ್ಲದೆ, ಸಾರ್ವಜನಿಕರ ಸುರಕ್ಷತೆಯ ದೃಷ್ಟಿ ಯಿಂದ, ಅಪಾಯದ ಸ್ಥಿತಿಯಲ್ಲಿರುವ ವಿದ್ಯುತ್ ಕಂಬಗಳು ಮತ್ತು ಒಣಗಿದ ಮರ ಗಳ ರೆಂಬೆಗಳನ್ನು ಆಡಿಟ್ ಮಾಡಿ ಕೂಡಲೇ ತೆರವುಗೊಳಿಸುವಂತೆ ಜಿಬಿಎ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಸದಾಶಿವ ನಗರದಲ್ಲಿರುವ ದಿವಂಗತ ರಾಮಕೃಷ್ಣ ಹೆಗಡೆ ಅವರ ನಿವಾಸಕ್ಕೆ ಭೇಟಿ ನೀಡಿ ಶ್ರೀಮತಿ ಶಕುಂತಲಾ ಹೆಗಡೆ ಅವರ ಆರೋಗ್ಯ ವಿಚಾರಿಸಿದರು. ಹೆಗಡೆ ಅವರ ಪುತ್ರಿಯರಾದ ಮಮತಾ, ಸಮತಾ, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ, ಮಾಜಿ ಸಚಿವ ಬಿ.ಎಲ್. ಶಂಕರ್ ಹಾಜರಿದ್ದರು.

## ಮಳೆ ಹಾನಿ ತಡೆಯಲು ಸಿದ್ದತೆ: ಡಿಸಿಎಂ

ಬೆಂಗಳೂರು: "ಇಡೀ ಬೆಂಗಳೂರಿನಾದ್ಯಂತ ಅಪಾಯಕಾರಿ ಯಾಗಿರುವ ಕಾಂಪೌಂಡ್ ಗಳ ಪಕ್ಕ ಇರುವ ಬೀದಿ ಬದಿ ವ್ಯಾಪಾರಿಗಳನ್ನು ತೆರವುಗೊಳಿಸಿ ಎಂದು ಸೂಚನೆ ನೀಡಲಾಗಿದೆ. ಇಂತಹ ಪ್ರದೇಶಗಳನ್ನು ಗುರುತಿಸಿ ಎಂದು ಈಗಾಗಲೇ ಅಧಿಕಾರಿಗಳಿಗೆ ಸೂಚಿಸಲಾಗಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಗುರುವಾರದಂದು ಪ್ರತಿಕ್ರಿಯೆ ನೀಡಿದರು.

ಅಧಿಕಾರಿಗಳ ನಿರ್ಲಕ್ಷ್ಯದಿಂದ ಅವಘಡ ಸಂಭವಿಸಿದೆಯೇ ಎಂದು ಕೇಳಿದಾಗ, "ಈ ದುರ್ಘಟನೆ ಸಂಭವಿಸಬಾರದಿತ್ತು, ಆದರೂ ಸಂಭವಿಸಿದೆ ಯಾವ ಅಧಿಕಾರಿಗಳ ನಿರ್ಲಕ್ಷ್ಯ ಎಂದು ನಾನು ಹೇಳುವುದಿಲ್ಲ. ವಾಜಪೇಯಿ (ಬೌರಿಂಗ್) ಆಸ್ಪತ್ರೆಯ ಕಾಂಪೌಂಡ್ ಪಕ್ಕದಲ್ಲಿ ಮಣ್ಣಿನ ರಾಶಿ ಹಾಕಿದ್ದಾರೆ. ಇದರ ಒತ್ತಡ ತಾಳಲಾರದೆ ಕಾಂಪೌಂಡ್ ಕುಸಿದಿದೆ. ಈ ರಸ್ತೆಯಲ್ಲಿಯೂ ಯಾವ ವ್ಯಾಪಾರಿಗಳನ್ನು ಕೂರಿಸಬಾರದು ಎಂದು ಅಧಿಕಾರಿಗಳಿಗೆ ತಿಳಿಸಿದ್ದೇನೆ." ಎಂದರು.

"ಬೆಂಗಳೂರಿನ ಎಲ್ಲಾ ರಸ್ತೆಗಳಲ್ಲಿ ಇರುವ ದುರ್ಬಲ ಮರಗಳು, ಕೊಂಬೆಗಳನ್ನು ಕತ್ತರಿಸಲಾಗುವುದು. ಈಗಾಗಲೇ ಕೆಲಸ ಪ್ರಾರಂಭವಾಗಿದೆ. ಇದರ ಬಗ್ಗೆ ಪೊಲೀಸ್ ಹಾಗೂ ಬಿಬಿಎ ಅಧಿಕಾರಿಗಳು ಕೆಲಸ ಮಾಡಿ ಪಟ್ಟಿ ತಯಾರಿಸಿದ್ದಾರೆ. ಮಳೆಹಾನಿ ತಡೆಗೆ ಕಂಟ್ರೋಲ್ ರೂಮ್ ಸಹ ಅಣಿಯಾಗಿದೆ. ಅಧಿಕಾರಿಗಳು ಸಹ ಕಾರ್ಯಪ್ರವೃತ್ತರಾಗಿದ್ದಾರೆ" ಎಂದು ತಿಳಿಸಿದರು.

ಹವಾಮಾನ ಇಲಾಖೆಯವರು ಈ ವರ್ಷ ಮಳೆ ಕಡಿಮೆ ಬರುತ್ತದೆ ಎಂದು ಹೇಳಿದ್ದಾರೆ. ಇದರಿಂದ ಆಣೆಕಟ್ಟುಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗಲಿದೆ.

ನಂತರ ವಿದ್ಯುತ್ ಉತ್ಪಾದನೆ ಕುಸಿಯಲಿದೆ. ನಾನು ನಾಡಿದ್ದು ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡುತ್ತಿದ್ದೇನೆ. ಅಲ್ಲಿ ಎಲ್ಲಾ ಗೇಟ್ ಬದಲಿ ಕಾರ್ಯ



ಮುಕ್ತಾಯವಾಗಿದ್ದು, ನೀರಿನ ಶೇಖರಣೆ ಆರಂಭಿಸಬೇಕಿದೆ.

ಇನ್ನು ಕಾವೇರಿ ನೀರಿನ ವಿಚಾರದಲ್ಲಿ 177 ಟಿಎಂಸಿ ನೀರು ಹರಿಸಲೇಬೇಕು ಎಂದು ಸುಪ್ರೀಂ ಕೋರ್ಟ್ ಆದೇಶಿಸಿದೆ. ಈ ಕಾರಣಕ್ಕೆ ಮಳೆ ಚೆನ್ನಾಗಿ ಬರಲಿ ಎಂದು ನಾನು ದೇವರಲ್ಲಿ ಪ್ರಾರ್ಥನೆ ಮಾಡುತ್ತೇನೆ. ಹೆಚ್ಚಿನ ಮಳೆ ಬಂದರೆ ಅದನ್ನು ಎದುರಿಸಲು ಈಗಾಗಲೇ ಸಿದ್ಧತೆಯನ್ನು ಮಾಡಿಕೊಂಡಿದ್ದೇವೆ" ಎಂದು ಹೇಳಿದರು.

ಆದಷ್ಟು ಬೇಗ ಅಧಿಕಾರ ಹಂಚಿಕೆ ಗೊಂದಲ ಬಗೆಹರಿಸುವಿರಾ, ಮಲ್ಲಿಕಾರ್ಜುನ ಖರ್ಗೆ ಅವರು ಬದಲಾವಣೆ ಇಲ್ಲ ಎಂದಿದ್ದಾರೆ ಎಂದು ಕೇಳಿದಾಗ, "ಗೊಂದಲವೇ ಇಲ್ಲ. ನೀವುಗಳು ಏನಿದ್ದರೂ ಮಲ್ಲಿಕಾರ್ಜುನ ಖರ್ಗೆ ಸಾಹೇಬರನ್ನು ಕೇಳಿ. ನಾಯಕತ್ವ ಬದಲಾವಣೆ ವಿಚಾರದಲ್ಲಿ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ಇದು ಪಕ್ಷ ಹೈಕಮಾಂಡ್ ಗೆ ಬಿಟ್ಟ ವಿಚಾರ ಅವರು ತೀರ್ಮಾನ ಮಾಡುತ್ತಾರೆ" ಎಂದರು.



ಕನಕಪುರ ಮೆಗಾ ಡೈರಿಗೆ ನವದೆಹಲಿಯಲ್ಲಿ ಕೊಡಮಾಡಿರುವ ಪ್ರತಿಷ್ಠಿತ "16ನೇ ಸಿಐಐ ಆಹಾರ ಸುರಕ್ಷತಾ ಪ್ರಶಸ್ತಿ"ಯನ್ನು ಡೈರಿಯ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಪದಾಧಿಕಾರಿಗಳು ಬಮುಲ್ ಅಧ್ಯಕ್ಷರಾದ ಡಿ.ಕೆ. ಸುರೇಶ್ ಅವರಿಗೆ ಬೆಂಗಳೂರಿನಲ್ಲಿ ಗುರುವಾರ ಹಸ್ತಾಂತರಿಸಿದರು.

## ಗೋಡೆ ಕುಸಿದ ಸ್ಥಳಕ್ಕೆ ಲೋಕಾಯುಕ್ತರ ಭೇಟಿ: ಪರಿಶೀಲನೆ

ಬೆಂಗಳೂರು: ನಗರದ ಬೌರಿಂಗ್ ಆಸ್ಪತ್ರೆ ಆವರಣದಲ್ಲಿ ತಡೆಗೋಡೆ ಕುಸಿದ ಘಟನೆಗೆ ಸಂಬಂಧಿಸಿದಂತೆ ಲೋಕಾಯುಕ್ತರು ಗಂಭೀರವಾಗಿ ಗಮನ ಹರಿಸಿದ್ದಾರೆ. ಘಟನಾ ಸ್ಥಳಕ್ಕೆ ಲೋಕಾಯುಕ್ತ ಬಿಎಸ್ ಪಾಟೀಲ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಉಪಲೋಕಾಯುಕ್ತರಾದ ಕೆಎನ್ ಫಣೀಂದ್ರ ಹಾಗೂ ವೀರಪ್ಪ ಉಪಸ್ಥಿತರಿದ್ದರು.

ಪರಿಶೀಲನೆ ಬಳಿಕ ಮಾತನಾಡಿದ ಬಿಎಸ್ ಪಾಟೀಲ್, ಗೋಡೆ ಕುಸಿತಕ್ಕೆ ದುರ್ಬಲ ಫೌಂಡೇಶನ್ ಕಾರಣವಾಗಿರಬಹುದು ಎಂದು ಶಂಕೆ ವ್ಯಕ್ತಪಡಿಸಿದರು. "ನಗರದಲ್ಲಿ ಮಳೆ ಬಂದಾಗ ಈ ರೀತಿಯ ಅನಾಹುತಗಳು ಸಂಭವಿಸುವುದು ಸಾಮಾನ್ಯವಾಗುತ್ತಿದೆ. ಪ್ರತಿ ವರ್ಷ ಮಳೆ ಬರುತ್ತದೆ, ಆದರೂ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲಾಗುತ್ತಿಲ್ಲ," ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅವರು ಮುಂದುವರಿಸಿ, "ಇಲ್ಲಿ ಬದಿ ಬದಿ ವ್ಯಾಪಾರಿಗಳಿಗೆ ಅವಕಾಶ ನೀಡಿರುವುದರಿಂದ ಸಮಸ್ಯೆ ಹೆಚ್ಚಾಗಿದೆ. ಇದೇ ರೀತಿಯ ಘಟನೆಗಳು ಹಿಂದೆ ಸಹ ನಡೆದಿವೆ. ಆಸ್ಪತ್ರೆ ಆಡಳಿತವು ಅಪಾಯದ ಪ್ರದೇಶಗಳನ್ನು ಗುರುತಿಸಬೇಕಿತ್ತು. ಜೊತೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕೂಡ ಎಚ್ಚರ ವಹಿಸಬೇಕಿತ್ತು," ಎಂದರು.

ಈ ಕಾಮಗಾರಿಯನ್ನು ಯಾರು ನಿರ್ಮಿಸಿದ್ದಾರೆ, ಕಾಮಗಾರಿ ಗುಣಮಟ್ಟ ಹೇಗಿತ್ತು ಎಂಬುದರ ಕುರಿತು ಸಮಗ್ರ ತನಿಖೆ ನಡೆಸಲಾಗುತ್ತದೆ ಎಂದು ತಿಳಿಸಿದರು. "ಯಾರು ಗೋಡೆ ನಿರ್ಮಿಸಿದ್ದಾರೆ, ಹೇಗೆ ನಿರ್ಮಿಸಿದ್ದಾರೆ ಎಂಬ ಎಲ್ಲಾ ಮಾಹಿತಿಯನ್ನು ಸಂಗ್ರಹಿಸುತ್ತೇವೆ. ಇದೇ ರೀತಿಯ ಅಪಾಯಕರ ಗೋಡೆಗಳು ನಗರದಲ್ಲಿ ಎಲ್ಲೆಲ್ಲಿವೆ ಎಂಬುದನ್ನೂ ಪರಿಶೀಲಿಸಲಾಗುತ್ತದೆ," ಎಂದರು.

ಈ ಪ್ರಕರಣದಲ್ಲಿ ಲೋಕಾಯುಕ್ತರು ಸುಮೋಟೋ ಕೇಸ್ ದಾಖಲಿಸುವುದಾಗಿ ಘೋಷಿಸಿದ್ದಾರೆ. ಪ್ರತಿ ವಲಯದಲ್ಲಿರುವ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿರುವ ಇಂತಹ ಅಪಾಯಕರ ನಿರ್ಮಾಣಗಳನ್ನು ಗುರುತಿಸಬೇಕೆಂದು ಸೂಚಿಸಲಾಗಿದೆ. ಈ ಪ್ರಕರಣದಲ್ಲಿ ಇನ್‌ಚಾರ್ಜ್ ಆಗಿರುವ ಹರೀಶ್ ಕುಮಾರ್ ಅವರನ್ನು ಕಚೇರಿಗೆ ಕರೆಯಿಸಿ ವಿಚಾರಣೆ ನಡೆಸಲಾಗುತ್ತದೆ.

"ಒಂದು ಗಂಟೆ ಮಳೆ ಬಂದಿದ್ದಕ್ಕೆ ಈ ರೀತಿಯ ಘಟನೆ ಸಂಭವಿಸಿದೆ. ವಿಧಾನಸೌಧ ಸೇರಿದಂತೆ ಜನರು ಸಂಚರಿಸುವ ಎಲ್ಲ ಪ್ರಮುಖ ಸ್ಥಳಗಳ ಗೋಡೆಗಳನ್ನು ಪರಿಶೀಲನೆ ಮಾಡಬೇಕು," ಎಂದು ಬಿಎಸ್ ಪಾಟೀಲ್ ಸೂಚಿಸಿದರು.

ಈ ಸಂಬಂಧ ಪ್ರಕರಣ ದಾಖಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಲೋಕಾಯುಕ್ತರು ತಿಳಿಸಿದ್ದಾರೆ.

## ಮಳೆ: ಕೊನೆಗೂ ಎಚ್ಚೆತ್ತ ಜಿಬಿಎ

ಬೆಂಗಳೂರು: ನಗರದಲ್ಲಿ ನಿನ್ನೆ ಸಂಜೆ ಸುರಿದ ಆಲಿಕಲ್ಲು ಸಹಿತ ಭಾರೀ ಮಳೆಯ ಪರಿಣಾಮ ಜನಜೀವನ ಅಸ್ತವ್ಯಸ್ತಗೊಂಡಿದೆ. ಮಳೆಯ ಆರ್ಭಟಕ್ಕೆ ಹಲವು ಅನಾಹುತಗಳು ಸಂಭವಿಸಿದ್ದು, ಕೆಲವರು ಪ್ರಾಣ ಕಳೆದುಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮುಂಬರುವ ದಿನಗಳಲ್ಲಿ ಮಳೆ ಅನಾಹುತಗಳನ್ನು ತಡೆಗಟ್ಟಲು ತುರ್ತು ಸಿದ್ಧತೆಗಳನ್ನು ಕೈಗೊಂಡಿದೆ.

ಪ್ರಾಧಿಕಾರವು ಪ್ರಾಥಮಿಕ ಮತ್ತು ದ್ವಿತೀಯ ಹಂತದ ಮಳೆನೀರು ಕಾಲುವೆಗಳ ಶುದ್ಧೀಕರಣ ಹಾಗೂ ಪುನರುಜ್ಜೀವನ ಕಾರ್ಯಗಳನ್ನು ತುರ್ತುಗತಿಯಲ್ಲಿ ಕೈಗೊಳ್ಳಲು ನಿರ್ಧರಿಸಿದೆ. ವಿಶ್ವ ಬ್ಯಾಂಕ್ ನೆರವಿನಿಂದ 173 ಕಿಲೋಮೀಟರ್ ಉದ್ದದ ಹೊಸ ಮಳೆನೀರು ಕಾಲುವೆ ತಡೆಗೋಡೆ ನಿರ್ಮಾಣ ಹಾಗೂ 83 ಕಿಲೋಮೀಟರ್ ಕಾಲುವೆಗಳ ಮೇಲ್ದರ್ಜೆಗೇರಿಸುವ ಕಾಮಗಾರಿಗಳು ಪ್ರಗತಿಯಲ್ಲಿವೆ. ರಾಷ್ಟ್ರೀಯ ಅನಾಹುತ ನಿರ್ವಹಣಾ ನಿಧಿ ನೆರವಿನಿಂದ 31 ಅವಶ್ಯಕ ಸ್ಥಳಗಳಲ್ಲಿ ಕಲ್ವರ್ಟ್ ನಿರ್ಮಾಣ ನಡೆಯುತ್ತಿದೆ.

ನಗರದ ಕೆರೆಗಳಲ್ಲಿ ನೀರಿನ ನಿಯಂತ್ರಣಕ್ಕಾಗಿ 127 ಸ್ಥಳಗಳಲ್ಲಿ ನೀರು ಬಿಡುವ ದ್ವಾರಗಳನ್ನು ಅಳವಡಿಸಲಾಗುತ್ತಿದೆ. ಹೆಚ್ಚುವರಿ ಪಕ್ಕದ ಚರಂಡಿಗಳು ಮತ್ತು ಜಲ ಹರಿವು ದಾಟುವ ವ್ಯವಸ್ಥೆಗಳ ನಿರ್ಮಾಣಕ್ಕೂ ಕ್ರಮ ಕೈಗೊಳ್ಳಲಾಗಿದೆ. ಪ್ರಮುಖ ಪ್ರದೇಶಗಳಲ್ಲಿ ನೀರು ಒಳಹರಿವು ವ್ಯವಸ್ಥೆಗಳು ಹಾಗೂ ಮಣ್ಣು ತಡೆ ಸಾಧನಗಳನ್ನು ಅಳವಡಿಸಲಾಗುತ್ತಿದೆ. ಮುಂಗಾರು ಪೂರ್ವ ಶುದ್ಧೀಕರಣ ವೇಳಾಪಟ್ಟಿಯನ್ನು ಕಡ್ಡಾಯವಾಗಿ ಜಾರಿಗೊಳಿಸಲಾಗುತ್ತಿದ್ದು, ಅತಿಸೂಕ್ಷ್ಮ ಪ್ರದೇಶಗಳಲ್ಲಿ ವಿಶೇಷ ತಂಡಗಳನ್ನು ನಿಯೋಜಿಸಲಾಗಿದೆ.

ನಗರದ ವಿವಿಧ ಭಾಗಗಳಲ್ಲಿ ಭಾರೀ ಮಳೆ ದಾಖಲಾಗಿದ್ದು, ಕೇಂದ್ರ ಭಾಗದ ಕಾಟನ್‌ಪೇಟೆ, ಬಿನ್ನಿಪೇಟೆ, ಸಂಪಂಗಿರಾಮನಗರ, ಶಿವಾಜಿನಗರ ಹಾಗೂ ಸುಭಾಷ್ ನಗರ ಪ್ರದೇಶಗಳಲ್ಲಿ 92 ಮಿಲಿಮೀಟರ್ ಮಳೆ ದಾಖಲಾಗಿದೆ. ಉತ್ತರ ಭಾಗದ ಕೆಲವು ಪ್ರದೇಶಗಳಲ್ಲಿ ಕನಿಷ್ಠ 15 ಮಿಲಿಮೀಟರ್ ಮಳೆಯಾದರೆ, ಒಟ್ಟಾರೆ ಸರಾಸರಿ 55 ಮಿಲಿಮೀಟರ್ ಮಳೆ ಸುರಿದಿದೆ.

ಮಳೆಯ ಪರಿಣಾಮವಾಗಿ ಒಟ್ಟು 226 ಮರಗಳು ಧರೆಗುರುಳಿದ್ದು, 623 ಕೊಂಬೆಗಳು ಮುರಿದು ಬಿದ್ದಿವೆ. ತೆರವು ಕಾರ್ಯಕ್ಕಾಗಿ ನಗರ ಪಾಲಿಕೆಗಳಿಂದ 30 ತಂಡಗಳು ಹಾಗೂ ನಾಲ್ಕು ಕ್ರೇನ್‌ಗಳನ್ನು ನಿಯೋಜಿಸಲಾಗಿದೆ. ಅಗ್ನಿಶಾಮಕ ಇಲಾಖೆಯ 15 ತಂಡಗಳು, ರಾಜ್ಯ ವಿಪತ್ತು ಪ್ರತಿಕ್ರಿಯಾ ಪಡೆಗಿನ 4 ತಂಡಗಳು ಹಾಗೂ ಹೆಚ್ಚುವರಿ 10 ಖಾಸಗಿ ತಂಡಗಳು ಸಹ ಕಾರ್ಯನಿರ್ವಹಿಸುತ್ತಿವೆ.

ಮಧ್ಯಾಹ್ನದ ವೇಳೆಗೆ 150 ಮರಗಳು ಮತ್ತು 384 ಕೊಂಬೆಗಳು ತೆರವುಗೊಳಿಸಲ್ಪಟ್ಟಿದ್ದು, ಉಳಿದ ಕಾರ್ಯ ಮುಂದುವರಿದಿದೆ. ನಗರದಾದ್ಯಂತ 62ಕ್ಕೂ ಹೆಚ್ಚು ಪ್ರದೇಶಗಳಲ್ಲಿ ರಸ್ತೆಗಳಲ್ಲಿ ನೀರು ನಿಂತಿರುವ ಬಗ್ಗೆ ಮಾಹಿತಿ ಬಂದಿದೆ. ಮೂರು ಕಡೆ ಗೋಡೆ ಕುಸಿತ, 105 ಮನೆಗಳಿಗೆ ನೀರು ನುಗ್ಗಿರುವುದು ಹಾಗೂ ಒಂದು ಕಡೆ ಮೂಲಸೌಕರ್ಯ ಹಾನಿ ಸಂಭವಿಸಿದೆ.

## ಒಂದು ವಾರದೊಳಗೆ ಎತ್ತಿನಹೊಳೆ ಬಾಕಿ ಕಾಮಗಾರಿ ಪ್ರಾರಂಭ

ಬೆಂಗಳೂರು: "ಕೇಂದ್ರ ಪರಿಸರ ಇಲಾಖೆಯವರು ದಂಡ ಹಾಗೂ ಮಿಟಿಗೇಷನ್ ಪ್ಲಾನ್ ಸೇರಿ 257 ಕೋಟಿ ರೂಪಾಯಿ ಹಣ ಸಂದಾಯ ಮಾಡಬೇಕು ಎಂದು ಸೂಚಿಸಿದ್ದಾರೆ.

ಇಂದೇ ಈ ಹಣ ಪಾವತಿ ಮಾಡಿ ಎಂದು ಮಾರ್ಗದರ್ಶನ ನೀಡಿದ್ದೇನೆ. ಕಟ್ಟಿದ ಕೂಡಲೇ ಈ ವಾರದೊಳಗೆ ಎತ್ತಿನಹೊಳೆ ಕೆಲಸ ಪ್ರಾರಂಭ ಮಾಡಿ ಎಂದು ಗುತ್ತಿಗೆದಾರರಿಗೆ ಸೂಚಿಸಿದ್ದೇವೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಎತ್ತಿನಹೊಳೆ, ಮೇಕೆದಾಟು, ಭದ್ರಾ ಮೇಲ್ದಂಡೆ ವಿಚಾರವಾಗಿ ವಿಧಾನಸೌಧದಲ್ಲಿ ನಡೆದ ಸಭೆಯ ನಂತರ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು.

"ತುಮಕೂರು ಭಾಗದಲ್ಲೂ ಭೂಸ್ವಾಧೀನಕ್ಕೆ ಸರ್ವೆ ನಡೆಸಲು ಕ್ರಮ ತೆಗೆದುಕೊಳ್ಳಲಾಗುವುದು.



ಆದಷ್ಟು ಬೇಗ ಚಿಕ್ಕಬಳ್ಳಾಪುರ ಹಾಗೂ ಕೋಲಾರಕ್ಕೆ ನೀರನ್ನು ತೆಗೆದುಕೊಂಡು ಹೋಗಲಾಗುವುದು. ಎತ್ತಿನಹೊಳೆ ಯೋಜನೆಗೆ ಕೇಂದ್ರ ಪರಿಸರ ಇಲಾಖೆಯವರು ಒಂದಷ್ಟು ಷರತ್ತುಗಳನ್ನು ವಿಧಿಸಿ ಕಡತವನ್ನು ವಾಪಸ್ ಕಳುಹಿಸಿದ್ದರು. ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆಗೆ ಬದಲಿ ಭೂಮಿಯನ್ನು ಹಸ್ತಾಂತರ ಮಾಡಲಾಗುತ್ತಿದೆ. ಶೇ 10 ರಷ್ಟು ಭೂಮಿ ವರ್ಗಾವಣೆ ಬಾಕಿಯಿತ್ತು. ಮುಂದಿನ ಒಂದು ವಾರದೊಳಗೆ ಈ ಪ್ರಕ್ರಿಯೆ ನಡೆಯಲಿದೆ" ಎಂದರು.

"ಎತ್ತಿನಹೊಳೆ, ಭದ್ರಾ ಮೇಲ್ದಂಡೆ ಹಾಗೂ ಮೇಕೆದಾಟು ವಿಚಾರವಾಗಿ ಸಂಬಂಧಪಟ್ಟ ಶಾಸಕರ, ಅಧಿಕಾರಿಗಳ ಸಭೆ ನಡೆಸಲಾಯಿತು. ಕಂದಾಯ, ಅರಣ್ಯ ಹಾಗೂ ಗೃಹಸಚಿವರು ಭಾಗವಹಿಸಿದ್ದರು.

ಎತ್ತಿನಹೊಳೆ ವಿಚಾರವಾಗಿ ಕೇಂದ್ರ ಸರ್ಕಾರದ ಸಂಬಂಧಪಟ್ಟ ಸಚಿವರನ್ನು ಭೇಟಿಯಾಗಿದ್ದೆ. ನಾವು ಅವರ ಷರತ್ತುಗಳನ್ನು ಒಪ್ಪಿಕೊಂಡು ಮುಂದುವರೆದಿದ್ದೇವೆ" ಎಂದರು.

"ಮೇಕೆದಾಟು ವಿಚಾರವಾಗಿ ಡಿಪಿಆರ್ ಸಿದ್ಧವಾಗಿದ್ದು ಅದನ್ನು ಸಹ ಸಮಿತಿ ಮುಂದೆ ಸಲ್ಲಿಕೆ ಮಾಡಲಾಗುವುದು. ಮತ್ತೊಮ್ಮೆ ವೆಚ್ಚ ಪರಿಷ್ಕರಣೆ ಮಾಡಿದ್ದೇವೆ. ಸುಮಾರು 5,300 ಎಕರೆ ಜಮೀನನ್ನು ನಾವು ಅರಣ್ಯ ಇಲಾಖೆಗೆ ನೀಡಬೇಕಿದೆ. ಇದರ ಬಗ್ಗೆಯೂ ಕಂದಾಯ ಇಲಾಖೆ ಜೊತೆ ಮಾತನಾಡಲಾಗುವುದು" ಎಂದರು.

ಬೆಂಗಳೂರು ನಗರ ಪ್ರದಕ್ಷಿಣೆ ಬಗ್ಗೆ ಕೇಳಿದಾಗ, "ಈಗಾಗಲೇ ಶಿಥಿಲ ಮರಗಳು, ಹಾಗೂ ಕೊಂಬೆಗಳ ತೆರವಿಗೆ ಸೂಚಿಸಲಾಗಿದೆ. ನೀರು ಹರಿವಿಗೆ ತಡೆಗಳನ್ನು ತೆರವುಗೊಳಿಸಲಾಗುವುದು. ಮೊದಲು ಮಳೆ ಬರಲಿ ಎಂದು ಪ್ರಾರ್ಥನೆ ಮಾಡುತ್ತೇನೆ.

ನಾಳೆ ಮೂರು ಗಂಟೆಗೆ ಬೆಂಗಳೂರು ನಗರ ಸಂಚಾರ ಮಾಡಲಿದ್ದೇನೆ. ಒಂದೆರಡು ಮೇಲ್ಸೇತುವೆಗಳ ಲೋಕಾರ್ಪಣೆಗೂ ಪೂಜೆ ನೆರವೇರಿಸಲಾಗುವುದು" ಎಂದರು.

ಭಾರತ ಸಾರಥಿ 01/05/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಪರವಾನಗಿ ಭೂಮಾಪಕರ ಬೇಡಿಕೆ ಈಡೇರಿಸುವಂತೆ ಆಗ್ರಹ

ಚಿಕ್ಕಬಳ್ಳಾಪುರ

ರಾಜ್ಯದಲ್ಲಿ ಪರವಾನಗಿ ಭೂಮಾಪಕರ ಬೇಡಿಕೆಗಳನ್ನು ಈಡೇರಿಸಿ, ಅವರ ಸೇವೆಯನ್ನು ಕಾಯಂ ಮಾಡುವಂತೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ (ಸಂಘಟನೆಗಳ ಒಕ್ಕೂಟ) ವತಿಯಿಂದ ಜಿಲ್ಲಾಡಳಿತ ಭವನದ ಆವರಣದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ರಾಜ್ಯಾಧ್ಯಕ್ಷ ಅಗಲಗುರ್ಕಿ ಚಲಪತಿ ಅವರ ನೇತೃತ್ವದಲ್ಲಿ ನಡೆದ ಈ ಪ್ರತಿಭಟನೆಯಲ್ಲಿ ಪದಾಧಿಕಾರಿಗಳು ಹಾಗೂ ಸದಸ್ಯರು ಭಾಗವಹಿಸಿದರು. ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು ಎಂಬ ಬೇಡಿಕೆಯನ್ನು ಮುಂದಿಟ್ಟು ಪರವಾನಗಿ ಭೂಮಾಪಕರು ಒಂದು ತಿಂಗಳಿನಿಂದ ಮುಷ್ಕರ ನಡೆಸುತ್ತಿರುವುದರಿಂದ ಭೂಮಾಪನ ಇಲಾಖೆಯ ಕಾರ್ಯಗಳು ಸಂಪೂರ್ಣ ಸ್ಥಗಿತಗೊಂಡಿವೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.



ಜಮೀನಿನ ಅಳತೆ, ಫಾರಂ 10, ಪಹಣಿ ಅನ್ವಯ ಭೂಮಿ ಹದ್ದುಬಸ್ತು ಸೇರಿದಂತೆ ಇತರೆ ಅರ್ಜಿಗಳ ವಿಲೇವಾರಿ ತೀವ್ರವಾಗಿ ಅಡ್ಡಿಯಾಗುತ್ತಿದೆ. ಇದರಿಂದ ರೈತರು, ವಿಶೇಷವಾಗಿ ಬಡ ರೈತರು, ಭೂ ದಾಖಲೆಗಳಿಗಾಗಿ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಅಗಲಗುರ್ಕಿ ಚಲಪತಿ ಹೇಳಿದರು. ಸರ್ಕಾರ ತಕ್ಷಣವೇ ಭೂಮಾಪಕರ ಬೇಡಿಕೆಗಳನ್ನು ಈಡೇರಿಸದಿದ್ದರೆ ರಾಜ್ಯದಾದ್ಯಂತ ಪ್ರತಿಭಟನೆ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಪ್ರತಿಭಟನೆಯ ಬಳಿಕ ಅಗಲಗುರ್ಕಿ ಚಲಪತಿ ಅವರ ನೇತೃತ್ವದ ತಂಡ ಜಿಲ್ಲಾಧಿಕಾರಿ ಪ್ರಭು ಜಿ ಅವರಿಗೆ ಮನವಿ ಸಲ್ಲಿಸಿತು.

ಮನವಿಯಲ್ಲಿ ತಾಲ್ಲೂಕಿನ ನೂರಾರು ಕಂದಾಯ ಗ್ರಾಮಗಳಲ್ಲಿ ಹಕ್ಕು ಬದಲಾವಣೆ, ನಿವೇಶನ ಮತ್ತು ಜಮೀನು ಖರೀದಿ, ಹದ್ದುಬಸ್ತು, ನಕ್ಷೆ ತಯಾರಿ, ಪೋಡಿ ಮುಕ್ತ ಗ್ರಾಮ, 11ಇ ಸ್ಕೆಚ್, ಕೋರ್ಟ್ ಆದೇಶ ಸೇರಿದಂತೆ ಸಾವಿರಾರು ಅರ್ಜಿಗಳು ಬಾಕಿ ಉಳಿದಿರುವುದಾಗಿ ವಿವರಿಸಲಾಗಿದೆ.

ಮುಷ್ಕರನಿರತ ಭೂಮಾಪಕರ ಬೇಡಿಕೆಗಳನ್ನು ತಕ್ಷಣ ಪರಿಹರಿಸಿದರೆ ಮಾತ್ರ ರೈತರ ಅರ್ಜಿಗಳು ವಿಲೇವಾರಿ ಕಂಡು ಇಲಾಖೆಯ ಮೇಲಿನ ಒತ್ತಡ ಕಡಿಮೆಯಾಗುತ್ತದೆ. ಇಲ್ಲವಾದಲ್ಲಿ ಸಾರ್ವಜನಿಕರು ಇನ್ನಷ್ಟು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ ಎಂದು ಮನವಿಯಲ್ಲಿ ಎಚ್ಚರಿಸಲಾಗಿದೆ. ಈಗಾಗಲೇ ನಿಧಾನಗತಿಯಲ್ಲಿದ್ದ ಭೂಮಾಪನ ಇಲಾಖೆಯ ಕಾರ್ಯಗಳು, ಮುಷ್ಕರದ ನೆಪದಲ್ಲಿ ಇನ್ನಷ್ಟು ವಿಳಂಬವಾಗುತ್ತಿರುವುದಾಗಿ ಆರೋಪಿಸಲಾಗಿದೆ.

ಕಚೇರಿಗಳಿಗೆ ಹಣ ಪಾವತಿಸಿ ಅರ್ಜಿ ಸಲ್ಲಿಸಿದರೂ ಸರ್ವೆ ಕಾರ್ಯ ನಡೆಯದೆ ರೈತರು ಅಲೆದಾಡುತ್ತಿರುವುದು ಗಂಭೀರ ಸಮಸ್ಯೆಯಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಜಿಲ್ಲಾಧಿಕಾರಿಗಳ ಮುಖೇನ ಕಂದಾಯ ಸಚಿವರು ಹಾಗೂ ಮುಖ್ಯಮಂತ್ರಿಗಳಿಗೆ ಪ್ರತ್ಯೇಕ ಮನವಿ ಸಲ್ಲಿಸಿ, ಶೀಘ್ರವಾಗಿ ಭೂಮಾಪಕರ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಎ. ಬಾಬಾಜಾನ್, ಕೆ. ದೇವರಾಜ್, ಜಿ.ವಿ. ವೆಂಕಟಶಿವಪ್ಪ, ಎಂ. ಕಾಂತರಾಜು, ಮನೋಜ್ ಬಿ.ಎಂ. ಸೇರಿದಂತೆ ಸಂಘಟನೆಯ ಹಲವಾರು ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಡಿಪ್ಲೋಮಾ ಕೋರ್ಸ್ ಪ್ರವೇಶಕ್ಕೆ ಅವಕಾಶ

ತುಮಕೂರು

ಈ ಬಾರಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ನಗರದ ಹೊರವಲಯದ ಹಿರೇಹಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ) 2026–27ನೇ ಶೈಕ್ಷಣಿಕ ಸಾಲಿನ ಡಿಪ್ಲೋಮಾ ಕೋರ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಿದೆ.

ಹಿರೇಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಸ್ಥಾಪಿಸಲಾಗಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಎಸ್ಸೆಸ್ಸೆಲ್ಸಿ ಓದಿದ ವಿದ್ಯಾರ್ಥಿಗಳಿಗೆ ಡಿಪ್ಲೋಮಾ ಪ್ರವೇಶಾತಿ ಕಲ್ಪಿಸಿದ್ದು, ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಟಿಟಿಸಿ ಪ್ರಾಂಶುಪಾಲರಾದ ಜಯಪ್ರಕಾಶ್ ಜೆ.ಕೆ. ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಜಿಟಿಟಿಸಿ ತುಮಕೂರು ಕೇಂದ್ರದಲ್ಲಿ ಎಐಸಿಟಿಇ ಯಿಂದ ಮಾನ್ಯತೆ ಪಡೆದಿರುವ ಡಿಪ್ಲೋಮಾ ಕೋರ್ಸ್‌ಗಳಾದ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಮೆಕಾಟ್ರಾನಿಕ್ಸ್, ಡಿಪ್ಲೋಮಾ ಇನ್ ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್‌ನ ಪ್ರಥಮ ಸೆಮಿಸ್ಟರ್ ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ ಎಂದರು.

ಕೋರ್ಸ್ ಅವಧಿ 3+1 ವರ್ಷ (ಕೌಶಲ್ಯ ಹೆಚ್ಚಳ ಮತ್ತು ಕೈಗಾರಿಕಾ ಜ್ಞಾನಕ್ಕಾಗಿ ಒಂದು ವರ್ಷ ಕೈಗಾರಿಕಾ ತರಬೇತಿ ಕಡ್ಡಾಯ), ಮೆರಿಟ್ ಕಮ್ ರೋಸ್ಟರ್ ಸಿಸ್ಟಮ್ ಮೂಲಕ ಪ್ರವೇಶಾತಿ ನೀಡಲಾಗುವುದು.

ಕೌಶಲ್ಯ ಸಹಾಯವಾಣಿ: 155267 ಹಾಗೂ ಹೆಚ್ಚಿನ ವಿವರಗಳಿಗೆ ಪ್ರಾಂಶುಪಾಲರು, ಜಿಟಿಟಿಸಿ, ತುಮಕೂರು. ದೂ. ಸಂ: 0816–2009077, 9731351039, 8310215805, 9980344441 ರವರನ್ನು ಸಂಪರ್ಕಿಸುವಂತೆ ಅವರು ಮನವಿ ಮಾಡಿದರು.

# ‘ಜನಿವಾರ ಕತ್ತರಿಸಿರುವುದು ಖಂಡನೀಯ’

ವಿಜಯಪುರ

ಬೆಂಗಳೂರು ನಗರದ ಖಾಸಗಿ ಶಾಲೆ, ಹಾಗೂ ಚಿಕ್ಕಬಳ್ಳಾಪುರದಲ್ಲಿ ಪರೀಕ್ಷೆಯ ವೇಳೆ ಬ್ರಾಹ್ಮಣ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳ ಜನಿವಾರ ಕತ್ತರಿಸಿರುವ ಘಟನೆಯನ್ನು ತೀವ್ರವಾಗಿ ಖಂಡಿಸುತ್ತೇವೆ ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ನಿರ್ದೇಶಕ ಜಿ.ಸತೀಶ್ ಕುಮಾರ್ ಹೇಳಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಇಟಿ ಪರೀಕ್ಷೆಯ ವೇಳೆ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳ ಜನಿವಾರ ಕತ್ತರಿಸಿರುವುದು ನಮಗೆ ತುಂಬಾ ನೋವು ತಂದಿದೆ. ಪರೀಕ್ಷಾ ಕೇಂದ್ರಗಳಲ್ಲಿ ಎಲೆಕ್ಟ್ರಾನಿಕ್ ವಸ್ತು ಪತ್ತೆ ಹಚ್ಚಲು ಡಿಟೆಕ್ಟರ್ ಬಳಸುವಾಗ, ಕೇವಲ ನೂಲಿನಿಂದ ತಯಾರಿಸಿದ, ಹಾಗೂ ದ್ವಿಜತ್ವದ ಸಂಕೇತವಾದ ಜನಿವಾರವನ್ನು ಕತ್ತರಿಸಿರುವುದು ಅಕ್ಷಮ್ಯ.

ಸಹಸ್ರಾರು ರೂಪಾಯಿ ಖರ್ಚು ಮಾಡಿ, ಧರಿಸಲಾಗುವ, ವ್ಯಕ್ತಿಯ ಮರಣದ ಸಂದರ್ಭದಲ್ಲಿ ಮಾತ್ರ ಕತ್ತರಿಸಲಾಗುವ ಇಂತಹ ಪವಿತ್ರ ಸೂತ್ರವನ್ನು ಕತ್ತರಿಸಿರುವುದು ಜನಿವಾರ ಧರಿಸುವ ಎಲ್ಲಾ ಜನಾಂಗದವರಿಗೂ ನೋವುಂಟು ಮಾಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ತಪ್ಪಿತಸ್ಥರಿಗೆ ಶಿಕ್ಷೆ ನೀಡುವುದರ ಜೊತೆಗೆ, ಪುನಃ ಜನಿವಾರ ಧರಿಸುವ ಧಾರ್ಮಿಕ ಕಾರ್ಯಕ್ರಮದ ವೆಚ್ಚವನ್ನು ತಪ್ಪಿತಸ್ಥರಿಂದಲೇ ಕೊಡಿಸಬೇಕು. ಸರಕಾರ ಸೂಕ್ತ ಕ್ರಮ ಕೈಗೊಳ್ಳದಿದ್ದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

# ಫರಾಖಾನ್ ಜೊತೆ ಕ್ಲೂಕ್‌ನ ಹೊಸ ಬೇಸಿಗೆ ಪ್ರಯಾಣ ಅಭಿಯಾನ

ಬೆಂಗಳೂರು

ಕ್ಲೂಕ್ ಇಂಡಿಯಾ ತನ್ನ ಹೊಸ ಬೇಸಿಗೆ ಪ್ರವಾಸ ಅಭಿಯಾನವನ್ನು ಘೋಷಿಸಿದ್ದು, ಖ್ಯಾತ ಚಲನಚಿತ್ರ ನಿರ್ದೇಶಕಿ ಫರಾ ಖಾನ್ ಅವರೊಂದಿಗೆ ಕೈಜೋಡಿಸಿದೆ. ಈ ಅಭಿಯಾನವು ಭಾರತೀಯ ಪ್ರವಾಸಿಗರಿಗೆ ಪರಿಚಿತ ತಾಣಗಳನ್ನು ಹೊಸ ಹಾಗೂ ಅನಿರೀಕ್ಷಿತ ಅನುಭವಗಳ ಮೂಲಕ ಮರು ಅನ್ವೇಷಿಸಲು ಆಹ್ವಾನಿಸುತ್ತದೆ.

ಕ್ಲೂಕ್‌ನ ಅನ್ವೇಷಣೆಯ ಲೋಕಕ್ಕೆ ಸೇರಿರುವ ಫರಾ ಖಾನ್, ಹಿಂದೆ ಭೇಟಿ ನೀಡಿದ್ದ ಸಿಂಗಪೂರ್ ನಗರಕ್ಕೆ ಮತ್ತೆ ಪ್ರಯಾಣಿಸುತ್ತಾರೆ. ಆದರೆ ಈ ಬಾರಿ ಆಕೆ ನೋಡುವ ಸಿಂಗಪೂರ್ ಸಂಪೂರ್ಣವಾಗಿ ವಿಭಿನ್ನವಾಗಿದೆ.



ಅವರ ಜೊತೆಯಲ್ಲಿರುವ ವೈಯಕ್ತಿಕ ಅಡುಗೆಗಾರ ದಿಲೀಪ್ ಅವರಿಗೆ ಈ ನಗರ ಸಂಪೂರ್ಣ ಹೊಸ ಅನುಭವವನ್ನು ನೀಡುತ್ತದೆ.

ಫರಾ ಖಾನ್ ನಿರೀಕ್ಷೆಗಳೊಂದಿಗೆ ಪ್ರಯಾಣಿಸುತ್ತಿದ್ದರೆ, ದಿಲೀಪ್ ಯಾವುದೇ ಪೂರ್ವಕಲ್ಪನೆಗಳಿಲ್ಲದೆ ಪ್ರಯಾಣಿಸುತ್ತಾರೆ. ಈ ವಿಭಿನ್ನ ದೃಷ್ಟಿಕೋನಗಳು ಅವರ ಪ್ರಯಾಣವನ್ನು ಇನ್ನಷ್ಟು ವಿಶೇಷವಾಗಿಸುತ್ತವೆ. ಈ ಅಭಿಯಾನವು ಅನೇಕ ಭಾರತೀಯ ಪ್ರವಾಸಿಗರು ಅನುಭವಿಸುವ ಒಂದು ಸತ್ಯವನ್ನು ತೋರಿಸುತ್ತದೆ ಅಂದರೆ, ಅಚ್ಚುಮೆಚ್ಚಿನ ತಾಣಗಳಿಗೆ ಭೇಟಿ ನೀಡಿದಾಗಲೂ ಸಾಮಾನ್ಯವಾಗಿ ಅದೇ ಮಾರ್ಗಗಳು, ಶಿಫಾರಸುಗಳು ಮತ್ತು ಯೋಜನೆಗಳನ್ನು ಅನುಸರಿಸುವುದು.

ಈ ಅಭಿಯಾನದ ಮೂಲಕ ಕ್ಲೂಕ್ ಪ್ರವಾಸಿಗರಿಗೆ ಗೋಚರವಾಗುವುದಕ್ಕಿಂತ ಆಚೆಗೆ ನೋಡಲು ಹಾಗೂ ಯೋಜಿತ, ಸಹಜ, ಸ್ಥಳೀಯ ಮತ್ತು ಅನಿರೀಕ್ಷಿತ ಅನುಭವಗಳನ್ನು ಒಂದೇ ಸ್ಥಳದಲ್ಲಿ ಕಂಡುಕೊಳ್ಳಲು ಪ್ರೇರೇಪಿಸುತ್ತದೆ.

ಈ ಅಭಿಯಾನವು ಮೊದಲು ಸಾಮಾಜಿಕ ಜಾಲತಾಣದಲ್ಲಿ ಕಿರು ದೃಶ್ಯ ರೂಪದಲ್ಲಿ ಆರಂಭವಾಗಲಿದ್ದು, ಫರಾ ಖಾನ್ ಅವರ ಮುಂದಿನ ಪ್ರಯಾಣದ ಕಥೆಗೆ ಒಂದು ಮುನ್ನೋಟ ನೀಡುತ್ತದೆ. ಅವರ ಜೊತೆಯಲ್ಲಿ ಅವರ ವಿಶ್ವಾಸಾರ್ಹ ಅಡುಗೆಗಾರ ದಿಲೀಪ್ ಇರುತ್ತಾರೆ.

# ‘ಕಾಲಹರಣ ಮಾಡದೇ ಉತ್ತಮ ಭವಿಷ್ಯ ರೂಪಿಸಿಕೊಳ್ಳಿ’

ಬೆಂಗಳೂರು

“ಕಾಲೇಜು ದಿನಗಳು ಜೀವನದಲ್ಲಿ ಅತ್ಯಮೂಲ್ಯ. ಖುಷಿಯ ಜೊತೆಗೆ ಉತ್ತಮ ಭವಿಷ್ಯ ರೂಪಿಸಿಕೊಳ್ಳುವತ್ತ ಗಮನ ಹರಿಸಬೇಕು” ಎಂದು ದೀಕ್ಷಿತ್ ಶೆಟ್ಟಿ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಜಯನಗರದ ನ್ಯಾಷನಲ್ ಕಾಲೇಜು ಜಯನಗರನಲ್ಲಿ ನಡೆದ ವಾರ್ಷಿಕೋತ್ಸವ ‘ಕಲಾಮಂಥನ’ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, “ಕಾಲೇಜು ದಿನಗಳಲ್ಲಿ ಓದಿನ ಜೊತೆಗೆ ವಿವಿಧ ಚಟುವಟಿಕೆಗಳಲ್ಲಿ ತೊಡಗುವುದು ಸಹಜ. ಆದರೆ ಆ ಖುಷಿಯ ನಡುವೆ ನಮ್ಮ ಭವಿಷ್ಯವನ್ನು ಮರೆಯಬಾರದು. ಉಪನ್ಯಾಸಕರ ಮಾರ್ಗದರ್ಶನ ಪಡೆದು ಗುರಿ ಸಾಧನೆಗೆ ಮುಂದಾಗಬೇಕು” ಎಂದರು.

“ನನ್ನ ಮೊದಲ ಸಿನಿಮಾ ‘ಬ್ಲಿಂಕ್’ ನಿರ್ದೇಶಕರು ಇದೇ ಕಾಲೇಜಿನ ವಿದ್ಯಾರ್ಥಿ.



ಈ ಕಾಲೇಜು ಅನೇಕ ಕಲಾವಿದರನ್ನು ಕನ್ನಡ ಚಿತ್ರರಂಗಕ್ಕೆ ನೀಡಿದೆ. ಹೀಗಾಗಿ ಈ ಸಂಸ್ಥೆಗೆ ನಾನು ಸದಾ ಋಣಿ” ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾಲೇಜಿನ ವಾರ್ಷಿಕ ವರದಿ ಮಂಡನೆ ಮಾಡಲಾಯಿತು. ವಾರ್ಷಿಕ ಸಂಚಿಕೆಯನ್ನು ಬಿಡುಗಡೆಗೊಳಿಸಲಾಯಿತು. ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಕ್ರೀಡಾ ಕ್ಷೇತ್ರಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಎನ್‌ಇಎಸ್ ಆಫ್ ಕರ್ನಾಟಕದ ಕಾರ್ಯದರ್ಶಿ ವಿ.ವೆಂಕಟಶಿವಾರೆಡ್ಡಿ, ಕಾಲೇಜಿನ ಚೇರ್ಮನ್ ಡಾ. ಪಿ.ಎಲ್. ವೆಂಕಟರಾಮರೆಡ್ಡಿ, ಬಸವನಗುಡಿ ನ್ಯಾಷನಲ್ ಪದವಿ ಪೂರ್ವ ಕಾಲೇಜಿನ ಚೇರ್ಮನ್ ರಾಮ ಮೋಹನ್, ಆಡಳಿತ ಮಂಡಳಿ ಸದಸ್ಯರು, ಪ್ರಾಂಶುಪಾಲೆ ಡಾ. ಸಿ. ವಿಜಯಲಕ್ಷ್ಮಿ, ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಶಾಲೆಗಳಲ್ಲಿ ಪತ್ರಿಕೆಗಳ ಓದು ಕಡ್ಡಾಯಗೊಳಿಸಿದ ಸರ್ಕಾರದ ಕ್ರಮಕ್ಕೆ ಕೆಯುಡಬ್ಲ್ಯೂಜೆ ಸ್ವಾಗತ

ಬೆಂಗಳೂರು

ಶಾಲೆಗಳಲ್ಲಿ ಪತ್ರಿಕೆಗಳ ಪ್ರಮುಖ ಸುದ್ದಿಗಳನ್ನು ಪ್ರತಿನಿತ್ಯ ಓದುವ ಕ್ರಮ ಕಡ್ಡಾಯ ಮಾಡಿರುವ ಸರ್ಕಾರದ ಕ್ರಮವನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂಜೆ) ಸ್ವಾಗತಿಸಿದೆ.

ಶಾಲೆಗಳಲ್ಲಿ ಓದುವ ಮತ್ತು ಬೋರ್ಡ್ ಮೇಲೆ ಬರೆಯುವ, ನೋಟೀಸ್ ಬೋರ್ಡ್ ನಲ್ಲಿ ಹಾಕುವ ಅಭ್ಯಾಸವು ಮಾಸುತ್ತಿದೆ. ಮೊಬೈಲ್ ಯುಗದ ಪ್ರಭಾವದಲ್ಲಿ ಹಿಂದಿನ ಪದ್ದತಿಗಳು ಮರೆತು ಹೋಗುತ್ತಿರುವ ಈ ಹೊತ್ತಿನಲ್ಲಿ ಸರ್ಕಾರದ ಕ್ರಮ ಅಗತ್ಯವಿತ್ತು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ತಿಳಿಸಿದ್ದಾರೆ.

ಸರ್ಕಾರ ಅಲ್ಲಿನ ಸರ್ಕಾರಿ ಶಾಲೆಗಳಲ್ಲಿ ದಿನಪತ್ರಿಕೆ ಓದುವುದನ್ನು ಡಿಸೆಂಬರ್/2025 ರಲ್ಲಿ ಕಡ್ಡಾಯ ಮಾಡಿದ್ದು, ಇದೇ ರೀತಿಯಲ್ಲಿ ರಾಜ್ಯ ಸರ್ಕಾರ ಕೂಡ ಕ್ರಮಕೈಗೊಳ್ಳುವಂತೆ ಆಗ್ರಹಿಸಿ ಕೆಯುಡಬ್ಲ್ಯೂಜೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿತ್ತು. ಈ ಬಗ್ಗೆ ಮುಖ್ಯಮಂತ್ರಿಗಳಿಗೂ ಪ್ರತ್ಯೇಕವಾಗಿ ಮನವಿ ಮಾಡಿತ್ತು.

ಪರಿಣಿತರ ಅಭಿಪ್ರಾಯ ಮತ್ತು ಕೆಯುಡಬ್ಲ್ಯೂಜೆ ಮನವಿಗೆ ರಾಜ್ಯ ಸರ್ಕಾರ ಮನ್ನಣೆ ನೀಡಿ, ಈ ನಿಟ್ಟಿನಲ್ಲಿ ಕೂಡಲೇ ಕ್ರಮ ತೆಗೆದುಕೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಶಿಕ್ಷಣ ಸಚಿವ ಮಧುಬಂಗಾರಪ್ಪ ಅವರನ್ನು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅಭಿನಂದಿಸಿದ್ದಾರೆ.

# ವಾಹನ್ ಪ್ಲೇಸ್‌ಮೆಂಟ್ ಲೀಗ್ ಆರಂಭ

ಬೆಂಗಳೂರು

ವಾಹನ್.ಎಐ ಸಂಸ್ಥೆಯು ವಾಹನ್ ಪ್ಲೇಸ್‌ಮೆಂಟ್ ಲೀಗ್ 2026 ಅನ್ನು ಅಧಿಕೃತವಾಗಿ ಆರಂಭಿಸಿದ್ದು, ಕರ್ನಾಟಕ ಸೇರಿದಂತೆ ದೇಶದಾದ್ಯಂತ ಇರುವ ವಾಹನ್ ನಾಯಕರಿಗೆ ಸ್ಪರ್ಧಿಸಲು ಆಹ್ವಾನ ನೀಡಿದೆ. ರೂ.1 ಕೋಟಿಗೂ ಅಧಿಕ [illegible]




ಬಹುಮಾನಗಳೊಂದಿಗೆ ನಡೆಯುವ ಈ ಲೀಗ್‌ನಲ್ಲಿ ಮಹೀಂದ್ರಾ ಎಕ್ಸ್ ಯುವಿ 700, ಟಾಟಾ ನೆಕ್ಸಾನ್, ಟಾಟಾ ಪಂಚ್, ಹಾರ್ಲೆ–ಡೇವಿಡ್ಸನ್ ಎಕ್ಸ್ 440 ಹಾಗೂ ಬಿಎಂಡಬ್ಲ್ಯು ಜಿ 310 ಆರ್ ಆರ್ ಮೊದಲಾದ ಆಕರ್ಷಕ ಬಹುಮಾನಗಳು ಸೇರಿವೆ. ಈ ಸ್ಪರ್ಧೆ ಉದ್ಯೋಗ ನೇಮಕಾತಿ ಕ್ಷೇತ್ರದಲ್ಲಿ ಆದಾಯ ಹಾಗೂ ವ್ಯವಹಾರ ವೃದ್ಧಿಗೆ ಮಹತ್ವದ ಅವಕಾಶ ಒದಗಿಸುತ್ತದೆ.

ಸಂಸ್ಥೆಯ ಮಾಹಿತಿ ಪ್ರಕಾರ, ವೇದಿಕೆಯಲ್ಲಿ ಉತ್ತಮ ಸಾಧನೆ ತೋರಿದ ಕೆಲ ವಾಹನ್ ನಾಯಕರು ಈಗಾಗಲೇ ತಿಂಗಳಿಗೆ ರೂ.7 ಲಕ್ಷದಿಂದ ರೂ.15 ಲಕ್ಷದವರೆಗೆ ಆದಾಯ ಗಳಿಸುತ್ತಿದ್ದು, ಈ ಲೀಗ್ ನೀಡುವ ಅವಕಾಶದ ವ್ಯಾಪ್ತಿಯನ್ನು ಸ್ಪಷ್ಟಪಡಿಸುತ್ತದೆ.

ವಾಹನ್ ಪ್ಲೇಸ್‌ಮೆಂಟ್ ಲೀಗ್ 2026 ಮಾರ್ಚ್ 23ರಿಂದ ಮೇ 31ರವರೆಗೆ 10 ವಾರಗಳ ಕಾಲ ನಡೆಯಲಿದ್ದು, ಕಾರ್ಯಕ್ಷಮತೆಯನ್ನು ನಿಯೋಜನೆ, ನಿರಂತರತೆ ಹಾಗೂ ಚುರುಕು ಕಾರ್ಯಗತಗೊಳಿಸುವಿಕೆಯ ಆಧಾರದ ಮೇಲೆ ಮೌಲ್ಯಮಾಪನ ಮಾಡಲಾಗುತ್ತದೆ.

ದೇಶದಾದ್ಯಂತ 1000ಕ್ಕೂ ಹೆಚ್ಚು ವಾಹನ್ ನಾಯಕರು 20ಕ್ಕೂ ಅಧಿಕ ಪ್ರಮುಖ ಉದ್ಯೋಗದಾತರೊಂದಿಗೆ ವಿವಿಧ ಉದ್ಯೋಗ ವಿಭಾಗಗಳಲ್ಲಿ ಸ್ಪರ್ಧಿಸಲಿದ್ದು, ಇದುವರೆಗಿನ ಅತ್ಯಂತ ಸ್ಪರ್ಧಾತ್ಮಕ ಹಾಗೂ ಚುರುಕಾದ ಪ್ಲೇಸ್‌ಮೆಂಟ್ ಲೀಗ್ ಆಗಿ ರೂಪುಗೊಳ್ಳುತ್ತಿದೆ.

# ‘ಫ್ರೀಡಂ ಆಯಿಲ್’ ಮತ್ತು ‘ಕರುನಾಡ ಸ್ವಾದ’ ಸಹಭಾಗಿತ್ವ

ಬೆಂಗಳೂರು

ಫ್ರೀಡಂ ಹೆಲ್ದಿ ಕುಕಿಂಗ್ ಆಯಿಲ್ ತಯಾರಕರಾದ ಜೆಮಿನಿ ಎಡಿಬಲ್ಸ್ ಅಂಡ್ ಫ್ಯಾಟ್ಸ್ ಇಂಡಿಯಾ ಲಿಮಿಟೆಡ್ ಕರ್ನಾಟಕದ ಮರೆಯಾಗಿರುವ ಸಾಂಪ್ರದಾಯಿಕ ಅಡುಗೆಗಳನ್ನು ನೆನಪಿಸಿಕೊಳ್ಳಲು ಮತ್ತು ಆಚರಿಸಲು ರಾಜ್ಯಮಟ್ಟದ ಬೃಹತ್ ಅಭಿಯಾನ ‘ಕರುನಾಡ ಸ್ವಾದ’ ಆಯೋಜಿಸಿತ್ತು. ಈ ಕಾರ್ಯಕ್ರಮದಲ್ಲಿ ಕರ್ನಾಟಕದ ಅತ್ಯುತ್ತಮ ಅಡುಗೆಯ ಪ್ರತಿಭೆಯನ್ನು ವಿಜೇತರನ್ನಾಗಿ ಘೋಷಿಸಲಾಯಿತು.

ಮೊಟ್ಟಮೊದಲ ಬಾರಿಗೆ ಇಂತಹ ವಿಶಿಷ್ಟ ಪಾಕಶಾಲಾ ಚಳವಳಿಯನ್ನು ವಿನ್ಯಾಸಗೊಳಿಸಲಾಗಿದ್ದು, ‘ಕರುನಾಡ ಸ್ವಾದ’ ಅಭಿಯಾನವು ಉತ್ತರ ಮತ್ತು ದಕ್ಷಿಣ



ಕರ್ನಾಟಕದಾದ್ಯಂತ 77 ಪಟ್ಟಣಗಳಲ್ಲಿ ಸಂಚರಿಸಿದೆ. ಈ ಮೂಲಕ ಮನೆಮಂದಿ ಹಾಗೂ ಆಹಾರ ಪ್ರಿಯರನ್ನು ಆಹ್ವಾನಿಸಿ, ಸ್ಥಳೀಯ ಸಮುದಾಯಗಳಲ್ಲಿ ಬೇರೂರಿರುವ ಮತ್ತು ಮರೆಯಾಗಿರುವ ಸಾಂಪ್ರದಾಯಿಕ ಪಾಕವಿಧಾನಗಳನ್ನು ಹೊರತರಲು ವೇದಿಕೆ ಕಲ್ಪಿಸಲಾಯಿತು. ಸ್ಥಳೀಯ ರುಚಿಗಳು, ಪದಾರ್ಥಗಳು ಮತ್ತು ತಯಾರಿಕಾ ಶೈಲಿಯನ್ನು ಪ್ರತಿಬಿಂಬಿಸುವ ಅಪ್ರತಿಮ ಹಾಗೂ ಅಜ್ಞಾತ ಸಾಂಪ್ರದಾಯಿಕ ಖಾದ್ಯಗಳನ್ನು ಮರುಶೋಧಿಸುವುದು ಈ ಉಪಕ್ರಮದ ಮುಖ್ಯ ಉದ್ದೇಶವಾಗಿತ್ತು.

ಈ ಕಾರ್ಯಕ್ರಮವು ತಾಲೂಕು ಮಟ್ಟದ ಚಟುವಟಿಕೆಗಳು, ಎರಡು ಸೆಮಿಫೈನಲ್ ಮತ್ತು ಬೆಂಗಳೂರಿನಲ್ಲಿ ನಡೆದ ಅಂತಿಮ ಸುತ್ತನ್ನು ಒಳಗೊಂಡಿತ್ತು. ಸೆಮಿಫೈನಲ್ನಲ್ಲಿ ಸ್ಪರ್ಧಿಗಳು ನೇರ ಅಡುಗೆ ಮೂಲಕ ಸ್ಪರ್ಧಿಸಿದರು.

ಅಂತಿಮವಾಗಿ 26 ಸ್ಪರ್ಧಿಗಳು ‘ಕರ್ನಾಟಕ ಸೂಪರ್ ಚೆಫ್’ ಪಟ್ಟಕ್ಕಾಗಿ ತಮ್ಮ ಸಾಂಪ್ರದಾಯಿಕ ಪಾಕವಿಧಾನಗಳನ್ನು ಪ್ರದರ್ಶಿಸುವ ಮೂಲಕ ಕಠಿಣ ಪೈಪೋಟಿ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಫ್ರೀಡಂ ಹೆಲ್ದಿ ಕುಕಿಂಗ್ ಆಯಿಲ್ನ ಮಾರಾಟ ಮತ್ತು ಮಾರುಕಟ್ಟೆ ವಿಭಾಗದ ಹಿರಿಯ ಉಪಾಧ್ಯಕ್ಷರಾದ ಪಿ. ಚಂದ್ರಶೇಖರ ರೆಡ್ಡಿ,”ಉಇಈ ಇಂಡಿಯಾದಲ್ಲಿ, ನಾವು ಗ್ರಾಹಕರೊಂದಿಗೆ ಬೆರೆಯುವ ಪ್ರಮುಖ ಮಾಧ್ಯಮವೇ ಆಹಾರ. ‘ಕರುನಾಡ ಸ್ವಾದ’ ಒಂದು ಶಕ್ತಿಯುತ ವೇದಿಕೆಯಾಗಿದ್ದು, ಆಧುನಿಕ ಅಡುಗೆಮನೆಗಳಿಂದ ಮಾಯವಾಗುತ್ತಿರುವ ಕರ್ನಾಟಕದ ಪಾಕಶಾಲಾ ಪರಂಪರೆಯನ್ನು ಮರುಶೋಧಿಸಲು ಸಮುದಾಯಗಳನ್ನು ಪ್ರೋತ್ಸಾಹಿಸುತ್ತದೆ. ದೃಢವಾದ ಸಂಸ್ಕೃತಿ ಮತ್ತು ಸಮುದಾಯದ ಭಾಗವಹಿಸುವಿಕೆಯನ್ನು ಬೆಂಬಲಿಸಲು ನಾವು ಹೆಮ್ಮೆಪಡುತ್ತೇವೆ” ಎಂದರು.



ಮಂಗಳವಾರ ನವದೆಹಲಿಯಲ್ಲಿ ಸಚಿವ ಕೆ.ಎಚ್.ಮುನಿಯಪ್ಪ ಅವರು ಕಾಂಗ್ರೆಸ್‌ನ ಕೆ.ಸಿ.ವೇಣುಗೋಪಾಲ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

# ದೇಶಾದ್ಯಂತ 170 ಹೊಸ ಶಾಖೆಗಳ ವಿಸ್ತರಣೆ

ಮುಂಬೈ

ಪೀರಾಮಲ್ ಫೈನಾನ್ಸ್ ಸಂಸ್ಥೆ 2026ನೇ ಹಣಕಾಸು ವರ್ಷದಲ್ಲಿ ಗಮನಾರ್ಹ ಸಾಧನೆ ಮಾಡಿದ್ದು, ರೂ.1,506 ಕೋಟಿ ತೆರಿಗೆ ನಂತರದ ಲಾಭ ದಾಖಲಿಸಿದೆ. ಇದು ಕಳೆದ ವರ್ಷದ ಹೋಲಿಕೆಯಲ್ಲಿ ಶೇಕಡಾ 210ರಷ್ಟು ಹೆಚ್ಚಳವಾಗಿದೆ.ಮಾರ್ಚ್ ತ್ರೈಮಾಸಿಕದಲ್ಲೇ ಲಾಭ ರೂ.502 ಕೋಟಿಗೆ ಏರಿಕೆಯಾಗಿದ್ದು, ಇದು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇಕಡಾ 390ರಷ್ಟು ಹೆಚ್ಚಾಗಿದೆ.

ಕಂಪನಿಯ ನಿರ್ವಹಣೆಯಲ್ಲಿರುವ ಒಟ್ಟು ಆಸ್ತಿಗಳ ಮೌಲ್ಯವು ಶೇಕಡಾ 25ರಷ್ಟು ಏರಿಕೆಯಾಗಿ ರೂ.1,01,230 ಕೋಟಿಗಳಿಗೆ ತಲುಪಿದೆ. ಈ ಬೆಳವಣಿಗೆಗೆ ಪ್ರಮುಖ ಕಾರಣವಾಗಿ ಚಿಲ್ಲರೆ ಸಾಲ ವ್ಯವಹಾರ



ಹೊರಹೊಮ್ಮಿದ್ದು, ಇದು ಈಗ ಒಟ್ಟು ಆಸ್ತಿ ಮೌಲ್ಯದ ಶೇಕಡಾ 85ರಷ್ಟು ಪಾಲು ಹೊಂದಿದೆ. ಇದು ಸಂಸ್ಥೆಯು ಚಿಲ್ಲರೆ ವಲಯವನ್ನು ಆಧಾರವಾಗಿಟ್ಟುಕೊಂಡು ತನ್ನ ಸಾಲ ಪೋರ್ಟ್ಫೋಲಿಯೊವನ್ನು ನಿರ್ಮಿಸುತ್ತಿರುವುದನ್ನು ತೋರಿಸುತ್ತದೆ.

ಮುಂದಿನ ಹಣಕಾಸು ವರ್ಷದಲ್ಲಿ ಸಂಸ್ಥೆ ಶೇಕಡಾ 25ರಷ್ಟು ಆಸ್ತಿ ಬೆಳವಣಿಗೆ ಹಾಗೂ ಶೇಕಡಾ 50ರಷ್ಟು ಲಾಭ ಏರಿಕೆಯನ್ನು ಗುರಿಯಾಗಿಸಿಕೊಂಡಿದೆ. ಜೊತೆಗೆ, ಆಸ್ತಿಗಳ ಮೇಲಿನ ಆದಾಯವನ್ನು ಶೇಕಡಾ 2.1ರಿಂದ 2.5ಕ್ಕೆ ಹೆಚ್ಚಿಸುವ ನಿರೀಕ್ಷೆಯಿದೆ.

ಈ ಬೆಳವಣಿಗೆಯನ್ನು ಸಾಧಿಸಲು, ಗ್ರಾಮೀಣ ಪ್ರದೇಶಗಳಲ್ಲಿ ತನ್ನ ವ್ಯಾಪ್ತಿಯನ್ನು ವಿಸ್ತರಿಸುವತ್ತ ಗಮನಹರಿಸಿರುವ ಸಂಸ್ಥೆ, ದೇಶಾದ್ಯಂತ 170 ಹೊಸ ಶಾಖೆಗಳನ್ನು ಆರಂಭಿಸಲು ಯೋಜಿಸಿದೆ.

# ಅಪಘಾತ: ಬೈಕ್ ಸವಾರ ಸಾವು

ದೊಡ್ಡಬಳ್ಳಾಪುರ

ಟಾಟಾ ಏಸ್ ವಾಹನ ಮತ್ತು ದ್ವಿಚಕ್ರ ವಾಹನದ ನಡುವೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಬೈಕ್ ಸವಾರ ಮೃತಪಟ್ಟ ಘಟನೆ ನಡೆದಿದೆ.

ದೊಡ್ಡಬಳ್ಳಾಪುರದ ಡಿ ಕ್ರಾಸ್ ಬಳಿ ಈ ಅಪಘಾತ ಸಂಭವಿಸಿದ್ದು, ರಾಜು (28) ಮೃತ ದುರ್ದೈವಿ ಎಂದು ಗುರುತಿಸಲಾಗಿದೆ. ಅಪಘಾತದ ವೇಳೆ ತಲೆಗೆ ಗಂಭೀರ ಗಾಯಗೊಂಡ ರಾಜುವನ್ನು ತಕ್ಷಣ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ಪೊಲೀಸರ ಮಾಹಿತಿ ಪ್ರಕಾರ, ಮೃತರು ಅಪಘಾತ ಸಮಯದಲ್ಲಿ ಹೆಲ್ಮೆಟ್ ಧರಿಸಿರಲಿಲ್ಲ. ಇತ್ತೀಚಿನ ಎರಡು ದಿನಗಳ ಅವಧಿಯಲ್ಲಿ ಹೆಲ್ಮೆಟ್ ಧರಿಸದ ಕಾರಣದಿಂದಲೇ ಮೂರು ಸಾವುಗಳು ಸಂಭವಿಸಿರುವುದು ಆತಂಕಕ್ಕೆ ಕಾರಣವಾಗಿದೆ.

ಈ ಘಟನೆ ದೊಡ್ಡಬಳ್ಳಾಪುರ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿತ್ತು.

# ಚೇತಕ್ ದ್ವಿಚಕ್ರ ವಾಹನ ತಂತ್ರಜ್ಞಾನದಲ್ಲಿ ಹೊಸ ಹೆಜ್ಜೆ

ಬೆಂಗಳೂರು

ಭಾರತದ ಪ್ರಮುಖ ದ್ವಿಚಕ್ರ ಮತ್ತು ತ್ರಿಚಕ್ರ ವಾಹನ ತಯಾರಿಕಾ ಸಂಸ್ಥೆಯಾದ ಬಜಾಜ್ ಆಟೋ ಲಿಮಿಟೆಡ್ ತನ್ನ ಚೇತಕ್ ದ್ವಿಚಕ್ರ ವಾಹನ ಸರಣಿಯಲ್ಲಿ ಗಮನಾರ್ಹ ನವೀಕರಣಗಳನ್ನು ಪ್ರಕಟಿಸಿದೆ. ದೀರ್ಘಕಾಲಿಕ ದೃಢತೆ ಮತ್ತು ವಿಶ್ವಾಸಾರ್ಹತೆಗೆ ಪ್ರಸಿದ್ಧಿಯಾದ ಚೇತಕ್, ಈಗ ತಂತ್ರಜ್ಞಾನ ಹಾಗೂ ಸಂಪರ್ಕ ಸೌಲಭ್ಯಗಳಲ್ಲಿ ಹೊಸ ಮಟ್ಟವನ್ನು ಸ್ಥಾಪಿಸಿದೆ.

ಚೇತಕ್ ವಿದ್ಯುತ್ ಚಾಲಿತ ದ್ವಿಚಕ್ರ ವಾಹನಗಳು ಇನ್ನು ಮುಂದೆ ‘ಸಿ ಸರಣಿ’ ಎಂಬ ಹೆಸರಿನಲ್ಲಿ ಲಭ್ಯವಾಗಲಿದ್ದು, ಸಿ 35, ಸಿ 30 ಮತ್ತು ಸಿ 25 ಎಂಬ ಮೂರು ವಿಭಾಗಗಳಲ್ಲಿ ದೊರೆಯಲಿವೆ.




ಮುಖ್ಯ ಮಾದರಿಯಾದ ಸಿ 35 01 ಈಗ ನಕ್ಷೆ ಮಾರ್ಗದರ್ಶನ ಸೌಲಭ್ಯವನ್ನು ಒಳಗೊಂಡಿದ್ದು, ಇದು ಚೇತಕ್ ಮೊಬೈಲ್ ಅನ್ವಯಿಕೆಯಲ್ಲಿ ಸಂಯೋಜಿಸಲಾಗಿದೆ. ಸುಲಭ ಹಾಗೂ ಅಡಚಣೆರಹಿತ ದಾರಿದೀಪ ವ್ಯವಸ್ಥೆಗೆ ಗ್ರಾಹಕರ ಬೇಡಿಕೆಯ ಮೇರೆಗೆ ಈ ಸುಧಾರಣೆ ಮಾಡಲಾಗಿದೆ.

ಎಲ್ಲಾ ಮಾದರಿಗಳಲ್ಲಿಯೂ ಗರಿಷ್ಠ ವೇಗವನ್ನು ಹೆಚ್ಚಿಸಲಾಗಿದೆ. ಸಿ 35 01 ಮತ್ತು ಸಿ 35 02 ಮಾದರಿಗಳು ಈಗ ಗಂಟೆಗೆ 80 ಕಿಲೋಮೀಟರ್ ವೇಗವನ್ನು ಹೊಂದಿವೆ (ಹಿಂದೆ 73 ಕಿ.ಮೀ). ಸಿ 35 03 ಮತ್ತು ಸಿ 30 01 ಮಾದರಿಗಳು ಗಂಟೆಗೆ 70 ಕಿಲೋಮೀಟರ್ ವೇಗವನ್ನು ನೀಡುತ್ತವೆ (ಹಿಂದೆ 63 ಕಿ.ಮೀ), ಮತ್ತು ಸಿ 25 01 ಮಾದರಿ ಈಗ ಗಂಟೆಗೆ 60 ಕಿಲೋಮೀಟರ್ ವೇಗವನ್ನು ನೀಡುತ್ತದೆ (ಹಿಂದೆ 55 ಕಿ.ಮೀ).

ಮುಖ್ಯ ಮಾದರಿಯ ವಿದ್ಯುತ್ ಮೋಟಾರ್ ಶಕ್ತಿಯನ್ನು 4.5 ಕಿಲೋವಾಟ್‌ನಿಂದ 4.8 ಕಿಲೋವಾಟ್‌ಗೆ ಹೆಚ್ಚಿಸಲಾಗಿದೆ. ಇದರಿಂದ ಸವಾರರಿಗೆ ಹೆಚ್ಚು ಸ್ಪಂದನಾಶೀಲ ಮತ್ತು ಸುಧಾರಿತ ಚಾಲನಾ ಅನುಭವ ದೊರೆಯಲಿದೆ. ಹೆಚ್ಚುವರಿಯಾಗಿ, ಸಿ 30 01 ಮಾದರಿಯ ಚಾರ್ಜ್ ಅವಧಿಯನ್ನು ಶೇಕಡಾ 0ರಿಂದ 80ರವರೆಗೆ 3 ಗಂಟೆ 50 ನಿಮಿಷಗಳಿಂದ 2 ಗಂಟೆ 55 ನಿಮಿಷಗಳಿಗೆ ಕಡಿತಗೊಳಿಸಲಾಗಿದೆ.

## ಶಿಕ್ಷಣದಿಂದ ದೂರ ಉಳಿಯುತ್ತಿರುವ ಮಕ್ಕಳ ಬಗ್ಗೆ ಆತಂಕ: ಡಿ.ಎಂ.ವಿಶ್ವನಾಥ್

ಕನಕಪುರ

ಗ್ರಾಮೀಣ ಭಾಗದಲ್ಲಿ ಕೆಲವು ಮಕ್ಕಳು ಶಿಕ್ಷಣದಿಂದ ದೂರ ಉಳಿಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ರಾಜ್ಯ ತೆಂಗುನಾರು ಮಹಾಮಂಡಳಿಯ ಮಾಜಿ ಅಧ್ಯಕ್ಷ ಡಿ.ಎಂ. ವಿಶ್ವನಾಥ್ ತಿಳಿಸಿದ್ದಾರೆ.

ತಾಲ್ಲೂಕಿನ ಸಾತನೂರು ಹೋಬಳಿಯ ದಂತೂರು ಗ್ರಾಮದಲ್ಲಿ ಬೆಂಗಳೂರು ವಿಶ್ವವಿದ್ಯಾಲಯ ಸ್ನಾತಕೋತ್ತರ ಸಮಾಜ ಸೇವಾ ಪದವಿ ವಿದ್ಯಾರ್ಥಿಗಳ ಸಹಯೋಗದಲ್ಲಿ ಆಯೋಜಿಸಿದ್ದ 10 ದಿನಗಳ ಗ್ರಾಮೀಣ ಸಮಾಜ ಕಾರ್ಯ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ಗ್ರಾಮೀಣ ಪ್ರದೇಶಗಳಲ್ಲಿ ಮಕ್ಕಳು ಶಾಲೆಯಿಂದ ಹಿಂದೆ ಸರಿಯುತ್ತಿರುವುದು ದೇಶದ ಅಭಿವೃದ್ಧಿಗೆ ಅಪಾಯಕಾರಿಯಾಗಿದೆ. ಯುವಕರು ಕೃಷಿಯ ಬಗ್ಗೆ ತಾತ್ಸಾರ ಮನೋಭಾವ ಹೊಂದಿರುವುದು ಸಹ ಚಿಂತಾಜನಕ ವಿಷಯವಾಗಿದೆ. ಈ ಮನೋಭಾವ ಬದಲಾಗಬೇಕಿದ್ದು, ಸಮಾಜ ಕಾರ್ಯ ವಿದ್ಯಾರ್ಥಿಗಳು ಸಮಾಜದ ಬಗ್ಗೆ ಕಾಳಜಿ ಹೊಂದಿ ಸಮುದಾಯಗಳನ್ನು ಮುಖ್ಯವಾಹಿನಿಗೆ ತರಲು ಶ್ರಮಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೆಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಹಾಗೂ ರಾಮನಗರ ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಡಾ.ಗಂಗಾಧರ್.ಬಿ ವಹಿಸಿಕೊಂಡಿದ್ದರು. 10 ದಿನಗಳ ಶಿಬಿರದಲ್ಲಿ ಕೈಗೊಳ್ಳುವ ಕಾರ್ಯಕ್ರಮಗಳ ಕುರಿತು ಶಿಬಿರಾಧಿಕಾರಿಗಳಾದ ಡಾ. ಎಚ್.ಡಿ. ಮುತ್ತುರಾಜು ಹಾಗೂ ಡಾ. ದೇವಿಂದ್ರಪ್ಪ ಶಿಬಿರಾರ್ಥಿಗಳಿಗೆ ವಿವರಿಸಿದರು.

ಈ ಸಂದರ್ಭದಲ್ಲಿ ಮಧುಕುಮಾರ್ ಎಸ್, ಡಾ.ರವಿ, ಕಾಂತರಾಜ್, ವಿ.ವಿ. ನಾಗರಾಜ್, ಶ್ರೀಮತಿ ಅಂಜಲಿ, ಶ್ರೀಮತಿ ಅಂಭಿಕ ಡಿ.ಬಿ, ಶಿವಕುಮಾರ್, ಪ್ರವೀಣ್, ಸತ್ಯನಾರಾಯಣ ಹಾಗೂ ದಂತೂರು ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

## ರೇಷ್ಮೆಗೂಡಿನ ಬೆಲೆ ಕುಸಿತ, ರೇಷ್ಮೆ ಬೆಳೆಗಾರರಲ್ಲಿ ಆತಂಕ

ವಿಜಯಪುರ

ಬೇಸಿಗೆಯ ಬಿಸಿಲಿನ ತಾಪಮಾನ ದಿನೇ ದಿನೇ ಹೆಚ್ಚಾಗುತ್ತಿದ್ದು, 34 ಡಿಗ್ರಿವರೆಗೂ ದಾಖಲಾಗುತ್ತಿದೆ. ಇಷ್ಟೊಂದು ಅಧಿಕ ತಾಪಮಾನದಲ್ಲಿ ರೇಷ್ಮೆಗೂಡು ಬೆಳೆಯುವುದು ಸಾಹಸದ ಕೆಲಸವಾದರೂ, ರೈತರು ಕಷ್ಟಪಟ್ಟು ಬೆಳೆಯುತ್ತಿರುವ ಗೂಡಿನ ಬೆಲೆ, ದಿನೇ ದಿನೇ ಕುಸಿತವಾಗುತ್ತಿರುವುದು, ರೈತರನ್ನು ಚಿಂತೆಗೀಡು ಮಾಡಿದೆ.



ಬಿಸಿಲಿನ ತಾಪಮಾನದಿಂದಾಗಿ ಹಿಪ್ಪುನೇರಳೆ ಸೊಪ್ಪಿನಲ್ಲಿ ಉತ್ತಮ ಇಳುವರಿ ಬರುತ್ತಿಲ್ಲ. ಎಲೆಗಳಲ್ಲಿ ನೀರಿನ ಅಂಶವೂ ಕಡಿಮೆಯಾಗುತ್ತಿದ್ದು, ಗಡಸುತನ ಹೆಚ್ಚಾಗುತ್ತಿದೆ. ಆದರೂ ತುಂಬಾ ಕಷ್ಟಪಟ್ಟು ರೇಷ್ಮೆಗೂಡು ಬೆಳೆದು, ಮಾರುಕಟ್ಟೆಗೆ ತಂದರೆ, ಕಳೆದ ವಾರದಲ್ಲಿ ಒಂದು ಕೆ.ಜಿ.ಗೆ 750 ರೂಪಾಯಿ ಇದ್ದ ಗೂಡಿನ ಬೆಲೆ ಏಕಾಏಕಿ ಗರಿಷ್ಟ 563 ರೂಪಾಯಿಗೆ ಕುಸಿತವಾಗಿದೆ. ಇದರಿಂದ ತಿಂಗಳು ಪೂರ್ತಿ ಕಷ್ಟಪಟ್ಟು ಬೆಳೆದಿರುವ ಬೆಳೆಗೆ ಸೂಕ್ತವಾದ ಬೆಲೆ ಸಿಗುತ್ತಿಲ್ಲ.

ತೀವ್ರ ನೀರಿನ ಅಭಾವದಿಂದ ತೋಟಗಾರಿಕೆ ಬೆಳೆಗಳು ಕೈಕೊಟ್ಟಿದ್ದು, ಗ್ರಾಮೀಣ ಭಾಗದ ಬಹುತೇಕ ರೈತರು, ಹೈನುಗಾರಿಕೆ ಹಾಗೂ ರೇಷ್ಮೆ ಉದ್ಯಮವನ್ನು ನಂಬಿಕೊಂಡಿದ್ದಾರೆ. ಬಿಸಿಲಿನ ತಾಪಮಾನ ಏರಿಕೆಯ ಕಾರಣದಿಂದ, ಹಾಲಿನ ಉತ್ಪಾದನೆಯೂ ಗಣನೀಯವಾಗಿ ಕುಸಿತವಾಗಿದ್ದು, ಅನಿವಾರ್ಯವಾಗಿ ರೇಷ್ಮೆಹುಳು ಸಾಕಾಣಿಕೆಯತ್ತ ಗಮನಹರಿಸಿರುವ ರೈತರಿಗೆ, ಈಗ ಈ ಬೆಳೆಯೂ ಕೈ ಹಿಡಿಯುತ್ತಿಲ್ಲ.

ನೂಲು ಬಿಚ್ಚಾಣಿಕೆಯಾಗುತ್ತಿಲ್ಲ: ತಾಪಮಾನ ಹೆಚ್ಚಾಗಿರುವ ಕಾರಣ, ಗೂಡಿನಿಂದ ನೂಲು ಸರಿಯಾಗಿ ಬಿಚ್ಚಾಣಿಕೆಯಾಗುತ್ತಿಲ್ಲದ ಕಾರಣ, ನೂಲು ಬಿಚ್ಚಾಣಿಕೆದಾರರು, ಹೆಚ್ಚಿನ ಪ್ರಮಾಣದ ಗೂಡು ಖರೀದಿಸಲು ಮುಂದಾಗುತ್ತಿಲ್ಲದ ಕಾರಣ, ಗೂಡಿಗೆ ಇ-ಹರಾಜಿನಲ್ಲಿ ಸೂಕ್ತವಾದ ಬೆಲೆ ಸಿಗುತ್ತಿಲ್ಲ.

ಆವಕ ಪ್ರಮಾಣ ಹೆಚ್ಚಳ: ಮಾರುಕಟ್ಟೆಗೆ ಆವಕವಾಗುತ್ತಿದ್ದ ಗೂಡು 30 ಲಾಟುಗಳಷ್ಟಿತ್ತು. ಈಗ ಏಕಾಏಕಿ 113 ಲಾಟುಗಳಿಗೆ ಏರಿಕೆಯಾಗಿರುವ ಕಾರಣ, ಅಷ್ಟೊಂದು ಪ್ರಮಾಣದಲ್ಲಿ, ಗೂಡು ಖರೀದಿಸಲು ನೂಲು ಬಿಚ್ಚಾಣಿಕೆ ಹಿಂದೇಟು ಹಾಕುತ್ತಿದ್ದಾರೆ. ಇದರಿಂದ ರೇಷ್ಮೆ ಬೆಳೆಗಾರರು ನಿರೀಕ್ಷಿಸಿದಷ್ಟು ಬೆಲೆ ಸಿಗುತ್ತಿಲ್ಲ.

ಘಟಕಗಳಲ್ಲಿ ಕಾರ್ಮಿಕರ ಕೊರತೆ: ಈ ಹಿಂದೆ ಮಾರುಕಟ್ಟೆಗೆ ಬರುತ್ತಿದ್ದ ಗೂಡಿನ ಪ್ರಮಾಣ ಕಡಿಮೆಯಾಗಿದ್ದ ಕಾರಣ, ನೂಲು ಬಿಚ್ಚಾಣಿಕೆ ಘಟಕಗಳಲ್ಲಿದ್ದ ಕಾರ್ಮಿಕರಿಗೆ ಕೆಲಸವಿಲ್ಲದೆ ಕೆಲಸ ಬಿಟ್ಟು ಬೇರೆ ಕೆಲಸಗಳತ್ತ ಮುಖ ಮಾಡಿದ್ದು, ಈಗ ಗೂಡಿನ ಆವಕ ಹೆಚ್ಚಾಗಿದ್ದು, ಈಗ ಕಾರ್ಮಿಕರು ಸಿಗದ ಕಾರಣ, ಹೆಚ್ಚು ಗೂಡು ಖರೀದಿಸಲು ಆಸಕ್ತಿ ತೋರಿಸುತ್ತಿಲ್ಲ.

ಅಧಿಕಾರಿಗಳ ಮಧ್ಯಸ್ಥಿಕೆ: ಮಾರುಕಟ್ಟೆಗೆ ಗೂಡು ತರುವ ರೈತರು, ಹರಾಜಿನಲ್ಲಿ ಬೆಲೆ ಸಿಗಲಿಲ್ಲವೆಂದು ವಾಪಸ್ಸು ಹೋಗಬಾರದೆಂದು, ಮಾರುಕಟ್ಟೆಯ ಅಧಿಕಾರಿಗಳು, ನೂಲುಬಿಚ್ಚಾಣಿಕೆದಾರರ ಮನವೊಲಿಸಿ, ಬಂದಿರುವ ಗೂಡೆಲ್ಲಾ ಮಾರಾಟವಾಗುವಂತೆ ಶ್ರಮವಹಿಸುತ್ತಿದ್ದಾರೆ. ಆದ ಕಾರಣ, ಗೂಡು ಹರಾಜಾಗುತ್ತಿದೆ.

ಹಣಕಾಸಿನ ಕೊರತೆ: ನೂಲು ಬಿಚ್ಚಾಣಿಕೆದಾರರು, ಹರಾಜಿಗೂ ಮೊದಲೇ, ಮಾರುಕಟ್ಟೆಯ ಖಾತೆಗೆ ಹಣ ಜಮೆ ಮಾಡಬೇಕು. ಆದರೆ, ನೂಲು ಖರೀದಿಸಿರುವ ವ್ಯಾಪಾರಿಗಳು ಸಕಾಲದಲ್ಲಿ ಹಣ ಕೊಡದ ಕಾರಣ, ನೂಲು ಬಿಚ್ಚಾಣಿಕೆದಾರರಿಗೆ ಹಣಕಾಸಿನ ಮುಗ್ಗಟ್ಟು ಎದುರಾಗಿರುವುದು ಕೂಡಾ ಗೂಡಿನ ಬೆಲೆ ಇಳಿಕೆಗೆ ಕಾರಣವಾಗುತ್ತಿದೆ

## ಮದನಹಳ್ಳಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ 100 ರಷ್ಟು ಫಲಿತಾಂಶ

ಕೋಲಾರ

ತಾಲೂಕಿನ ಮದನಹಳ್ಳಿ ಕ್ರಾಸ್‌ನಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯು 2025-26ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶದಲ್ಲಿ 100ಕ್ಕೆ 100 ರಷ್ಟು ಫಲಿತಾಂಶ ಪಡೆದಿದೆ.

ಈ ಶಾಲೆಯು ಸುಮಾರು 10 ವರ್ಷಗಳಿಂದ ಸತತವಾಗಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 100ಕ್ಕೆ 100 ರಷ್ಟು ಫಲಿತಾಂಶ ಪಡೆಯುತ್ತಾ ಬಂದಿದೆ. ಈ ಬಾರಿ 47 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದು, 38 ವಿದ್ಯಾರ್ಥಿಗಳು ಅತ್ಯುನ್ನತ ಸ್ಥಾನ, 9 ವಿದ್ಯಾರ್ಥಿಗಳು ಉನ್ನತ ಸ್ಥಾನ ಪಡೆಯುವ ಮೂಲಕ ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. 12 ವಿದ್ಯಾರ್ಥಿಗಳು 625ಕ್ಕೆ 600ಕ್ಕೂ ಹೆಚ್ಚು ಅಂಕ ಪಡೆದಿರುತ್ತಾರೆ.

ಕಿರಣ್ ರೆಡ್ಡಿ 614, ಸೋಹಿಶ 614, ಅಕ್ಷಯ್ ಕುಮಾರ್ 612, ಕಿಶೋರ್ ವಿ 610, ಜೀವನ್ ಹೆಚ್.ಪಿ 606, ಶಿವದರ್ಶನ್ 605, ಮನೋಜ್ 603, ಪ್ರತೀಕ್ 603, ವಿಷ್ಣುಪ್ರಿಯ 602, ಕುಶಾಲ್ 602, ಮೋದಿನಾ 602 ರಷ್ಟು ಅಂಕಗಳನ್ನು ಗಳಿಸಿದ್ದು ವಿದ್ಯಾರ್ಥಿಗಳನ್ನು ಶಾಲೆಯ ಪರವಾಗಿ ಪ್ರಾಂಶುಪಾಲರು ಅಭಿನಂದಿಸಿದ್ದಾರೆ.

## ರಾಜಘಟ್ಟದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿ

ದೊಡ್ಡಬಳ್ಳಾಪುರ

ರಾಜಘಟ್ಟದಲ್ಲಿ ನವೋದಯ ಚಾರಿಟೆಬಲ್ ಟ್ರಸ್ಟ್, ದೃಷ್ಟಿ ಆಸ್ಪತ್ರೆ ಹಾಗೂ ಶ್ರೀ ನಂದಿ ಮೆಡಿಕಲ್ ಮತ್ತು ಧನ್ವಂತರಿ ಕ್ಲಿನಿಕ್ ಅವರ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಯಿತು.

ಶಿಬಿರವನ್ನು ಉದ್ದೇಶಿಸಿ ಮಾತನಾಡಿದ ಟ್ರಸ್ಟ್ ಅಧ್ಯಕ್ಷ ನವೋದಯ ಚೇತನ್, ಇಂತಹ ಶಿಬಿರಗಳು ಗ್ರಾಮೀಣ ಪ್ರದೇಶದ ಜನರಿಗೆ ಅತ್ಯಂತ ಉಪಯುಕ್ತವಾಗುತ್ತವೆ. ಆರೋಗ್ಯ ಸೇವೆಗಳು ಗ್ರಾಮ ಮಟ್ಟಕ್ಕೆ ತಲುಪುವಲ್ಲಿ ಇವು ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.




ಬೇಸಿಗೆ ಉಷ್ಣಾಂಶ ಹೆಚ್ಚುತ್ತಿರುವ ಹಿನ್ನೆಲೆ ಜನರು ಹೆಚ್ಚು ನೀರು ಹಾಗೂ ಮಜ್ಜಿಗೆ ಸೇವಿಸಬೇಕು ಎಂದು ವೈದ್ಯರಾದ ಡಾ. ಅರ್ಪಿತ ಸಲಹೆ ನೀಡಿದರು. ಇದೇ ವೇಳೆ ನಂದಿ ಮೆಡಿಕಲ್ಸ್‌ನ ಮಾಲೀಕ ರಾಜೇಶ್ ಶಿಬಿರಕ್ಕೆ ಆಗಮಿಸಿದವರಿಗೆ ಉಚಿತ ಓಆರ್‌ಎಸ್ ಪಾನೀಯವನ್ನು ವಿತರಿಸಿದರು.

ಈ ಶಿಬಿರದಲ್ಲಿ ಒಟ್ಟು 23 ಜನರಿಗೆ ಉಚಿತ ಕನ್ನಡಕಗಳನ್ನು ವಿತರಿಸಲಾಗಿದ್ದು, 6 ಜನರನ್ನು ಕಣ್ಣಿನ ಶಸ್ತ್ರಚಿಕಿತ್ಸೆಗೆ ಆಯ್ಕೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಡಾ. ಹರೀಶ್, ಡಾ. ಪ್ರಥಮೇಶ್, ಡಾ. ರೋಹಿತ್, ಡಾ. ಹರ್ಷಲ್, ದೃಷ್ಟಿ ಆಸ್ಪತ್ರೆಯ ಶಿವು ಹಾಗೂ ನವೋದಯ ಟ್ರಸ್ಟ್ ಕಾರ್ಯಕ್ರಮ ಸಂಯೋಜಕರಾದ ಜನಾರ್ದನ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಿಜೃಂಭಣೆಯಿಂದ ಜರುಗಿದ ಶ್ರೀ ವಾಸವಿ ಜಯಂತಿ ಮಹೋತ್ಸವ

ತಿಪಟೂರು

ನಗರದ ಎಸ್‌ಕೆಪಿಟಿ ರಸ್ತೆಯಲ್ಲಿ ಇರುವ ಆರ್ಯವೈಶ್ಯ ಸಮಾಜದ ಕುಲ ದೇವತೆಯಾದ ಕನ್ನಿಕಾ ಪರಮೇಶ್ವರಿ ದೇವಸ್ಥಾನದಲ್ಲಿ ನೆಲೆಸಿರುವ ವಾಸವಿ ಮಾತೆಯ ಜಯಂತಿಯ ಮಹೋತ್ಸವವು ಏಪ್ರಿಲ್ 22 ರಿಂದ 26 ರವರೆಗೆ ಬಹಳ ವಿಜೃಂಭಣೆಯಿಂದ ನಡೆಯಿತು.

ದಿನಾಂಕ 19 ರಿಂದ 26ರವರೆಗೆ ವಿವಿಧ ಆಟೋಟ ಸ್ಪರ್ಧೆ ಸ್ಪರ್ಧೆಗಳನ್ನು ಏರ್ಪಡಿಸಿದ್ದರು ,ಏಪ್ರಿಲ್ 19ರ ಭಾನುವಾರದಂದು ನಗರದ ಹಾಸನ್ ರಸ್ತೆಯ ಹಾಸನ್ ಗೇಟ್ ಹತ್ತಿರ ಇರುವ ಸ್ಪಿಂಗ್ ಫೀಲ್ಡ್ ಮೈದಾನದಲ್ಲಿ ಶ್ರೀ ವಾಸವಿ ಯುವಜನ ಸಂಘದ ವತಿಯಿಂದ "ಶ್ರೀ ವಾಸವಿ ಕಪ್ ಹೊನ್ನಲು ಬೆಳಕಿನ ಕ್ರಿಕೆಟ್" ಪಂದ್ಯಾವಳಿ ಆಯೋಜಿಸಿದ್ದರು ಹಲವಾರು ತಂಡಗಳು ಭಾಗವಹಿಸಿದ್ದವು ಪಂದ್ಯಾವಳಿಯಲ್ಲಿ ಗೆದ್ದ ತಂಡಗಳಿಗೆ ನಗದು ಬಹುಮಾನ ಮತ್ತು ಪ್ರಶಸ್ತಿಯನ್ನು ವಿತರಿಸಲಾಯಿತು.



ಏಪ್ರಿಲ್ 22ರಂದು ನಡೆದ ಕ್ಲೇ ಮೇಕಿಂಗ್ ಹಾಗೂ ಫೇಸ್ ಪೇಂಟಿಂಗ್ ಮತ್ತು ಬ್ಯಾಂಗಲ್ ಮೇಕಿಂಗ್ ಶ್ರೀ ವಾಸವಿ ಯುವತಿಯರ ಸಂಘದ ವತಿಯಿಂದ ಕಾರ್ಯಕ್ರಮವನ್ನು ಆಯೋಜಿಸಿದ್ದು ಗೆದ್ದ ತಂಡಗಳಿಗೆ ಬಹುಮಾನವನ್ನು ವಿತರಿಸಿದರು.

ಏಪ್ರಿಲ್ 23ರಂದು ಆರ್ಯವೈಶ್ಯ ಮಂಡಳಿಯಿಂದ (ವಾಕತನ್) ಹಿರಿಯರ ನಡೆ ಆರೋಗ್ಯದ ಕಡೆಗೆ ಎಂಬ ಸ್ಲೋಗನ್ ಮೂಲಕ ಏರ್ಪಡಿಸಲಾಗಿದ್ದ 60 ವರ್ಷ ಮೇಲ್ಪಟ್ಟ ಮಹನೀಯರು ಹಾಗೂ ಮಹಿಳೆಯರು ಭಾಗವಹಿಸಿದ್ದರು ನಂತರ ಕಪಲ್ ಗೇಮ್ ಶೋ ಆಟವನ್ನು ನಡೆಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಏಪ್ರಿಲ್ 24ರಂದು ಶ್ರೀ ವಾಸವಿ ಸೇವಾ ಸಮಿತಿ ವತಿಯಿಂದ ಶ್ರೀ ವಾಸವಿ ಸುಪ್ರಭಾತ, ಧ್ವಜಾರೋಹಣ, ಗಂಗಾ ಕಳಶ, ಗೋಪೂಜೆ, ವಾಸವಿ ಮಾತೆಗೆ ಅರಿಶಿಣ ಕುಂಕುಮದ ಅಲಂಕಾರ,ಇನ್ನು ಇತ್ಯಾದಿ ಕಾರ್ಯಕ್ರಮವನ್ನು ನಡೆಸಿ ನಂತರ ಮಹಾ ಮಂಗಳಾರತಿ ಹಾಗೂ ಪ್ರಸಾದ ವಿನಿಯೋಗ ಮಾಡಲಾಯಿತು.

ಏಪ್ರಿಲ್ 25 ರಂದು ವಾಸವಿ ಅಮ್ಮನವರ ಗರ್ಭಗುಡಿಯಲ್ಲಿರುವ ಮೂಲ ವಿಗ್ರಹಕ್ಕೆ ಕ್ಷೀರಾಭಿಷೇಕ, ಕಾಯಿತುರಿ ಅಲಂಕಾರ, ಕಲ್ಲಂಗಡಿ ಹಣ್ಣಿನ ರಸದ ಅಭಿಷೇಕ ನಂತರ ಮಹಾಮಂಗಳಾರತಿ ನಡೆಸಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ವಾಸವಿ ಮಾತೆಯ ದರ್ಶನ ಪಡೆದರು.

## 'ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಅಧ್ಯಯನ ಮಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಬೇಕು'

ವಿಜಯಪುರ

ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಅಧ್ಯಯನ ಮಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಬೇಕು. ಸಮಾಜದ ಬೆಳವಣಿಗೆಗೆ ಅಂಬೇಡ್ಕರ್ ಅವರು, ಜ್ಞಾನಾರ್ಜನೆಗೆ ತೋರಿದ ಆಸಕ್ತಿ, ಸಂಪನ್ಮೂಲಗಳನ್ನು ಬಳಸಿಕೊಂಡ ಬಗೆ, ಅನುಕರಣೀಯ ಮತ್ತು ಆದರ್ಶವಾಗಿದೆ ಎಂದು ಕರ್ನಾಟಕ ದಲಿತ ಜನಸೇನೆ ರಾಜ್ಯಾಧ್ಯಕ್ಷ ಟಿ.ಭರತ್ ಹೇಳಿದರು.

ಹೋಬಳಿಯ ಪಿ.ರಂಗನಾಥಪುರ ಗ್ರಾಮದಲ್ಲಿ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಹಾಗೂ ಡಾ.ಬಾಬು ಜಗಜೀವನರಾಂ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಿಕ್ಷಣವನ್ನು ಅವರು ಉಪಯೋಗಿಸಿ ಕೊಂಡ ರೀತಿ, ದೇಶಕ್ಕೆ ತೋರಿದ ಗೌರವ, ಮತ್ತು ದೇಶಪ್ರೇಮ ಹಾಗೂ ಇಡೀ ಭಾರತವನ್ನು ಸಮಗ್ರವಾಗಿ ನೋಡಿದ ಪರಿ, ಶ್ಲಾಘನೀಯವಾಗಿದೆ.ಈ ದೇಶದಲ್ಲಿ ಎಲ್ಲವೂ ಚುನಾವಣೆ ಆಧಾರಿತವಾಗಿ, ಚುನಾವಣೆ ಗೆಲ್ಲುವುದೇ ಎಲ್ಲಾ ಚಟುವಟಿಕೆಗಳ ಅಡಿಪಾಯವಾಗಿರುವ ಸಂಧರ್ಭವಾಗಿದೆ. ವಿದ್ಯಾವಂತರು, ವೈಚಾರಿಕ ನಿಲುವಿನಿಂದ ಯೋಚಿಸದೇ ಜಾತಿ, ಧರ್ಮ, ಮತ, ಪಕ್ಷ, ಪ್ರಾಂತ, ಲಿಂಗ ಎಂಬ ಸ್ವಯಂ ಸ್ಥರಗಳ ಮಧ್ಯ ಸಿಲುಕಿಕೊಂಡು, ಪ್ರಜಾಪ್ರಭುತ್ವವನ್ನು ಚುನಾವಣೆಗಳಲ್ಲಿ ಮಾತ್ರ ಕಾಣ ಬಯಸುತ್ತಿರುವ ನಾಗರಿಕ ಸಮಾಜದ ಪರಿಸ್ಥಿತಿಯಲ್ಲಿ, ಡಾ. ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನದ ಅರಿವಿನೊಂದಿಗೆ ದೇಶದ ಸಮಸ್ಯೆಗಳಿಗೆ ಸೂಕ್ತ ಉತ್ತರ ಕಂಡುಕೊಳ್ಳುವ ಪ್ರಯತ್ನವಾಗಬೇಕು ಎಂದರು.

ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎಂ.ಜಗದೀಶ್ ಮಾತನಾಡಿ, ನಾವೆಲ್ಲರೂ ಸಹೋದರತೆಯಿಂದ, ಸಮಾನತೆಯಿಂದ ಸಹಬಾಳ್ವೆ ನಡೆಸಬೇಕು, ಸಮಾಜದಲ್ಲಿ ಮುಖ್ಯವಾಹಿನಿಗೆ ಬರಬೇಕು ಎಂಬುದು ಅಂಬೇಡ್ಕರ್ ಅವರ ಆಶಯವಾಗಿತ್ತು. ಅದನ್ನು ನಾವೆಲ್ಲರೂ ಸಾಕಾರಗೊಳಿಸಬೇಕು. ಮಕ್ಕಳಿಗೆ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ಬೋಧನೆ ಮಾಡಬೇಕು ಎಂದರು.

ದಲಿತ ಸಂಘರ್ಷ ಸಮಿತಿಯ ಚಿಕ್ಕಬಳ್ಳಾಪುರ ಜಿಲ್ಲಾ ಸಂಚಾಲಕ ಎನ್.ಎ.ವೆಂಕಟೇಶ್ ಮಾತನಾಡಿ, ಸಮಾಜದಲ್ಲಿ ಸಮಾನತೆ, ನ್ಯಾಯ ಹಾಗೂ ಹಿಂದುಳಿದ ವರ್ಗಗಳ ಹಕ್ಕುಗಳಿಗಾಗಿ ಜೀವನಪೂರ್ತಿ ಹೋರಾಡಿದ ಮಹಾನ್ ನಾಯಕ ಡಾ. ಬಾಬು ಜಗಜೀವನರಾಮ್ ಅವರು. ಅವರೂ ಕೂಡಾ ಅಂಬೇಡ್ಕರರಂತೆ ಅಸ್ಪೃಶ್ಯತೆಯ ನೋವನ್ನು ಕಂಡವರು. ಡಾ.ಬಿ.ಆರ್.ಅಂಬೇಡ್ಕರ್ ಅವರು ಕೇವಲ ಒಂದು ವ್ಯಕ್ತಿಯಲ್ಲ, ಅವರೊಂದು ಶಕ್ತಿಯಾಗಿದ್ದಾರೆ. ಅಸ್ಪಶ್ಯತೆಯ ನಿವಾರಣೆಗಾಗಿ ಅವರು ಪಟ್ಟಂತಹ ಶ್ರಮೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಪ್ರತಿಯೊಂದು ಸಮುದಾಯಗಳೂ ಅಂಬೇಡ್ಕರ್ ಅವರ ಬಗ್ಗೆ ಅಧ್ಯಯನ ಮಾಡಬೇಕು. ಎಲ್ಲಾ ಸಮುದಾಯಗಳೊಟ್ಟಿಗೆ ಸಮನ್ವಯತೆಯಿಂದ ಬದುಕು ಕಟ್ಟಿಕೊಳ್ಳುವಂತಹ ಕೆಲಸವನ್ನು ನಾವೆಲ್ಲರೂ ಮಾಡಬೇಕು ಎಂದರು. ಅಂಬೇಡ್ಕರ್ ಲೋಗೋ ಬಿಡುಗಡೆ ಮಾಡಿದರು. ಅನ್ನದಾನ ವ್ಯವಸ್ಥೆ ಮಾಡಲಾಗಿತ್ತು. ಮುಖಂಡರಾದ ನಾಗನರಸಿಂಹ, ಕಾಂಗ್ರೆಸ್ ಮುಖಂಡ ನಟರಾಜ್, ಮನೋಹರ್, ನರಸಾಪುರ ಲೋಕೇಶ್, ರಾಜ್ ಕುಮಾರ್, ಬಳುವನಹಳ್ಳಿ ರವಿಕುಮಾರ್, ಮೂರ್ತಿ, ನಾರಾಯಣಸ್ವಾಮಿ, ಎನ್. ಗಜೇಂದ್ರ, ದೇವರಾಜ್, ಮುಂತಾದವರು ಹಾಜರಿದ್ದರು.

## ಅದ್ದೂರಿಯಾಗಿ ನಡೆದ ಆರಾಧನಾ ಮಹೋತ್ಸವ

ದೊಡ್ಡಬಳ್ಳಾಪುರ

ಪೋತುಲೂರು ವೀರ ಬ್ರಹ್ಮೇಂದ್ರಸ್ವಾಮಿ ಸೇವಾ ಟ್ರಸ್ಟ್ ವತಿಯಿಂದ ಮದ್ದಿರಾಟ ಪೋತುಲೂರು ವೀರ ಬ್ರಹ್ಮೇಂದ್ರಸ್ವಾಮಿ ಅವರ 15ನೇ ವರ್ಷದ ಆರಾಧನಾ ಮಹೋತ್ಸವವನ್ನು ನಗರದ ಕನ್ನಡ ಜಾಗೃತಿ ಭವನದಲ್ಲಿ ಭಕ್ತಿಭಾವದಿಂದ ಆಚರಿಸಲಾಯಿತು.




ವಿಶೇಷವಾಗಿ ಅಲಂಕರಿಸಲಾದ ಸ್ವಾಮಿಯವರ ಭಾವಚಿತ್ರಕ್ಕೆ ವಿಶ್ವಕರ್ಮ ಸಮುದಾಯದವರು ಪೂಜೆ ಸಲ್ಲಿಸಿ ಕಾರ್ಯಕ್ರಮಕ್ಕೆ ಧಾರ್ಮಿಕ ಮೆರುಗು ನೀಡಿದರು. ವಿವಿಧ ಕಲಾವಿದರು ವೀರ ಬ್ರಹ್ಮೇಂದ್ರಸ್ವಾಮಿಯವರ ಕುರಿತ ಭಕ್ತಿಗೀತೆಗಳನ್ನು ಹಾಡಿ ಭಕ್ತರ ಮನಸೆಳೆಯಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಶಾಸಕ ಧೀರಜ್ ಮುನಿರಾಜು ಮಾತನಾಡಿ, ವೀರ ಬ್ರಹ್ಮೇಂದ್ರಸ್ವಾಮಿಯವರ ತತ್ವ, ಆದರ್ಶಗಳು ಇಂದಿಗೂ ಪ್ರಸ್ತುತವಾಗಿದ್ದು ಸಮಾಜಕ್ಕೆ ದಾರಿದೀಪವಾಗಿವೆ ಎಂದು ಹೇಳಿದರು. ಆಂಧ್ರಪ್ರದೇಶದ ಕಡಪ ಜಿಲ್ಲೆಯ ಕಂದಿಮಲ್ಲಯ್ಯಪಳ್ಳಿಯಲ್ಲಿ 17ನೇ ಶತಮಾನದಲ್ಲಿ ಜೀವಿಸಿದ್ದ ಅವರು ಪ್ರಸಿದ್ಧ ಹಿಂದೂ ಸಂತ, ಜ್ಯೋತಿಷಿ ಹಾಗೂ ದಾರ್ಶನಿಕರಾಗಿದ್ದು, ಭವಿಷ್ಯದ ಘಟನೆಗಳನ್ನು ಮುನ್ಸೂಚಿಸುವ "ಕಾಲಜ್ಞಾನ" ಕೃತಿಯ ಮೂಲಕ ಪ್ರಸಿದ್ಧರಾಗಿದ್ದಾರೆ ಎಂದರು. ಅವರು ಮೂಢನಂಬಿಕೆಗಳನ್ನು ವಿರೋಧಿಸಿ ಜ್ಞಾನ ಮತ್ತು ಕರ್ಮಯೋಗದ ಮಹತ್ವವನ್ನು ಸಾರಿದ ಮಹಾನ್ ವ್ಯಕ್ತಿಯಾಗಿದ್ದು, ಅವರ ಆರಾಧನೆಯನ್ನು ಅರ್ಥಪೂರ್ಣವಾಗಿ ಆಚರಿಸಬೇಕಿದೆ ಎಂದು ತಿಳಿಸಿದರು.

ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಸೋಮಶೇಖರ್ ಮಾತನಾಡಿ, ಸಮಿತಿಯಿಂದ ಪ್ರತಿವರ್ಷ ಆರಾಧನಾ ಮಹೋತ್ಸವವನ್ನು ಆಯೋಜಿಸಲಾಗುತ್ತಿದ್ದು, ಜ್ಞಾನದ ಕೊರತೆಯಿಂದ ಸಮಾಜ ವೈಜ್ಞಾನಿಕ ಸತ್ಯಗಳಿಂದ ದೂರವಾಗುತ್ತಿದೆ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ವಿಶ್ವಕರ್ಮ ಸಮುದಾಯದ ಗಣ್ಯರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವಿಶ್ವಕರ್ಮ ನಿಗಮದ ಅಧ್ಯಕ್ಷ ಪಿ. ಸುಜ್ಞಾನಮೂರ್ತಿ, ಕರ್ನಾಟಕ ರಾಜ್ಯ ವಿಶ್ವಕರ್ಮ ಸಮಾಜದ ರಾಜ್ಯಾಧ್ಯಕ್ಷ ಈಶ್ವರಾಚಾರ್, ಬಿ. ಉಮೇಶ್, ಬಾಬು ಪತ್ತಾರ್, ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಶೋಭಾ, ರಾಜ್ಯ ಉಪಾಧ್ಯಕ್ಷ ರವಿಶಂಕರ್, ಶರತ್ ಚಂದ್ರ, ಲಕ್ಷ್ಮಣ್, ಚಂದ್ರಶೇಖರ್, ಕರ್ನಾಟಕ ಛಾಯಾಚಿತ್ರಗ್ರಾಹಕರ ಸಂಘದ ರಾಜ್ಯಾಧ್ಯಕ್ಷ ಎಚ್. ಎಸ್. ನಾಗೇಶ್ ಸೇರಿದಂತೆ ಅನೇಕ ಗಣ್ಯರು ಹಾಗೂ ಟ್ರಸ್ಟ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ನಟ ಚೇತನ್ ವಿರುದ್ಧ ಪ್ರತಿಭಟನೆ

ದೊಡ್ಡಬಳ್ಳಾಪುರ

ನಟ ಚೇತನ್ ಅಹಿಂಸಾ ಅವರು ಡಾ. ರಾಜ್ ಕುಮಾರ್ ಸಮಾಧಿ ಸ್ಥಳಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಮಾಡಿರುವ ಪೋಸ್ಟ್‌ಗೆ ವಿರೋಧವಾಗಿ ದೊಡ್ಡಬಳ್ಳಾಪುರದಲ್ಲಿ ಕನ್ನಡ ಪರ ಹೋರಾಟಗಾರರು ಹಾಗೂ ಅಭಿಮಾನಿಗಳಿಂದ ಪ್ರತಿಭಟನೆ ನಡೆಯಿತು. ವರನಟ ಡಾ. ರಾಜ್ ಕುಮಾರ್ ಅವರ ಸಮಾಧಿಗೆ ಕರ್ನಾಟಕ ಸರ್ಕಾರ 2.5 ಎಕರೆ ಜಾಗ ನೀಡಿರುವುದನ್ನು ಪ್ರಶ್ನಿಸಿ ಚೇತನ್ ಅಹಿಂಸಾ ಮಾಡಿದ್ದ ಪೋಸ್ಟ್ ವಿವಾದಕ್ಕೆ ಕಾರಣವಾಗಿದ್ದು, ಕನ್ನಡ ಸಂಘಟನೆಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿವೆ.

ಈ ಹಿನ್ನೆಲೆಯಲ್ಲಿ ಡಾ. ರಾಜ್ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಚೇತನ್ ಅಹಿಂಸಾ ವಿರುದ್ಧ ಘೋಷಣೆ ಕೂಗಿ ತಮ್ಮ ಅಸಮಾಧಾನ ಹೊರಹಾಕಿದರು. ನಂತರ ದೊಡ್ಡಬಳ್ಳಾಪುರ ನಗರ ಪೊಲೀಸ್ ಠಾಣೆಗೆ ತೆರಳಿ ಇನ್ಸ್‌ಪೆಕ್ಟರ್ ಅಮರೇಶ್ ಗೌಡ ಅವರಿಗೆ ಮನವಿ ಪತ್ರ ಸಲ್ಲಿಸಿ,



ಚೇತನ್ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಹಾಗೂ ಗಡಿಪಾರು ಮಾಡುವಂತೆ ಒತ್ತಾಯಿಸಿದರು.

ಚೇತನ್ ಅಹಿಂಸಾ ತಮ್ಮ ಪೋಸ್ಟ್‌ನಲ್ಲಿ 2.5 ಎಕರೆ ಜಾಗ ನೀಡುವುದು ಸರಿಯಾದ ನಿರ್ಧಾರವೇ ಎಂಬುದನ್ನು ಪ್ರಶ್ನಿಸಿ, 21ನೇ ಶತಮಾನದಲ್ಲಿ ಭೂಮಿ ಪ್ರಮುಖ ಸಂಪನ್ಮೂಲವಾಗಿದ್ದು, ಸರ್ಕಾರ ಸಾರ್ವಜನಿಕ ಉಪಯೋಗಕ್ಕಾಗಿ ಹಂಚಬೇಕು, ಮತಗಳ ಉದ್ದೇಶಕ್ಕಾಗಿ ಅಲ್ಲ ಎಂದು ಅಭಿಪ್ರಾಯಪಟ್ಟಿದ್ದರು. ಈ ಹೇಳಿಕೆಗಳಿಗೆ ತೀವ್ರ ವಿರೋಧ ವ್ಯಕ್ತವಾಗಿದ್ದು, ಅಭಿಮಾನಿಗಳು ಮತ್ತು ಕನ್ನಡ ಪರ ಸಂಘಟನೆಗಳು ಇದನ್ನು ಅವಮಾನಕರವಾಗಿ ಪರಿಗಣಿಸಿವೆ.

ಪ್ರತಿಭಟನೆಯಲ್ಲಿ ಡಾ. ರಾಜ್ ಕುಮಾರ್ ಅಭಿಮಾನಿಗಳ ಸಂಘದ ತಾಲೂಕು ಅಧ್ಯಕ್ಷ ಸು. ನರಸಿಂಹಮೂರ್ತಿ, ಕನ್ನಡ ಪರ ಸಂಘಟನೆಗಳ ಮುಖಂಡರು, ನಗರಸಭೆ ಮಾಜಿ ಅಧ್ಯಕ್ಷ ತ.ನ. ಪ್ರಭುದೇವ, ಕನ್ನಡ ಪಕ್ಷದ ಮುಖಂಡ ಸಂಜೀವನಾಯಕ್, ಕರವೇ ಪ್ರಧಾನ ಕಾರ್ಯದರ್ಶಿ ರಾಜಘಟ್ಟ ರವಿ, ಡಿ.ಪಿ. ಆಂಜನೇಯ, ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷೆ ಪ್ರಮಿಳಾ ಮಹದೇವ್ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಜಮೀನು ಉಳಿವಿಗೆ ಕಾನೂನು ಹೋರಾಟ

ಮಾಲೂರು

ಮಾಲೂರು ತಾಲೂಕಿನ ಟೇಕಲ್ ಹೋಬಳಿಯ ಅಗಲಕೋಟೆ ಗ್ರಾಮದ ಬಳಿ ದಾನಿಗಳಿಂದ ಶಾಲೆಗಾಗಿ ಶಿಕ್ಷಣ ಇಲಾಖೆಗೆ ನೀಡಿರುವ ಜಮೀನಿಗೆ ಸಂಬಂಧಿಸಿದ ದಾಖಲೆಗಳನ್ನು ಪಡೆದಿರುವುದಾಗಿ ತಿಳಿಸಿದ ಮಾಜಿ ಶಾಸಕ ಕೆ.ಎಸ್. ಮಂಜುನಾಥ್ ಗೌಡ ಅವರು, ಈ ಜಮೀನನ್ನು ಉಳಿಸಲು ಕಾನೂನು ಹೋರಾಟ ನಡೆಸುವುದಾಗಿ ಘೋಷಿಸಿದರು.

ನಗರದ ಬೆಂಗಳೂರು ಮಾಲೂರು ರಸ್ತೆಯ ಹಾರೋಹಳ್ಳಿ ಕ್ರಾಸ್ ಬಳಿ ಇರುವ ಖಾಸಗಿ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಅಗಲಕೋಟೆ ಗ್ರಾಮದ ಜಮೀನಿಗೆ ಸಂಬಂಧಿಸಿದ ವಿಷಯ ವಿಧಾನಸಭೆಯ ಅಧಿವೇಶನದಲ್ಲೂ ಚರ್ಚೆಯಾಗಿದ್ದು, ಜಿಲ್ಲಾಡಳಿತವು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರಿಗೆ ತಪ್ಪು ಮಾಹಿತಿ ನೀಡಿದೆ ಎಂದು ಆರೋಪಿಸಿದರು. 51 ಎಕರೆ ಜಮೀನನ್ನು ದಾನ ಮಾಡಿರುವ ಕುರಿತು ದಾಖಲೆಗಳಿದ್ದರೂ, ಪಹಣಿ ಮತ್ತು ನೋಂದಣಿ ವಿಷಯದಲ್ಲಿ ಗೊಂದಲ ಉಂಟುಮಾಡಿ ತಪ್ಪು ಮಾಹಿತಿ ನೀಡಲಾಗಿದೆ ಎಂದು ಹೇಳಿದರು. ಈ ಜಮೀನು ಶಾಲೆಗೆ ಸೇರಿದ್ದು, ಅದನ್ನು ವಶಕ್ಕೆ ಪಡೆಯುವಂತೆ ಶಿಕ್ಷಣ ಇಲಾಖೆಗೆ ಮನವಿ ನೀಡಿದರೂ ಸಂಬಂಧಿತ ಅಧಿಕಾರಿಗಳು ಕ್ರಮ ಕೈಗೊಳ್ಳಲು ವಿಳಂಬ ಮಾಡುತ್ತಿದ್ದಾರೆ ಎಂದು ಅವರು ಆರೋಪಿಸಿದರು.

## ಕುಡಿಯುವ ನೀರಿನ ಅದಾಲತ್ ಯಶಸ್ವಿ

ಬಂಗಾರಪೇಟೆ

ತಾಲ್ಲೂಕಿನ ದೊಡ್ಡವಲಮಾದಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಮಂಗಳವಾರ ಕುಡಿಯುವ ನೀರಿನ ಅದಾಲತ್ ಕಾರ್ಯಕ್ರಮವನ್ನು ಕಾರ್ಯನಿರ್ವಾಹಣಾ ಅಧಿಕಾರಿ ಎಚ್. ರವಿ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಯಶಸ್ವಿಯಾಗಿ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಪಂಚಾಯಿತಿ ವ್ಯಾಪ್ತಿಯ ಜನರಿಗೆ ಬೇಸಿಗೆ ಕಾಲದಲ್ಲಿ ಉಂಟಾಗಬಹುದಾದ ನೀರಿನ ಅಭಾವವನ್ನು ಎದುರಿಸಲು ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಸಮಗ್ರ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಎಚ್. ರವಿ ಕುಮಾರ್ ಅವರು, ಪ್ರತಿ ಮನೆಗೂ ಸಮರ್ಪಕವಾಗಿ ಕುಡಿಯುವ ನೀರು ತಲುಪಿಸುವುದು ಪಂಚಾಯಿತಿಯ ಪ್ರಮುಖ ಆದ್ಯತೆಯಾಗಿದ್ದು, ನೀರಿನ ಮೂಲಗಳಾದ ಟ್ಯಾಂಕ್‌ಗಳು ಮತ್ತು ಕೊಳವೆಬಾವಿಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡುವಂತೆ ಸಾರ್ವಜನಿಕರಿಗೆ ಕರೆ ನೀಡಿದರು. ನೀರು ಕಲುಷಿತಗೊಳ್ಳದಂತೆ ಎಚ್ಚರಿಕೆ ವಹಿಸುವುದು ಅತ್ಯಂತ ಅಗತ್ಯವಾಗಿದ್ದು, ನೀರಿನ ಪೂರೈಕೆಯಲ್ಲಿ ವ್ಯತ್ಯಯ ಉಂಟಾದಲ್ಲಿ ಅಥವಾ ತುರ್ತು ಪರಿಸ್ಥಿತಿಯಲ್ಲಿ ಸಂಪರ್ಕಿಸಲು ಕುಡಿಯುವ ನೀರಿನ ಸಹಾಯವಾಣಿ ಕುರಿತು ಮಾಹಿತಿ ನೀಡಲಾಯಿತು. ಸಾರ್ವಜನಿಕರಿಗೆ ನೀರಿನ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸಿ, ಕುಡಿಯಲು ಮತ್ತು ಅಡುಗೆಗೆ ಮಾತ್ರ ಶುದ್ಧ ನೀರನ್ನು ಬಳಸಬೇಕು, ಅನಗತ್ಯವಾಗಿ ನಲ್ಲಿಗಳನ್ನು ತೆರೆದಿಡಬಾರದು, ಕುಡಿಯುವ ನೀರನ್ನು ವಾಹನ ತೊಳೆಯಲು ಅಥವಾ ತೋಟಗಳಿಗೆ ಬಳಸುವುದನ್ನು ನಿಲ್ಲಿಸಬೇಕು ಎಂದು ಸಲಹೆ ನೀಡಿದರು. ಪೈಪ್‌ಲೈನ್‌ಗಳಲ್ಲಿ ಸೋರಿಕೆ ಕಂಡುಬಂದಲ್ಲಿ ತಕ್ಷಣ ಪಂಚಾಯಿತಿಗೆ ತಿಳಿಸಿ ದುರಸ್ತಿ ಮಾಡಿಸಬೇಕು ಹಾಗೂ ಬಳಸಿದ ನೀರನ್ನು ಗಿಡಗಳಿಗೆ ಬಳಸುವ ಮೂಲಕ ನೀರಿನ ಉಳಿತಾಯ ಮಾಡಬೇಕು ಎಂದು ತಿಳಿಸಿದರು.

ನೀರಿನ ಟ್ಯಾಂಕ್‌ಗಳು ಹಾಗೂ ಪಂಚಾಯಿತಿ ನಲ್ಲಿಗಳ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಡುವುದು, ಬಾವಿ ಮತ್ತು ಕೊಳವೆಬಾವಿಗಳ ಬಳಿ ಕಸ ಹಾಕುವುದು ಅಥವಾ ಬಟ್ಟೆ ತೊಳೆಯುವುದನ್ನು ತಪ್ಪಿಸುವುದು ಅಗತ್ಯ ಎಂದು ಹೇಳಿದರು. ನೀರನ್ನು ಸದಾ ಮುಚ್ಚಿದ ಪಾತ್ರೆಗಳಲ್ಲಿ ಸಂಗ್ರಹಿಸಿಡಬೇಕು ಮತ್ತು ಸಾಧ್ಯವಾದಷ್ಟು ಕುದಿಸಿ ಆರಿಸಿ ಕುಡಿಯುವುದು ಆರೋಗ್ಯದ ದೃಷ್ಟಿಯಿಂದ ಉತ್ತಮ ಎಂದು ತಿಳಿಸಿದರು. ಬೇಸಿಗೆ ಸಮಯದಲ್ಲಿ ಕಲುಷಿತ ನೀರಿನಿಂದ ಕಾಲರಾ, ಅತಿಸಾರ ಸೇರಿದಂತೆ ವಿವಿಧ ರೋಗಗಳು ಹರಡುವ ಸಾಧ್ಯತೆ ಇರುವುದರಿಂದ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು ಎಂದು ಸೂಚಿಸಿದರು.

ಕಾರ್ಯಕ್ರಮದಲ್ಲಿ ಪಂಚಾಯಿತಿ ಆಡಳಿತಾಧಿಕಾರಿಗಳು, ಎಇಇ ಆನಂದ್ ಕುಮಾರ್, ಅಕ್ಷರ ದಾಸೋಹ ಯೋಜನೆಯ ನಿರ್ದೇಶಕ ಯುವರಾಜ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸರಸ್ವತಿ, ಗ್ರಾಮ ಆಡಳಿತ ಅಧಿಕಾರಿ ಶ್ವೇತಾ, ಮಾಜಿ ಸದಸ್ಯ ಮುನಿರಾಜು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಭಾರತ ಸಾರಥಿ
01/05/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಉಗ್ರರ ಕರಿನೆರಳು

ಬೆಂಗಳೂರು

ಈ ಘಟನೆ ನಡೆದ 90 ನಿಮಿಷಗಳ ನಂತರ ಅನ್ಸಾರಿಯನ್ನು ಬಂಧಿಸಲಾಯಿತು. ಪೊಲೀಸರು ಅವನನ್ನು ಪತ್ತೆಹಚ್ಚಲು ಪ್ರದೇಶದ ಸಿಸಿಟಿವಿ ದೃಶ್ಯಾವಳಿಗಳನ್ನು ವೀಕ್ಷಿಸಿ ಕಾರ್ಯಾಚರಣೆ ನಡೆಸಿದರು. ಈ ಪ್ರಕರಣವನ್ನು ಎನ್‌ಐಎ ತನಿಖೆಗೆ ಒಪ್ಪಿಸುವುದಾಗಿ ಮುಖ್ಯಮಮತ್ರಿ ದೇವೇಂದ್ರ ಫಡ್ನವೀಸ್ ಹೇಳಿದ್ದಾರೆ.

ಬಂಧನದ ನಂತರ ಅನ್ಸಾರಿಯನ್ನು ಥಾಣೆಯ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಮೇ 4ರವರೆಗೆ ಆತನನ್ನು ಪೊಲೀಸ್ ಕಸ್ಟಡಿಗೆ ನೀಡಲಾಗಿದೆ. ಪೊಲೀಸ್ ಮತ್ತು ರಾಜ್ಯ ಭಯೋತ್ಪಾದನಾ ನಿಗ್ರಹ ದಳದ ತಂಡವು ದಾಳಿಯ ತನಿಖೆ ನಡೆಸುತ್ತಿದೆ. ಇದು ಸಾಮಾನ್ಯವಾದ ದಾಳಿಯೇ ಅಥವಾ ದೊಡ್ಡ ಪಿತೂರಿಯ ಭಾಗವೇ ಎಂಬುದನ್ನು ಪತ್ತೆಹಚ್ಚಲು ಅಧಿಕಾರಿಗಳು ಈಗ ಅನ್ಸಾರಿಯಿಂದ ವಶಪಡಿಸಿಕೊಂಡ ಮೊಬೈಲ್ ಫೋನ್‌ಗಳು ಮತ್ತು ಎಲೆಕ್ಟ್ರಾನಿಕ್ ಸಾಧನಗಳನ್ನು ಪರಿಶೀಲಿಸುತ್ತಿದ್ದಾರೆ. ಮೂಲಗಳು ಹೇಳುವಂತೆ ಅನ್ಸಾರಿ ಬರೆದುಕೊಂಡ ನೋಟ್‌ಗಳಲ್ಲಿ 'ISIS', 'ಒಂಟಿ ತೋಳ', 'ಜಿಹಾದ್' ಮತ್ತು 'ಗಾಜಾ' ಮುಂತಾದ ಪದಗಳನ್ನು ಬರೆಯಲಾಗಿದೆ.

ಅನ್ಸಾರಿ ಹಲವಾರು ವರ್ಷಗಳಿಂದ ಅಮೆರಿಕದಲ್ಲಿ ವಾಸಿಸುತ್ತಿದ್ದ. ಆತನ ಕುಟುಂಬದ ಸದಸ್ಯರು ಇನ್ನೂ ಆ ದೇಶದಲ್ಲಿ ವಾಸಿಸುತ್ತಿದ್ದಾರೆ ಎಂದು ಮೂಲಗಳು ಹೇಳಿವೆ. ಆತನಿಗೆ ಅಲ್ಲಿ ಕೆಲಸ ಸಿಗಲಿಲ್ಲ. ಹೀಗಾಗಿ ಭಾರತಕ್ಕೆ ಮರಳಬೇಕಾಯಿತು.

## ಸಿದ್ದರಾಮಯ್ಯ ಮೌನ

ಬೆಂಗಳೂರು

ವಿಶೇಷವೆಂದರೆ, ಸತೀಶ್ ಜಾರಕಿಹೊಳಿ ಅವರು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದು, ಡಿಕೆಶಿಗೆ ನೀಡಿದಂತೆ ತಮಗೂ ಅಧಿಕಾರ ನೀಡಬೇಕು ಎಂಬ ಬೇಡಿಕೆಯನ್ನು ಹೈಕಮಾಂಡ್ ಮುಂದಿಟ್ಟಿದ್ದಾರೆ ಎನ್ನಲಾಗಿದೆ.

ಏತನ್ಮಧ್ಯೆ, ಕಾಂಗ್ರೆಸ್ ಹೈಕಮಾಂಡ್‌ನಿಂದ ಡಿಕೆ ಶಿವಕುಮಾರ್‌ಗೆ ಬಿಗ್ ಬರ್ತ್‌ಡೇ ಗಿಫ್ಟ್ ಸಿಗಲಿದೆ ಎಂಬ ಊಹಾಪೋಹಗಳ ಬಗ್ಗೆ ಗೃಹ ಸಚಿವ ಜಿ ಪರಮೇಶ್ವರ ನೀಡಿರುವ ಪ್ರತಿಕ್ರಿಯೆ ಕೂಡ ಕುತೂಹಲಕ್ಕೆ ಕಾರಣವಾಗಿದೆ. ಇಷ್ಟು ದಿನ "ಸಿಎಂ ಬದಲಾವಣೆ ಇಲ್ಲ" ಎನ್ನುತ್ತಿದ್ದ ಪರಮೇಶ್ವರ್, ಈಗ "ಹೈಕಮಾಂಡ್ ನಿರ್ಧಾರವೇ ಅಂತಿಮ" ಎಂದಿರುವುದು ಗೊಂದಲವನ್ನು ಮತ್ತಷ್ಟು ಹೆಚ್ಚಿಸಿದೆ. ಮೇ 15ರ ಡಿಕೆಶಿ ಹುಟ್ಟುಹಬ್ಬದ ವೇಳೆಗೆ ಹೈಕಮಾಂಡ್ ಏನಾದರೂ 'ಗಿಫ್ಟ್' ನೀಡಲಿದೆಯೇ ಎಂಬ ಚರ್ಚೆ ಜೋರಾಗಿದ್ದು, ಅಸ್ತಿತ್ವ ಉಳಿಸಿಕೊಳ್ಳಲು ಅಹಿಂದ ನಾಯಕರು ಈಗಲೇ ದಾಳ ಉರುಳಿಸುತ್ತಿದ್ದಾರೆ.

## ರಷ್ಯಾದಿಂದ ಮತ್ತಷ್ಟು ಎಸ್-400

ಬೆಂಗಳೂರು

ಇದು ಭಾರತದ ರಕ್ಷಣಾ ವ್ಯವಸ್ಥೆಗೆ ದೊಡ್ಡ ಶಕ್ತಿ ನೀಡಲಿದೆ. ಆಪರೇಷನ್ ಸಿಂಧೂರ್ ಸಮಯದಲ್ಲಿ ಎಸ್–400 ಕ್ಷಿಪಣಿ ವ್ಯವಸ್ಥೆಗಳು ನಿರ್ಣಾಯಕ ಪಾತ್ರ ವಹಿಸಿದ್ದವು. ಪಾಕಿಸ್ತಾನದ ಕ್ಷಿಪಣಿಗಳನ್ನು ರಷ್ಯಾದಿಂದ ಮತ್ತೆ ಐದು ಎಸ್–400 ಕ್ಷಿಪಣಿ ವ್ಯವಸ್ಥೆಗಳ ಹೊಸ ಬ್ಯಾಚ್ ಖರೀದಿಗೆ ಅನುಮೋದನೆ ನೀಡಿದ್ದು, ಇದು ಒಟ್ಟು ಕ್ಷಿಪಣಿಗಳ ಸಂಖ್ಯೆಯನ್ನು 10ಕ್ಕೆ ಹೆಚ್ಚಿಸಿದೆ. ಕ್ಷಿಪಣಿ ವ್ಯವಸ್ಥೆಯ ನಾಲ್ಕನೇ ಘಟಕವನ್ನು ಈಗಾಗಲೇ ರವಾನಿಸಲಾಗಿದೆ ಮತ್ತು ಮುಂದಿನ ಕೆಲವು ದಿನಗಳಲ್ಲಿ ಅದು ಭಾರತವನ್ನು ತಲುಪುವ ನಿರೀಕ್ಷೆಯಿದೆ

## ಪ್ರಸ್ತಾಪ ತಿರಸ್ಕಾರ

ಬೆಂಗಳೂರು

ತೆಗೆದುಹಾಕಬಹುದು ಎಂದು ಆಡಳಿತದ ಅಧಿಕಾರಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

ಆದಾಗ್ಯೂ, ಇಂಧನ ಬೆಲೆಗಳನ್ನು ಉಳಿಸಿಕೊಳ್ಳುವ ಉದ್ದೇಶದಿಂದ ದಿಗ್ಬಂಧನವನ್ನು ಕಾಯ್ದುಕೊಳ್ಳುವುದರಿಂದ ಅಮೆರಿಕ ತನ್ನದೇ ಆದ ಅಪಾಯಗಳಿಗೆ ಒಳಗಾಗುವ ಸಾಧ್ಯತೆ ಇರುವುದರಿಂದ ಮುಂದಿನ ಹಂತದ ಕಾರ್ಯತಂತ್ರವು ಅನಿಶ್ಚಿತವಾಗಿಯೇ ಉಳಿದಿದೆ ಎಂದು ಸಿಎನ್‌ಎನ್ ವರದಿ ಮಾಡಿದೆ.

ಇರಾನಿನ ಸರ್ಕಾರದೊಳಗಿನ ಆಂತರಿಕ ಬಿರುಕುಗಳ ಇರುವಿಕೆ ವಿಚಾರದಲ್ಲಿ ಅಮೆರಿಕದ ಪ್ರತಿನಿಧಿಗಳು ಜಾಗರೂಕರಾಗಿದ್ದಾರೆ. ಇರಾನಿನ ಯಾವ ವ್ಯಕ್ತಿ ನಿರೀಕ್ಷಿತ ಒಪ್ಪಂದದ ಮೇಲೆ ಅಂತಿಮ ನಿರ್ಧಾರ ತೆಗೆದುಕೊಳ್ಳುವ ಅಧಿಕಾರವನ್ನು ಉಳಿಸಿಕೊಳ್ಳುತ್ತಾರೆ ಎಂಬ ಬಗ್ಗೆ ಖಚಿತತೆ ಇಲ್ಲ.

ಈ ರಾಜತಾಂತ್ರಿಕ ಬಿಕ್ಕಟ್ಟಿನ ಹೊರತಾಗಿಯೂ, ಕಳೆದ ವಾರ ಕದನ ವಿರಾಮವನ್ನು ವಿಸ್ತರಿಸುವ ನಿರ್ಧಾರದ ನಂತರ ಅಮೆರಿಕ ಬಾಂಬ್ ದಾಳಿ ಕಾರ್ಯಾಚರಣೆ ನಡೆಸುವುದಿಲ್ಲ ಎಂದು ಟ್ರಂಪ್ ತಿಳಿಸಿದ್ದು. ಸದ್ಯ ನಡೆಯುತ್ತಿರುವ ಮಾತುಕತೆಗಳ ನಿರ್ದಿಷ್ಟ ವಿವರಗಳ ಕುರಿತು ಮಾಹಿತಿ ನೀಡಲು ಶ್ವೇತಭವನ ನಿರಾಕರಿಸಿದೆ.

ಈ ಕುರಿತು ಮಾತನಾಡಿರುವ ಸಹಾಯಕ ಪತ್ರಿಕಾ ಕಾರ್ಯದರ್ಶಿ ಒಲಿವಿಯಾ ವೇಲ್ಸ್, ಇವು ಸೂಕ್ಷ್ಮ ರಾಜತಾಂತ್ರಿಕ ಚರ್ಚೆಗಳು ಈ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯಿಸುವುದಿಲ್ಲ. ಆಡಳಿತವು ದೀರ್ಘಕಾಲೀನ ನಿರ್ಣಯದ ಮೇಲೆ ಕೇಂದ್ರೀಕರಿಸಿದೆ. ಇರಾನ್ ಪರಮಾಣು ಶಸ್ತ್ರಾಸ್ತ್ರವನ್ನು ಹೊಂದಲು ಟ್ರಂಪ್ ಎಂದಿಗೂ ಅವಕಾಶ ನೀಡದೆ, ಅಮೆರಿಕ ಮೊದಲು ಇರಿಸುವ ಒಪ್ಪಂದವನ್ನು ಮಾತ್ರ ಮಾಡುತ್ತದೆ ಎಂದರು.

## ಪತ್ರಿಕೆ ಓದಿಸುವ ಕ್ರಮಕ್ಕೆ ಸ್ವಾಗತ

ಬೆಂಗಳೂರು

ಶಾಲೆಗಳಲ್ಲಿ ಪತ್ರಿಕೆಗಳ ಪ್ರಮುಖ ಸುದ್ದಿಗಳನ್ನು ಪ್ರತಿನಿತ್ಯ ಓದುವ ಕ್ರಮ ಕಡ್ಡಾಯ ಮಾಡಿರುವ ಸರ್ಕಾರದ ಕ್ರಮವನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂಜೆ) ಸ್ವಾಗತಿಸಿದೆ.

ಶಾಲೆಗಳಲ್ಲಿ ಓದುವ ಮತ್ತು ಬೋರ್ಡ್ ಮೇಲೆ ಬರೆಯುವ, ನೋಟೀಸ್ ಬೋರ್ಡ್ ನಲ್ಲಿ ಹಾಕುವ ಅಭ್ಯಾಸವು ಮಾಸುತ್ತಿದೆ. ಮೊಬೈಲ್ ಯುಗದ ಪ್ರಭಾವದಲ್ಲಿ ಹಿಂದಿನ ಪದ್ಧತಿಗಳು ಮರೆತು ಹೋಗುತ್ತಿರುವ ಈ ಹೊತ್ತಿನಲ್ಲಿ ಸರ್ಕಾರದ ಕ್ರಮ ಅಗತ್ಯವಿತ್ತು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ತಿಳಿಸಿದ್ದಾರೆ.

ಉತ್ತರ ಪ್ರದೇಶ ಸರ್ಕಾರ ಅಲ್ಲಿನ ಸರ್ಕಾರಿ ಶಾಲೆಗಳಲ್ಲಿ ದಿನಪತ್ರಿಕೆ ಓದುವುದನ್ನು ಡಿಸೆಂಬರ್/2025 ರಲ್ಲಿ ಕಡ್ಡಾಯ ಮಾಡಿದ್ದು, ಇದೇ ರೀತಿಯಲ್ಲಿ ರಾಜ್ಯ ಸರ್ಕಾರ ಕೂಡ ಕ್ರಮಕೈಗೊಳ್ಳುವಂತೆ ಆಗ್ರಹಿಸಿ ಕೆಯುಡಬ್ಲ್ಯೂಜೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿತ್ತು.

# ಗೋಮಾತೆಯ ಗೌರವಕ್ಕಾಗಿ ಮನವಿ

ಬೆಂಗಳೂರು

ಗೋಮಾತೆಯ ಗೌರವ ಹಾಗೂ ರಕ್ಷಣೆಗೆ ಒತ್ತಾಯಿಸಿ ಬೆಂಗಳೂರು ದಕ್ಷಿಣ ಮತ್ತು ಉತ್ತರ ತಾಲ್ಲೂಕು ಘಟಕಗಳ ವತಿಯಿಂದ ಇಂದು ಬೆಳಿಗ್ಗೆ ತಹಶೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ನಗರದ ಮೈಸೂರು ಬ್ಯಾಂಕ್ ವೃತ್ತದಲ್ಲಿರುವ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಪೂಜೆ ನೆರವೇರಿಸಿ ಗೋಪೂಜೆ ಮಾಡಲಾಯಿತು. ಬಳಿಕ ಮಂಗಳವಾದ್ಯ, ಭಜನೆ ಹಾಗೂ ಸಂಕೀರ್ತನೆಗಳೊಂದಿಗೆ ಭಕ್ತಿಭಾವದಿಂದ ಮೆರವಣಿಗೆ ನಡೆಯಿತು.

ಈ ಮೆರವಣಿಗೆಗೆ ಆರೂಢ ಭಾರತೀ ಸ್ವಾಮೀಜಿ, ಸಂಗಮನಂದ ಸ್ವಾಮೀಜಿ ಹಾಗೂ ಪ್ರಮೋದ್ ಮುತ್ತಾಲಿಕ್ ನೇತೃತ್ವ ನೀಡಿದರು. ನೂರಾರು ಸಂತರು, ಗೋಭಕ್ತರು, ಗೋಸೇವಕರು, ದೇಶಭಕ್ತರು, ಜನನಾಯಕರು,



ಮಹಿಳೆಯರು, ಮಕ್ಕಳು ಹಾಗೂ ಕೃಷ್ಣವೇಷಧಾರಿಗಳು ಭಾಗವಹಿಸಿದರು.

ತಹಶೀಲ್ದಾರರ ಅನುಪಸ್ಥಿತಿಯಲ್ಲಿ ಅಧಿಕಾರಿಗಳು ಮನವಿಯನ್ನು ಸ್ವೀಕರಿಸಿ, ಮನವಿಯಲ್ಲಿರುವ ಬೇಡಿಕೆಗಳನ್ನು ಮಾನ್ಯ ಮುಖ್ಯಮಂತ್ರಿಗಳಿಗೆ, ರಾಜ್ಯಪಾಲರಿಗೆ, ಪ್ರಧಾನಮಂತ್ರಿಗಳಿಗೆ ಹಾಗೂ ರಾಷ್ಟ್ರಪತಿಗಳಿಗೆ ಕಳುಹಿಸಲಾಗುವುದಾಗಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ತಾಯಿಯ ಹಾಲಿನ ನಂತರ ಮಾನವ ಜೀವನಕ್ಕೆ ಗೋಕ್ಷೀರ ಅತ್ಯಂತ ಮುಖ್ಯವೆಂದು ಹೇಳಿದರು. ಗೋಮಾತೆಯನ್ನು ಜನ್ಮತಾಯಿ ಹಾಗೂ ರಾಷ್ಟ್ರಮಾತೆಯಂತೆ ಗೌರವಿಸಬೇಕೆಂದು ಒತ್ತಿಹೇಳಿದರು.

ಮನವಿಯಲ್ಲಿ ಗೋವನ್ನು ರಾಷ್ಟ್ರಮಾತೆ ಎಂದು ಘೋಷಿಸುವುದು, ಏಕ ಕಾನೂನಿನಡಿ ಗೋಹತ್ಯೆ ನಿಷೇಧ ಜಾರಿಗೊಳಿಸುವುದು, ಗೋಮಾಳವನ್ನು ಗೋಸಂರಕ್ಷಣೆಗೆ ಮೀಸಲಿಡುವುದು ಹಾಗೂ ಗೋಶಾಲೆ ಮತ್ತು ಗೋಉದ್ಯಮಕ್ಕೆ ಅಗತ್ಯ ಅನುದಾನ ಮತ್ತು ಬೆಂಬಲ ನೀಡುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿರಿಸಲಾಗಿದೆ.

# ಒತ್ತುವರಿ ತೆರವು: 88 ಸಾವಿರ ರೂ. ದಂಡ

ಬೆಂಗಳೂರು

ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಗೆ ಒಳಪಟ್ಟ ಜಯನಗರ ವಾಣಿಜ್ಯ ಸಂಕೀರ್ಣದಲ್ಲಿ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಗಿದ್ದು, ಒಟ್ಟು 88,200 ದಂಡ ವಸೂಲಿ ಮಾಡಲಾಗಿದೆ ಎಂದು ಆಯುಕ್ತ ಕೆ.ಎನ್. ರಮೇಶ್ ತಿಳಿಸಿದ್ದಾರೆ.

ಸುಮಾರು 15,000 ಚದರ ಅಡಿ ವಿಸ್ತೀರ್ಣ ಹೊಂದಿರುವ ಈ ಸಂಕೀರ್ಣದಲ್ಲಿ 270ಕ್ಕೂ ಹೆಚ್ಚು ಅಂಗಡಿಗಳು ಕಾರ್ಯನಿರ್ವಹಿಸುತ್ತಿದ್ದು, ಕಾರಿಡಾರ್‌ಗಳು, ಪಾದಚಾರಿ ಮಾರ್ಗಗಳು ಮತ್ತು ಸಾರ್ವಜನಿಕ ಸ್ಥಳಗಳನ್ನು ಅಂಗಡಿ ಮಾಲೀಕರು ಹಾಗೂ ವ್ಯಾಪಾರಿಗಳು ಅತಿಕ್ರಮಿಸಿಕೊಂಡಿರುವ ಬಗ್ಗೆ ಸಾರ್ವಜನಿಕರಿಂದ ಹಲವು ದೂರುಗಳು ಬಂದಿದ್ದವು.

ಈ ಹಿನ್ನೆಲೆಯಲ್ಲಿ ಕಳೆದ ಮೂರು ದಿನಗಳಿಂದ ಪಾಲಿಕೆ ಅಧಿಕಾರಿಗಳು ಅಂಗಡಿ ಮಾಲೀಕರಿಗೆ ತಮ್ಮ ವ್ಯಾಪ್ತಿಯನ್ನು ಮೀರಿದ ಅನಧಿಕೃತ ಒತ್ತುವರಿಯನ್ನು ಸ್ವಯಂಪ್ರೇರಿತವಾಗಿ ತೆರವುಗೊಳಿಸುವಂತೆ ಜಾಗೃತಿ ಮೂಡಿಸಿದ್ದರು. ಆದಾಗ್ಯೂ, ಸೂಚನೆಗಳ ನಂತರವೂ ಒತ್ತುವರಿ ಮುಂದುವರೆದ ಹಿನ್ನೆಲೆಯಲ್ಲಿ ಪಾಲಿಕೆಯಿಂದ ಕಠಿಣ ಕ್ರಮ ಕೈಗೊಳ್ಳಲಾಗಿದೆ. ಕಾರಿಡಾರ್ ಮತ್ತು ಪಾದಚಾರಿ ಮಾರ್ಗಗಳನ್ನು ಅತಿಕ್ರಮಿಸಿರುವ ಹಿನ್ನೆಲೆಯಲ್ಲಿ ಒಟ್ಟು 39 ಪ್ರಕರಣಗಳನ್ನು



ದಾಖಲಿಸಿ, ಉಲ್ಲಂಘನೆದಾರರಿಗೆ ರೂ.88,200 ದಂಡ ವಿಧಿಸಲಾಗಿದೆ ಎಂದು ಆಯುಕ್ತರು ತಿಳಿಸಿದ್ದಾರೆ.

ಸಾರ್ವಜನಿಕರ ಸುಗಮ ಸಂಚಾರಕ್ಕೆ ಅಡ್ಡಿಯಾಗುವಂತಹ ಯಾವುದೇ ರೀತಿಯ ಒತ್ತುವರಿಯನ್ನು ಸಹಿಸಲಾಗುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ನೀಡಿರುವ ಪಾಲಿಕೆ, ಎಲ್ಲಾ ಅಂಗಡಿ ಮಾಲೀಕರಿಗೂ ಎಚ್ಚರಿಕೆ ನೀಡಿದೆ. ಸಂಪೂರ್ಣವಾಗಿ ಒತ್ತುವರಿ ತೆರವುಗೊಳಿಸುವವರೆಗೆ ಈ ವಿಶೇಷ ಕಾರ್ಯಾಚರಣೆ ಮುಂದುವರಿಯಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮುಂದಿನ ದಿನಗಳಲ್ಲಿಯೂ ಒತ್ತುವರಿ ಮುಂದುವರೆದರೆ, ಸಾರ್ವಜನಿಕ ಹಿತದೃಷ್ಟಿಯಿಂದ ಕಠಿಣ ಕಾನೂನು ಕ್ರಮಗಳೊಂದಿಗೆ ವಾಣಿಜ್ಯ ಪರವಾನಿಗೆ ರದ್ದುಪಡಿಸುವಂತಹ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಆಯುಕ್ತ ಕೆ.ಎನ್. ರಮೇಶ್ ಎಚ್ಚರಿಕೆ ನೀಡಿದ್ದಾರೆ.

## 'ಸ್ವಾರ್ಥಿಗಳು ಸಿಎಂ ಆಗಲು ಹೊರಟಿರುವುದು ದುರಂತ'

ಬೆಂಗಳೂರು

ನಾಲ್ಕು ವೋಟಿಗೋಸ್ಕರ ದೇಶದ್ರೋಹಿಗಳನ್ನು ಬ್ರದರ್ಸ್ ಎಂದು ಸಮರ್ಥನೆ ಮಾಡಿಕೊಳ್ಳುವ ಸ್ವಾರ್ಥಿಗಳು ನಾಡಿನ ಸಿಎಂ ಆಗಲು ಹೊರಟಿರುವುದು ಕರ್ನಾಟಕದ ದುರಂತ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು ಅಂದು ಮಂಗಳೂರು ಕುಕ್ಕರ್ ಬಾಂಬ್ ಸ್ಫೋಟವನ್ನು ಕೇವಲ 'ಡೈವರ್ಶನ್ ಪಾಲಿಟಿಕ್ಸ್' ಎಂದು ಲೇವಡಿ ಮಾಡಿ ಉಗ್ರರ ಪರ ನಿಂತಿದ್ದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕಾಂಗ್ರೆಸ್ ನಾಯಕರಿಗೆ ಈಗ ಸತ್ಯದ ದರ್ಶನವಾಗಿದೆ! ಇಂದು ಮಂಗಳೂರು ಸ್ಫೋಟದ ರೂವಾರಿ ಉಗ್ರ ತಾರೀಕಿಗೆ ನ್ಯಾಯಾಲಯ ಶಿಕ್ಷೆ ವಿಧಿಸಿರುವುದನ್ನ ಉಲ್ಲೇಖಿಸಿ ಹೇಳಿದ್ದಾರೆ.

ಉಗ್ರ ಶಾರೀಕ್‌ನ ಕೃತ್ಯ ಸಾಬೀತಾಗಿದ್ದು, ಎನ್‌ಐಎ ನ್ಯಾಯಾಲಯ ಆತನಿಗೆ 10 ವರ್ಷಗಳ ಕಠಿಣ ಶಿಕ್ಷೆ ವಿಧಿಸಿದೆ. ರಾಷ್ಟ್ರೀಯ ಭದ್ರತೆಯಂತಹ ಗಂಭೀರ ವಿಚಾರದಲ್ಲೂ ಕೇವಲ ತುಷ್ಟೀಕರಣ ಮತ್ತು ಓಲೈಕೆ ರಾಜಕಾರಣ ಮಾಡುವ ರಾಜ್ಯ ಕಾಂಗ್ರೆಸ್‌ನದ ನೈಜ ಮುಖವಾಡ ಕಳಚಿದೆ. ಎಂದು ತಿಳಿಸಿದ್ದಾರೆ.

ದೇಶದ ಭದ್ರತೆಗಿಂತ ಕಾಂಗ್ರೆಸ್‌ಗೆ ವೋಟ್ ಬ್ಯಾಂಕ್ ರಾಜಕಾರಣವೇ ಮುಖ್ಯವಾಗಿದೆ. ಕಾಂಗ್ರೆಸ್ ಇನ್ನಾದರೂ ಮತಾಂಧರನ್ನು ತಮ್ಮ ಬ್ರದರ್ಸ್ ಎಂದು ಸಮರ್ಥನೆ ಮಾಡಿಕೊಳ್ಳುವುದನ್ನ ಬಿಡಬೇಕು ಎಂದು ಆರ್ ಅಶೋಕ್

# ಉಗ್ರರ ಕುರಿತ ಪುಸ್ತಕ ಬಿಡುಗಡೆಗೆ ಖಂಡನೆ

ಬೆಂಗಳೂರು

ದೆಹಲಿ ಗಲಭೆ ಪ್ರಕರಣದಲ್ಲಿ ಆರೋಪಿಯಾಗಿರುವ ಉಮರ್ ಖಾಲಿದ್ ಕುರಿತು ಬೆಂಗಳೂರಿನ ದೊಮ್ಮಲೂರು 2ನೇ ಹಂತದಲ್ಲಿರುವ ಬೆಂಗಳೂರು ಇಂಟರ್‌ನ್ಯಾಷನಲ್ ಸೆಂಟರ್ ನಲ್ಲಿ "ಉಮರ್ ಖಾಲಿದ್ ಅಂಡ್ ಹಿಸ್ ವರ್ಲ್ಡ್" ಎಂಬ ಕಾರ್ಯಕ್ರಮ ಆಯೋಜಿಸಿರುವುದನ್ನು ಖಂಡಿಸಿ ಹಿಂದೂ ಜನಜಾಗೃತಿ ಸಮಿತಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ.

ಸಂಸ್ಥೆಯ ರಾಜ್ಯ ವಕ್ತಾರ ಮೋಹನ್ ಗೌಡ ಅವರು ಈ ಕುರಿತು ಪ್ರಕಟಣೆ ನೀಡಿದ್ದು, ದೆಹಲಿ ಗಲಭೆ ಹಾಗೂ ಭಯೋತ್ಪಾದನಾ ಚಟುವಟಿಕೆಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಆರೋಪಿಯಾಗಿರುವ ವ್ಯಕ್ತಿಯ ಕುರಿತು ಕಾರ್ಯಕ್ರಮ ಆಯೋಜಿಸಿರುವುದು ಅಸಮಂಜಸ ಎಂದು ಹೇಳಿದ್ದಾರೆ. ಈ ಕಾರ್ಯಕ್ರಮವನ್ನು ತಕ್ಷಣ ರದ್ದುಪಡಿಸುವಂತೆ ಇಂದಿರಾನಗರ ಪೊಲೀಸ್ ಠಾಣೆಗೆ ಹಾಗೂ ಮೇಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಆದರೆ, ಕಾರ್ಯಕ್ರಮವನ್ನು ರದ್ದುಪಡಿಸುವ ಬದಲು ಪ್ರತಿಭಟನೆ ನಡೆಸಲು ಅನುಮತಿ ನಿರಾಕರಿಸಿ ನೋಟಿಸ್ ನೀಡಿರುವುದನ್ನು ಅವರು ಪ್ರಶ್ನಿಸಿದ್ದಾರೆ. ಹಿಂದೂ ಸಂಘಟನೆಗಳು ಸಣ್ಣ ಮಟ್ಟದ ಕಾರ್ಯಕ್ರಮಗಳನ್ನು ನಡೆಸಿದರೂ ಪೊಲೀಸರು ಕಟ್ಟುನಿಟ್ಟಿನ ನಿಯಮಗಳನ್ನು ವಿಧಿಸುತ್ತಾರೆ, ಆದರೆ ಇಂತಹ ವಿವಾದಾತ್ಮಕ ಕಾರ್ಯಕ್ರಮಗಳಿಗೆ ಅವಕಾಶ ನೀಡಲಾಗುತ್ತಿರುವುದು ದ್ವಂದ್ವ ನೀತಿಯನ್ನು ತೋರಿಸುತ್ತದೆ ಎಂದು ಆರೋಪಿಸಿದ್ದಾರೆ.

ಭಯೋತ್ಪಾದನೆಗೆ ಬೆಂಬಲ ನೀಡುವ ಯಾವುದೇ ಚಟುವಟಿಕೆಯನ್ನು ಪ್ರಜಾಸತ್ತಾತ್ಮಕ ಸ್ವಾತಂತ್ರ್ಯದ ಹೆಸರಿನಲ್ಲಿ ಸಮರ್ಥಿಸಲಾಗುವುದಿಲ್ಲ ಎಂದು ಅವರು ಹೇಳಿದ್ದಾರೆ. ದೇಶದ ಭದ್ರತೆ ಮತ್ತು ಸಮಾಜದ ಶಾಂತಿ ಅತ್ಯಂತ ಮುಖ್ಯವಾಗಿದ್ದು, ಸರ್ಕಾರ ಇಂತಹ ಕಾರ್ಯಕ್ರಮಗಳನ್ನು ತಕ್ಷಣ ನಿಲ್ಲಿಸಬೇಕು ಎಂದು ಒತ್ತಾಯಿಸಿದ್ದಾರೆ.

ಇಲ್ಲವಾದಲ್ಲಿ ರಾಜ್ಯದ ಹಿಂದೂ ಸಮಾಜ ಹಾಗೂ ರಾಷ್ಟ್ರಭಕ್ತರು ಕಾನೂನುಬದ್ಧವಾಗಿ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಲಾಗಿದೆ.

# ಕಸದ ಸಮಸ್ಯೆಗೆ ಹೆಚ್ಚಿನ ಆದ್ಯತೆ ನೀಡಿ


ಬೆಂಗಳೂರು

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತರಾದ ಡಾ.ರಾಜೇಂದ್ರ.ಕೆ.ವಿ. ಅವರು ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಎಸ್.ಮುನಿರಾಜು ಅವರ ಸಮ್ಮುಖದಲ್ಲಿ ಕ್ಷೇತ್ರ ವ್ಯಾಪ್ತಿಯ ವಾರ್ಡ್‌ಗಳಿಗೆ ಸಂಬಂಧಿಸಿದ ವಿವಿಧ ಸಮಸ್ಯೆಗಳ ಕುರಿತು ಎರಡನೇ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ಸಾರ್ವಜನಿಕ ಸಮಸ್ಯೆಗಳು, ಮೂಲಸೌಕರ್ಯ ಅಭಿವೃದ್ಧಿ, ನಾಗರಿಕ ಸೇವೆಗಳ ಸುಧಾರಣೆ ಸೇರಿದಂತೆ ಹಲವು ವಿಷಯಗಳ ಬಗ್ಗೆ ಸಮಗ್ರ ಚರ್ಚೆ ನಡೆಸಿ, ಸಂಬಂಧಿತ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಯಿತು.

ಅಮೃತ ನಗರೋತ್ಥಾನ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು ಸೂಚನೆ ನೀಡಲಾಗಿದ್ದು, ನೀರಿನ ಕೊರತೆ ಇರುವ ಪ್ರದೇಶಗಳಲ್ಲಿ ಬೋರ್‌ವೆಲ್‌ಗಳನ್ನು ಅಳವಡಿಸಿ ಸಮರ್ಪಕ ನಿರ್ವಹಣೆ ಮಾಡಲು ಸೂಚಿಸಲಾಯಿತು.

ಸುರಕ್ಷಾ–75 ಯೋಜನೆಯಡಿ ಅಗತ್ಯವಿರುವ



ಸ್ಥಳಗಳನ್ನು ಗುರುತಿಸಿ ಸಿಗ್ನಲ್ ವ್ಯವಸ್ಥೆಯನ್ನು ಸುಧಾರಿಸುವುದು, ಟೋಯಿಂಗ್ ವಾಹನಗಳ ಕಾರ್ಯಾಚರಣೆಯನ್ನು ಪರಿಣಾಮಕಾರಿಯಾಗಿ ನಡೆಸುವುದು ಹಾಗೂ ಕಸದ ಸಮಸ್ಯೆ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಆಯುಕ್ತರು ತಿಳಿಸಿದರು. ವಿದ್ಯುತ್ ದೀಪಗಳ ನಿರ್ವಹಣೆ, ಪಾರ್ಕ್‌ಗಳ ಸಂರಕ್ಷಣೆ, ಕುಡಿಯುವ ನೀರು ಮತ್ತು ಶೌಚಾಲಯ ಸೌಲಭ್ಯಗಳ ಸುಧಾರಣೆಗೂ ಗಮನ ಹರಿಸಲು ಸೂಚಿಸಲಾಯಿತು.

ಅನಧಿಕೃತ ಫ್ಲೆಕ್ಸ್ ಹಾಗೂ ಬ್ಯಾನರ್‌ಗಳನ್ನು ತೆರವುಗೊಳಿಸುವುದು, ಪಾದಚಾರಿ ಮಾರ್ಗಗಳ ಮೇಲಿನ ಅನಧಿಕೃತ ಮಳಿಗೆಗಳನ್ನು ತೆರವುಗೊಳಿಸುವುದು ಹಾಗೂ ಹೊಸ ಅಪಾರ್ಟ್ಮೆಂಟ್ ಪ್ರದೇಶಗಳಲ್ಲಿ ಇ–ಖಾತಾ ಮೇಳಗಳನ್ನು ಆಯೋಜಿಸುವ ಬಗ್ಗೆ ನಿರ್ದೇಶನ ನೀಡಲಾಯಿತು.

ಮಳೆಗಾಲದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಹಾಗೂ ಯಾವುದೇ ಅವಾಂತರಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಲು ಸೂಚಿಸಲಾಯಿತು. ಚೊಕ್ಕಸಂದ್ರ ಕೆರೆಯ ಅಭಿವೃದ್ಧಿಗೆ ಆದ್ಯತೆ ನೀಡುವ ಜೊತೆಗೆ ಮರಗಳ ಕೊಂಬೆ ಕತ್ತರಿಸುವ ಕಾರ್ಯವನ್ನು ಸಮರ್ಪಕವಾಗಿ ಕೈಗೊಳ್ಳುವಂತೆ ತಿಳಿಸಲಾಯಿತು.

ವ್ಯಾಪಾರ ಪರವಾನಗಿ ಪರಿಶೀಲನೆ ನಡೆಸಿ ನಿಯಮ ಉಲ್ಲಂಘನೆ ಕಂಡುಬಂದಲ್ಲಿ ದಂಡ ವಿಧಿಸಲು ಸೂಚನೆ ನೀಡಲಾಗಿದ್ದು, ಮಟನ್ ಮತ್ತು ಚಿಕನ್ ಅಂಗಡಿಗಳಲ್ಲಿ ಸ್ವಚ್ಛತೆ ಕಾಪಾಡದಿದ್ದಲ್ಲಿ ನೋಟಿಸ್ ನೀಡಿ ಕಠಿಣ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಯಿತು. ಸಾರ್ವಜನಿಕ ಹಿತದೃಷ್ಟಿಯಿಂದ ಅಧಿಕಾರಿಗಳು ತಮ್ಮ ಕರ್ತವ್ಯಗಳನ್ನು ನಿಷ್ಠೆಯಿಂದ ನಿರ್ವಹಿಸುವಂತೆ ಆಯುಕ್ತರು ತಿಳಿಸಿದರು. ಸಭೆಯ ನಂತರ ಆಯುಕ್ತರು ಹಾಗೂ ಶಾಸಕರು ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿದರು.

ಈ ಸಭೆಯಲ್ಲಿ ಜಂಟಿ ಆಯುಕ್ತರಾದ ಆರತಿ ಆನಂದ್, ಉಪ ಆಯುಕ್ತರು (ಆಡಳಿತ) ಸಾಯಿದ್ ಆಫ್ರಿನ್ ಭಾನು, ಮುಖ್ಯ ಅಭಿಯಂತರರಾದ ಸ್ವಯಂ ಪ್ರಭಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಚೇತನ್‌ಗೆ ನಿಖಿಲ್ ತಿರುಗೇಟು

ಬೆಂಗಳೂರು

ಡಾ.ರಾಜ್‌ಕುಮಾರ್ ಎಂದರೆ ಆರು ಕೋಟಿ ಕನ್ನಡಿಗರ ಭಾವನೆ. ಅಣ್ಣಾವ್ರ ಬಗ್ಗೆ ಹಗುರವಾಗಿ ಮಾತನಾಡುವುದು ಅಹಂಕಾರದ ಪರಮಾವಧಿ. ಹೆಸರಿನಲ್ಲಿ ಅಹಿಂಸೆ ಇರಬಹುದು, ಆದರೆ ನಿಮ್ಮ ಪ್ರತಿಯೊಂದು ಮಾತೂ ಕನ್ನಡಿಗರ ಭಾವನೆಗಳಿಗೆ ಮಾಡುವ ಹಿಂಸೆ" ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನಟ ಚೇತನ್ ಅಹಿಂಸಾ ಅವರಿಗೆ ಖಡಕ್ ತಿರುಗೇಟು ನೀಡಿದ್ದಾರೆ.

ಡಾ. ರಾಜ್‌ಕುಮಾರ್ ಕುರಿತು ಚೇತನ್ ಮಾಡಿದ್ದ ಪೋಸ್ಟ್‌ಗೆ ಟ್ವೀಟ್ ಮೂಲಕ ಪ್ರತಿಕ್ರಿಯಿಸಿದ ನಿಖಿಲ್, "ಗೋಕಾಕ್ ಚಳವಳಿಯ ಮೂಲಕ ಕನ್ನಡಕ್ಕೆ ಅಸ್ಮಿತೆ ತಂದುಕೊಟ್ಟ ಧೀಮಂತ ವ್ಯಕ್ತಿತ್ವದ ಬಗ್ಗೆ ಟೀಕಿಸುವ ಮೊದಲು ಇತಿಹಾಸ ತಿಳಿದುಕೊಳ್ಳಿ" ಎಂದು ಸಲಹೆ ನೀಡಿದರು.

ಸಾರ್ವಜನಿಕ ಜೀವನದಲ್ಲಿ ಟೀಕೆಗಳು ಸಹಜವಾದರೂ ಅವುಗಳಿಗೆ ಒಂದು ಘನತೆ ಇರಬೇಕು" ಎಂದ ಅವರು, ನಮ್ಮ ಕುಟುಂಬದ ಮೇಲಿನ ವೈಯಕ್ತಿಕ ದಾಳಿ ಅಥವಾ ಸೋಲು–ಗೆಲುವಿನ ಮಾತುಗಳನ್ನು ನಾವು ಸದಾ ವಿನಮ್ರತೆಯಿಂದಲೇ ಸ್ವೀಕರಿಸುತ್ತೇವೆ ಎಂದು ಹೇಳಿದರು.

ಪ್ರಜಾಪ್ರಭುತ್ವದಲ್ಲಿ ಅಂತಿಮ ತೀರ್ಪುಗಾರರು ಜನರೇ ಹೊರತು, ಸಮಾಜದಲ್ಲಿ ದ್ವೇಷ ಬಿತ್ತುವ ವ್ಯಕ್ತಿಗಳಲ್ಲ. ಸಂಸ್ಕಾರ ಮನೆಯಿಂದ ಬರಬೇಕು, ಟೀಕೆಗಳು ಜನರ ಪ್ರೀತಿಯ ಅಡಿಪಾಯದ ಮೇಲಿರಬೇಕು. ಕೇವಲ ಪ್ರಚಾರದ ಹಪಾಹಪಿಯಿಂದಲ್ಲ ಎಂದು ನಿಖಿಲ್ ಕುಮಾರಸ್ವಾಮಿ ತಮ್ಮ ಪ್ರತಿಕ್ರಿಯೆಯಲ್ಲಿ ತಿಳಿಸಿದ್ದಾರೆ.

<u>ಧಮ್ ಇದ್ರೆ ಚುನಾವಣೆಗೆ ಸ್ಪರ್ಧಿಸಲಿ:</u> "ಚೇತನ್ ಹೇಳಿಕೆ ಯಾರ್ ಮಾತಾಡ್ತಾರೆ? ಧಮ್ ಇದ್ರೆ ಚುನಾವಣೆಗೆ ಸ್ಪರ್ಧೆ ಮಾಡಲಿ. ಮನೇಲಿ ಕೂತ್ಕೊಂಡು ಟ್ವೀಟ್ ಮಾಡೋದಕ್ಕೆ ಅವರೇ ಬೇಕಾ? ನನಗೂ ಬರವಣಿಗೆ ಗೊತ್ತು, ನಾನು ಸಾವಿರ ಟ್ವೀಟ್ ಮಾಡ್ತೀನಿ" ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನಟ ಚೇತನ್ ಅಹಿಂಸಾ ಅವರಿಗೆ ನೇರ ಸವಾಲು ಹಾಕಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಾ. ರಾಜ್‌ಕುಮಾರ್ ಸ್ಮಾರಕಕ್ಕೆ ಸರ್ಕಾರ ನೀಡಿರುವ ಜಾಗದ ಕುರಿತು ಚೇತನ್ ಮಾಡಿದ್ದ ಆಕ್ಷೇಪಕ್ಕೆ ತಿರುಗೇಟು ನೀಡಿದರು.

"ಚೇತನ್ ಅಹಿಂಸಾ ಟ್ವಿಟರ್‌ನಲ್ಲಿ ಅದು ಇದು ಬರೆದುಕೊಂಡಿದ್ದಾರೆ. ಇದರ ಬದಲು ಅವರಿಗೆ ತಾಕತ್ತು ಇದ್ದರೆ ಯಾವುದಾದರೊಂದು ಕ್ಷೇತ್ರದಲ್ಲಿ ಚುನಾವಣೆಗೆ ಸ್ಪರ್ಧಿಸಲಿ" ಎಂದು ನಿಖಿಲ್ ಕುಮಾರಸ್ವಾಮಿ ಅವರು ಸವಾಲು ಹಾಕಿದರು. "ಡಾ. ರಾಜ್‌ಕುಮಾರ್, ವಿಷ್ಣುವರ್ಧನ್, ಅಂಬರೀಶ್ ಅವರುಗಳು ಕನ್ನಡ ಚಿತ್ರರಂಗಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಇದೇ ಕಾರಣದಿಂದ ಇವರೆಲ್ಲ ನಿಧನರಾದಾಗ ರಾಜ್ಯ ಸರ್ಕಾರ ಸೂಕ್ತ ಗೌರವ ನೀಡಿದೆ" ಎಂದರು. "ಡಾ. ರಾಜ್‌ಕುಮಾರ್ ಅವರು ನಿಧನರಾದ ಸಂದರ್ಭದಲ್ಲಿ ಮುಖ್ಯಮಂತ್ರಿ ಆಗಿದ್ದ ಕುಮಾರಣ್ಣನವರು ಸ್ಮಾರಕ ನಿರ್ಮಾಣಕ್ಕೆ ಜಾಗ ನೀಡಿದರು. ಅಂಬರೀಶಣ್ಣ

## ಯುವತಿಯರು ಪಾರು

ಬೆಂಗಳೂರು

ಗೋಡೌನ್ ಪಕ್ಕದಲ್ಲೇ ಸುಮಾರು 50 ಯುವತಿಯರು ವಾಸವಿದ್ದ ಲೇಡಿಸ್ ಪಿಜಿ ಇತ್ತು. ಬೆಂಕಿಯ ಕೆನ್ನಾಲಿಗೆ ಮತ್ತು ದಟ್ಟ ಹೊಗೆ ಪಿಜಿಯ ಒಳಗೂ ಆವರಿಸುತ್ತಿದ್ದಂತೆ ಯುವತಿಯರು ತೀವ್ರ ಗಾಬರಿಗೊಂಡಿದ್ದಾರೆ. ಹೊರಗೆ ಬರಲು ದಾರಿಯಿಲ್ಲದೆ ಆತಂಕಗೊಂಡ ಕೆಲ ಯುವತಿಯರು ಮೊದಲ ಮಹಡಿಯಿಂದ ಕೆಳಕ್ಕೆ ಜಿಗಿದಿದ್ದಾರೆ. ಇನ್ನೂ ಕೆಲವರು ಪ್ರಾಣ ಉಳಿಸಿಕೊಳ್ಳಲು ಪಿಜಿಯ ಕಾಂಪೌಂಡ್ ಗೋಡೆ ಹಾರಿ ಹೊರಬಂದಿದ್ದಾರೆ.

ಗೋಡೆ ಹಾರುವ ಮತ್ತು ಜಿಗಿಯುವ ಸಂದರ್ಭದಲ್ಲಿ ಕೆಲವು ಯುವತಿಯರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಘಟನಾ ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿ ಧಾವಿಸಿ ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸಿದರು.

ಬೆಂಕಿಯ ಆವೇಶಕ್ಕೆ ಇಡೀ ಗೋಡೌನ್ ಸುಟ್ಟು ಕರಕಲಾಗಿದ್ದು, ಸ್ಥಳೀಯ ನಿವಾಸಿಗಳು ತಡರಾತ್ರಿ ಬೆಚ್ಚಿಬಿದ್ದಿದ್ದರು. ಸದ್ಯ ಪರಿಸ್ಥಿತಿ ನಿಯಂತ್ರಣದಲ್ಲಿದ್ದು, ನಂದಿನಿ ಲೇಔಟ್ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಬೆಂಕಿ ತಗುಲಲು ನಿಖರ ಕಾರಣವೇನು ಎಂಬ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

ಗೋಡೌನ್‌ನಲ್ಲಿ ಸಂಭವಿಸಿದ ಬೆಂಕಿ ಅವಘಡದ ಬೆನ್ನಲ್ಲೇ ಈಗ ಮಾಲೀಕ ಮತ್ತು ಸ್ಥಳೀಯ ನಿವಾಸಿಗಳ ನಡುವೆ ಭಾರೀ ಗಲಾಟೆ ಶುರುವಾಗಿದೆ. ಬೆಂಕಿಯ ಅಬ್ಬರಕ್ಕೆ ತಮ್ಮ ಆಸ್ತಿಪಾಸ್ತಿ ಕಳೆದುಕೊಂಡ ಅಕ್ಕಪಕ್ಕದ ನಿವಾಸಿಗಳು ಗೋಡೌನ್ ಮಾಲೀಕನ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಬೆಂಕಿ ಮನೆಗಳಿಗೆ ಆವರಿಸಿದ್ದರಿಂದ ಗೇಟ್, ಕಿಟಕಿ ಹಾಗೂ ಮನೆಯ ಮುಂಭಾಗದ ವಸ್ತುಗಳು ಸುಟ್ಟು ಕರಕಲಾಗಿವೆ. "ನಿಮ್ಮ ಬೇಜವಾಬ್ದಾರಿಯಿಂದ ನಮ್ಮ ಮನೆಗಳಿಗೆ ಹಾನಿಯಾಗಿದೆ, ನಮಗೆ ತಕ್ಷಣ ಪರಿಹಾರ ಕೊಡಿಸಿ" ಎಂದು ನಿವಾಸಿಗಳು ಮಾಲೀಕನನ್ನು ತರಾಟೆಗೆ ತೆಗೆದುಕೊಳ್ಳುತ್ತಿದ್ದಾರೆ.

# 'ಭಾರತದ ಸಾಮರ್ಥ್ಯ ಮತ್ತಷ್ಟು ಬಲಪಡಿಸಲು ಸಜ್ಜು'

ಬೆಂಗಳೂರು

ಭಾರತೀಯ ಖಗೋಳ ಭೌತಶಾಸ್ತ್ರ ಸಂಸ್ಥೆ (ಐ.ಐ.ಎ.)ಯಲ್ಲಿ 75 ಕೋಟಿ ವೆಚ್ಚದ ಅತ್ಯಾಧುನಿಕ ಹೊಸ ಹೆಚ್ಚುವರಿ ಕಟ್ಟಡಕ್ಕೆ ಕೇಂದ್ರ ಸಚಿವರಾದ ಡಾ. ಜಿತೇಂದ್ರ ಸಿಂಗ್ ಶಂಕುಸ್ಥಾಪನೆ ನೆರವೇರಿಸಿದರು.

ಕೋರಮಂಗಲದಲ್ಲಿರುವ ಸಂಸ್ಥೆಯ ಆವರಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ವಿಜ್ಞಾನಿಗಳು, ಸಂಶೋಧಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಈ ನೂತನ ಕಟ್ಟಡವು ಏಳು ಅಂತಸ್ತಿನದ್ದಾಗಿದ್ದು, ಸುಮಾರು ಒಂದು ಲಕ್ಷ ಚದರ ಅಡಿ ವಿಸ್ತೀರ್ಣದಲ್ಲಿ ನಿರ್ಮಾಣವಾಗಲಿದೆ. ದೇಶದ ಪ್ರಮುಖ ವೈಜ್ಞಾನಿಕ ಕೇಂದ್ರಗಳಲ್ಲಿ ಒಂದಾಗಿ ಇದನ್ನು ಅಭಿವೃದ್ಧಿಪಡಿಸಲಾಗುತ್ತಿದ್ದು, ಖಗೋಳಶಾಸ್ತ್ರ ಮತ್ತು ಖಗೋಳ ಭೌತಶಾಸ್ತ್ರ ಕ್ಷೇತ್ರದಲ್ಲಿ ಭಾರತದ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸುವ ಉದ್ದೇಶ ಹೊಂದಿದೆ. ವಿಶ್ವ ದರ್ಜೆಯ, ಭವಿಷ್ಯಮುಖಿ ಸಂಶೋಧನೆಗಳಿಗೆ



ಇದು ಮಹತ್ವದ ಹೆಜ್ಜೆಯಾಗಿದೆ ಎಂದು ಸಚಿವರು ಹೇಳಿದರು.

ಸಚಿವರು ಮಾತನಾಡುತ್ತಾ, ಬಾಹ್ಯಾಕಾಶ, ರಕ್ಷಣಾ ಹಾಗೂ ಅಂತರರಾಷ್ಟ್ರೀಯ ವಲಯಗಳಲ್ಲಿ ಬಳಕೆಯಾಗುತ್ತಿರುವ ಸುಧಾರಿತ ಖಗೋಳ ಉಪಕರಣಗಳಲ್ಲಿ ಭಾರತದ ಸ್ಥಳೀಯ ತಂತ್ರಜ್ಞಾನ ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಐ.ಐ.ಎ.ಯಲ್ಲಿ ಅಭಿವೃದ್ಧಿಪಡಿಸಲಾದ ತಂತ್ರಜ್ಞಾನಗಳನ್ನು ಇಸ್ರೋ ಸೇರಿದಂತೆ ಹಲವು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಬಾಹ್ಯಾಕಾಶ ಕಾರ್ಯಾಚರಣೆಗಳಲ್ಲಿ ಬಳಸಲಾಗುತ್ತಿದೆ ಎಂದು ಅವರು ಹೇಳಿದರು.

2026ರ ಕೇಂದ್ರ ಬಜೆಟ್‌ನಲ್ಲಿ ಘೋಷಿಸಿದಂತೆ, ರಾಷ್ಟ್ರೀಯ ಬೃಹತ್ ಸೌರ ದೂರದರ್ಶಕ, ರಾಷ್ಟ್ರೀಯ ಬೃಹತ್ ಆಪ್ಟಿಕಲ್–ಇನ್ಫ್ರಾರೆಡ್ ದೂರದರ್ಶಕ, ಹಿಮಾಲಯನ್ ಚಂದ್ರ ದೂರದರ್ಶಕ ಉನ್ನತೀಕರಣ ಮತ್ತು ಕಾಸ್ಮೋಸ್–2 ತಾರಾಲಯ ಸೇರಿದಂತೆ ನಾಲ್ಕು ವಿಶ್ವ ದರ್ಜೆಯ ದೂರದರ್ಶಕ ಯೋಜನೆಗಳನ್ನು ಐ.ಐ.ಎ. ಅಭಿವೃದ್ಧಿಪಡಿಸಲಿದ್ದು, ಇವುಗಳಿಂದ ಭಾರತದ ಖಗೋಳ ಸಂಶೋಧನೆಗೆ ಹೊಸ ದಿಕ್ಕು ಸಿಗಲಿದೆ ಎಂದು ಸಚಿವರು ವಿವರಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತ ಮಂಡಳಿಯ ಅಧ್ಯಕ್ಷ ಡಾ. ಎಸ್. ಸೋಮನಾಥ್, ನಿರ್ದೇಶಕಿ ಡಾ. ಅನ್ನಪೂರ್ಣಿ ಸುಬ್ರಮಣಿಯನ್ ಸೇರಿದಂತೆ ಹಿರಿಯ ಅಧ್ಯಾಪಕರು, ವಿಜ್ಞಾನಿಗಳು ಮತ್ತು ಸಂಶೋಧಕರು ಭಾಗವಹಿಸಿದ್ದರು. ಕಾರ್ಯಕ್ರಮದ ಅಂಗವಾಗಿ ಫಲಕ ಅನಾವರಣ, ಆಪ್ಟಿಕ್ಸ್ ಪ್ರಯೋಗಾಲಯದಲ್ಲಿ ಹೊಸ ಉಪಕರಣಗಳ ಉದ್ಘಾಟನೆ ಹಾಗೂ ಸಂಸ್ಥೆಯ ಕಾರ್ಯಚಟುವಟಿಕೆಗಳ ಪ್ರಸ್ತುತಿಗಳು ನಡೆಯಿತು.

ಮೂರು ಶತಮಾನಗಳ ಇತಿಹಾಸ ಹೊಂದಿರುವ ಮದ್ರಾಸ್ ವೀಕ್ಷಣಾಲಯದಿಂದ ಆರಂಭವಾದ ಭಾರತದ ಖಗೋಳ ಸಂಶೋಧನೆಯ ಪಯಣವನ್ನು ಉಲ್ಲೇಖಿಸಿದ ಸಚಿವರು, ಭಾರತೀಯ ಖಗೋಳ ಭೌತಶಾಸ್ತ್ರ ಸಂಸ್ಥೆಯು ಜಾಗತಿಕ ಮಟ್ಟದಲ್ಲಿ ತನ್ನದೇ ಆದ ಸ್ಥಾನವನ್ನು ನಿರ್ಮಿಸಿಕೊಂಡಿದೆ ಎಂದು ಹೇಳಿದರು.

ಕೊಡೈಕನಾಲ್, ಕವಲೂರು, ಗೌರಿಬಿದನೂರು ಮತ್ತು ಹ್ಯಾನ್ಲೆಯಲ್ಲಿರುವ ವೀಕ್ಷಣಾಲಯಗಳ ಮೂಲಕ ಸೌರ ಹಾಗೂ ರಾತ್ರಿ ಖಗೋಳಶಾಸ್ತ್ರದಲ್ಲಿ ಮಹತ್ವದ ಸಂಶೋಧನೆ ನಡೆಯುತ್ತಿದೆ ಎಂದರು.

ಒಟ್ಟಾರೆ, ಈ ಹೊಸ ಕಟ್ಟಡ ಹಾಗೂ ಮುಂದಿನ ದೂರದರ್ಶಕ ಯೋಜನೆಗಳು ಭಾರತದ ಖಗೋಳ ವಿಜ್ಞಾನ ಕ್ಷೇತ್ರವನ್ನು ಮತ್ತಷ್ಟು ಶಕ್ತಿಶಾಲಿಯಾಗಿಸಲು ನೆರವಾಗಲಿವೆ ಎಂಬ ವಿಶ್ವಾಸ ವ್ಯಕ್ತಪಡಿಸಲಾಯಿತು.

# 'ಭಾರತವನ್ನು ಕೇವಲ ರಾಷ್ಟ್ರವಲ್ಲ, ನಾಗರಿಕತೆಯಾಗಿ ನೋಡಿ'

ಚಿಕ್ಕಬಳ್ಳಾಪುರ

"ಭಾರತವನ್ನು ಕೇವಲ ಒಂದು ರಾಷ್ಟ್ರವಾಗಿ ನೋಡಬೇಡಿ, ಅದನ್ನು ಮಹಾನ್ ನಾಗರಿಕತೆಯಾಗಿ ನೋಡಿ. ನಮ್ಮ ನಾಗರಿಕತೆಯಲ್ಲಿ ಅನೇಕ ವಿಶಿಷ್ಟ ಅಂಶಗಳಿದ್ದು, ಇವು ಜಗತ್ತಿನ ಬೇರೆಡೆ ಕಾಣಿಸುವುದಿಲ್ಲ" ಎಂದು ಸದ್ಗುರು ಜಗ್ಗಿ ವಾಸುದೇವ್ ಹೇಳಿದರು.



ಅವರು ಕ್ಯಾಲಿಫೋರ್ನಿಯಾದ ಲಾಂಗ್ ಬೀಚ್‌ನಲ್ಲಿ ನಡೆದ ಐಐಟಿ 2026 ಗ್ಲೋಬಲ್ ಕಾನ್ಫರೆನ್ಸ್‌ನಲ್ಲಿ ಭಾಗವಹಿಸಿ ಮಾತನಾಡಿದರು. ಭಾರತವನ್ನು ಕೇವಲ ಆಧುನಿಕ ರಾಷ್ಟ್ರವಾಗಿ ನೋಡದೆ, ಅದರ ಸುದೀರ್ಘ ನಾಗರಿಕ ಪರಂಪರೆಯೊಂದಿಗೆ ಅರ್ಥೈಸಿಕೊಳ್ಳಬೇಕೆಂದು ಅವರು ಮನದಟ್ಟು ಮಾಡಿದರು.

ಬೌದ್ಧಿಕ ಹಾಗೂ ವೈಜ್ಞಾನಿಕ ಅನ್ವೇಷಣೆಗಳ ಜೊತೆಗೆ ಜೀವನದ ಆಂತರಿಕ ಆಯಾಮಗಳನ್ನು ಪರಿಶೋಧಿಸುವ ಭಾರತದ ಪರಂಪರೆ ಇಂದಿಗೂ ಪ್ರಸ್ತುತವಾಗಿದೆ. ಇದು ಹೆಚ್ಚು ಪ್ರಜ್ಞಾಪೂರ್ವಕ ಹಾಗೂ ಸಮತೋಲಿತ ಭವಿಷ್ಯ ನಿರ್ಮಾಣಕ್ಕೆ ಮಾರ್ಗದರ್ಶಕವಾಗಲಿದೆ ಎಂದು ಹೇಳಿದರು.

# ಸ್ಪಂದನಾಗೆ 606 ಅಂಕ: ಅಭಿನಂದನೆ

ಬೆಂಗಳೂರು

ಇಲ್ಲಿನ ಬಸವನಗುಡಿ ಎನ್.ಆರ್. ಕಾಲೋನಿಯಲ್ಲಿರುವ ಮಹಿಳಾ ಮಂಡಳಿ ವಿದ್ಯಾಸಂಸ್ಥೆಯ ವಿದ್ಯಾರ್ಥಿನಿ ಸ್ಪಂದನಾ ರಾವ್ ಎಸ್. ಎಚ್., ಅವರು ಗುರುವಾರ ಪ್ರಕಟಗೊಂಡ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶದಲ್ಲಿ 625ಕ್ಕೆ 606 ಅಂಕಗಳನ್ನು ಪಡೆಯುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾರೆ.



ಶಾಲಾ ಆಡಳಿತ ಮಂಡಳಿ ಮತ್ತು ಉಪಧ್ಯಾಯ ವೃಂದದವರು ಈ ಕುರಿತು ಅಭಿನಂದನೆ ತಿಳಿಸಿದ್ದಾರೆ.

ಕುಮಾರಿ ಸ್ಪಂದನಾ ಸಂಸ್ಕೃತದಲ್ಲಿ 125, ಇಂಗ್ಲೀಷ್–99, ಕನ್ನಡ–100, ಗಣಿತ–99, ವಿಜ್ಞಾನ–94 ಮತ್ತು ಸಮಾಜ ವಿಜ್ಞಾನದಲ್ಲಿ 89 ಅಂಕಗಳನ್ನು ಪಡೆದಿದ್ದಾರೆ. ದೈಹಿಕ ಮತ್ತು ಆರೋಗ್ಯ ಶಿಕ್ಷಣ, ವರ್ತನೆ ಮತ್ತು ಮೌಲ್ಯಗಳು, ಶಾಲಾ ಕೆಲಸದ ಅನುಭವ ಮತ್ತು ಕಲಾ ಶಿಕ್ಷಣದಲ್ಲಿ ಎ ದರ್ಜೆಯನ್ನು ಪಡೆದಿದ್ದಾರೆ. ಇವರ ಈ ಸಾಧನೆಗೆ ಪೋಷಕರು ಕೂಡ ಹೆಮ್ಮೆ ವ್ಯಕ್ತಪಡಿಸಿದ್ದಾರೆ.



ಉತ್ತರಾಖಂಡ ಗೌರವಾನ್ವಿತ ರಾಜ್ಯಪಾಲರಾದ ಲೆಫ್ಟಿನೆಂಟ್ ಜನರಲ್ ಗುರ್ಮಿತ್ ಸಿಂಗ್ (ನಿವೃತ್ತ) ಅವರು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಲೋಕ ಭವನದಲ್ಲಿ ಸೌಹಾರ್ದಯುತವಾಗಿ ಭೇಟಿ ಮಾಡಿದರು.

# ಮಕ್ಕಳ ಬೇಸಿಗೆ ಶಿಬಿರಕ್ಕೆ ಹೆಸರು ನೋಂದಾಯಿಸಲು ಸೂಚನೆ

ರಾಮನಗರ

2026–27ನೇ ಸಾಲಿನಲ್ಲಿ ಜಿಲ್ಲಾ ಬಾಲ ಭವನ ಸೊಸೈಟಿ ವತಿಯಿಂದ 5 ರಿಂದ 16 ವರ್ಷದ ಮಕ್ಕಳಿಗೆ ಮೇ 13 ರಿಂದ 29ರ ವರೆಗೆ ಉಚಿತ ಬೇಸಿಗೆ ಶಿಬಿರವನ್ನು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.15ರ ವರೆಗೆ ರಾಮನಗರ ಟೌನಿನ ವಿಜಯನಗರದ ಡಾ. ರಾಜಕುಮಾರ್ ರಸ್ತೆಯ 4ನೇ ಕ್ರಾಸ್‌ನಲ್ಲಿರುವ ಸ್ತ್ರೀ ಶಕ್ತಿ ಭವನದಲ್ಲಿ ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ 15 ದಿನಗಳ ಕಾಲ ಯೋಗ, ಧ್ಯಾನ, ಕರಾಟೆ, ಚಿತ್ರಕಲೆ, ಕೇರಂ, ಚೆಸ್, ಸಮೂಹ ಗೀತೆ, ಸಮೂಹ ನೃತ್ಯ ಸೇರಿದಂತೆ ಇತ್ಯಾದಿ ಚಟುವಟಿಕೆಗಳ ಬಗ್ಗೆ ನುರಿತ ಅನುಭವಿ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ನೀಡಲಾಗುವುದು.

ಈ ಶಿಬಿರದಲ್ಲಿ ಭಾಗವಹಿಸಲು ಇಚ್ಚಿಸುವ ಮಕ್ಕಳು ಮೇ 11ರ ಸಂಜೆ 5 ಗಂಟೆಯೊಳಗೆ ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ ಜಿಲ್ಲಾ ಪಂಚಾಯತ್ ಭವನದಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಪಡೆದು ಸಲ್ಲಿಸಬಹುದಾಗಿದೆ. (ಮೊದಲು ಬಂದ 60 ಮಕ್ಕಳಿಗೆ ಆದ್ಯತೆ ನೀಡಲಾಗುವುದು).

ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ: 080–29524996, 8147208605, 7760892291, 9980031129 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೀತಾ ಜಲಾಶಯದಲ್ಲಿ ಸಾಹಸ ಕ್ರೀಡೆಗಳಿಗೆ ಚಾಲನೆ: ಜಿಲ್ಲಾಧಿಕಾರಿ

ತುಮಕೂರು

ತುಮಕೂರು ಜಿಲ್ಲಾ ಪ್ರವಾಸೋದ್ಯಮ ಇಲಾಖೆ ವತಿಯಿಂದ ಕೊರಟಗೆರೆ ತಾಲ್ಲೂಕಿನ ತೀತಾ ಜಲಾಶಯದಲ್ಲಿ ಜಲಕ್ರೀಡೆ ಹಾಗೂ 20 ವಿಧದ ಸಾಹಸ ಕ್ರೀಡೆಗಳ ಆಯೋಜನೆಗಾಗಿ ಇ–ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಈ ಯೋಜನೆಗೆ ಸಂಬಂಧಿಸಿದಂತೆ ಜೆಟ್ ಸ್ಕೀ ರೈಡ್, ಸ್ಪೀಡ್ ಬೋಟ್, ಪೆಡಲ್ ಬೋಟ್, ಕಯಾಕಿಂಗ್, ಬನಾನಾ ಬೋಟ್, ಸ್ಟ್ಯಾಂಡ್‌ಅಪ್ ಪೆಡಲ್ ಬೋಟ್ ಸೇರಿದಂತೆ ವಿವಿಧ ಜಲಕ್ರೀಡೆಗಳೊಂದಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಕ್ರಮ ವಹಿಸಲಾಗುತ್ತಿದೆ. ಮುಂದಿನ ತಿಂಗಳ 10ನೇ ತಾರೀಖಿನೊಳಗೆ ಎಲ್ಲಾ ಸಿದ್ಧತೆಗಳನ್ನು ಪೂರ್ಣಗೊಳಿಸಿ ಜಲಕ್ರೀಡೆಗಳಿಗೆ ಅಧಿಕೃತ ಚಾಲನೆ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಈ ಮಹತ್ವದ ಯೋಜನೆಯ ಉದ್ಘಾಟನೆಯನ್ನು ಗೃಹ ಸಚಿವರು ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವರ ಸಮ್ಮುಖದಲ್ಲಿ ನೆರವೇರಿಸಲು ದಿನಾಂಕ ನಿಗದಿಪಡಿಸಲಾಗುವುದು ಎಂದು ಅವರು ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಎನ್. ತಿಪ್ಪೇಸ್ವಾಮಿ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಸಂಜೀವಕುಮಾರ್ ಉಪಸ್ಥಿತರಿದ್ದರು.

# ಸೌಲಭ್ಯಗಳ ವಿತರಣೆಯಲ್ಲಿ ವಿಳಂಬ ಸಲ್ಲ: ಡಾ.ಎಂ.ಆರ್.ರವಿ

ಕೋಲಾರ

ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಜನಗಳಿಗೆ ಸೌಲಭ್ಯಗಳ ವಿತರಣೆಯಲ್ಲಿ ವಿಳಂಬ ಸಹಿಸುವ ಪ್ರಶ್ನೆ ಇಲ್ಲ ಎಂದು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅವರು ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜಾಗೃತಿ ಮತ್ತು ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ತಲುಪಿಸುವಲ್ಲಿ ಯಾವುದೇ ನಿರ್ಲಕ್ಷ್ಯ ವಹಿಸಬಾರದು ಎಂದು ಅಧಿಕಾರಿಗಳಿಗೆ ಖಡಕ್ ಆದೇಶ ನೀಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಅಭಿವೃದ್ಧಿ ಕಾರ್ಯಕ್ರಮಗಳು, ವಿದ್ಯಾರ್ಥಿವೇತನ, ಜಮೀನು ಮಂಜೂರಾತಿ ಮತ್ತು ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಾಗಿರುವ ಪ್ರಕರಣಗಳ ಸ್ಥಿತಿಗತಿಯ ಕುರಿತು ಸುದೀರ್ಘವಾಗಿ ಚರ್ಚಿಸಿದರು.



ಸಮಾಜ ಕಲ್ಯಾಣ ಇಲಾಖೆ ಹಾಗೂ ಸಂಬಂಧಪಟ್ಟ ಇಲಾಖೆಗಳಲ್ಲಿ ಬಾಕಿ ಉಳಿದಿರುವ ವಿದ್ಯಾರ್ಥಿವೇತನದ ಮೊತ್ತವನ್ನು ವಿಳಂಬವಿಲ್ಲದೆ ವಿದ್ಯಾರ್ಥಿಗಳಿಗೆ ತಲುಪಿಸಬೇಕು ಎಂದು ತಹಸೀಲ್ದಾರ್‌ಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಪರಿಶಿಷ್ಟ ಸಮುದಾಯಕ್ಕೆ ಸಂಬಂಧಿಸಿದ ಜಮೀನು ಮಂಜೂರಾತಿ ಮತ್ತು ಭೂಮಿ ಹಕ್ಕುಗಳ ಪ್ರಕರಣಗಳನ್ನು ಆದ್ಯತೆಯ ಮೇರೆಗೆ ಇತ್ಯರ್ಥಪಡಿಸಿ, ಅರ್ಹರಿಗೆ ಭೂಮಿಯ ಹಕ್ಕು ದೊರಕಿಸಿಕೊಡಬೇಕೆಂದು ತಿಳಿಸಲಾಯಿತು.

ಅಕ್ರಮ ಮದ್ಯಮಾರಾಟಕ್ಕೆ ಸಂಬಂಧಿಸಿದರಂತೆ ಜಿಲ್ಲೆಯ ಹೊರವಲಯದ ಕೆಲ ಪ್ರದೇಶಗಳಲ್ಲಿ ದಿನಸಿ ಹಾಗೂ ಇತರೆ ಅಂಗಡಿಗಳಲ್ಲಿ ಅಕ್ರಮ ಮದ್ಯ ಮಾರಾಟ ಮಾಡಲಾಗುತ್ತಿರುವುದಾಗಿ ಸಮಿತಿ ಸದಸ್ಯರು ತಿಳಿಸಿದರು. ಇದಕ್ಕೆ ಉತ್ತರಿಸಿದ ಅಬಕಾರಿ ಅಧಿಕಾರಿಗಳು, ಮಾರಾಟವಾಗುತ್ತಿರುವುದು ಅಕ್ರಮ ಮದ್ಯವಲ್ಲ. ನಮ್ಮ ಸಿಬ್ಬಂದಿ ಅಗಿಂದಾಗ್ಗೆ ಹೋಗಿ ಪರಿಶೀಲಿಸುತ್ತಿದ್ದಾರೆ ಎಂದರು

ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಾಗಿರುವ ಪ್ರಕರಣಗಳ ತನಿಖೆಯನ್ನು ತ್ವರಿತಗೊಳಿಸಬೇಕು. ನ್ಯಾಯಾಲಯದಲ್ಲಿರುವ ಪ್ರಕರಣಗಳನ್ನು ಗಮನದಲ್ಲಿಟ್ಟುಕೊಂಡು ಸಂತ್ರಸ್ತರಿಗೆ ನೀಡಬೇಕಾದ ಪರಿಹಾರ ಧನವನ್ನು ಕಾಲಮಿತಿಯೊಳಗೆ ವಿತರಿಸಲು ಕ್ರಮ ಕೈಗೊಳ್ಳಬೇಕು ಎಂದು ಪೊಲೀಸ್ ಇಲಾಖೆಗೆ ಸೂಚಿಸಲಾಯಿತು.

ಜಾತಿ ಪ್ರಮಾಣಪತ್ರಗಳನ್ನು ವಿತರಿಸುವಾಗ ಎಚ್ಚರಿಕೆ ವಹಿಸಬೇಕು. ಯಾವುದೇ ಅಕ್ರಮಗಳು ನಡೆಯದಂತೆ ಸಮಾಜ ಕಲ್ಯಾಣ ಇಲಾಖೆಯ ಮೂಲಕ ಸೂಕ್ತ ಪರಿಶೀಲನೆ ನಡೆಸಬೇಕು ಎಂದರು.

"ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ತಲುಪುವಂತಾಗಬೇಕು. ಇಡೀ ಜಿಲ್ಲಾಡಳಿತ ಒಂದು ಬಲಿಷ್ಠ ತಂಡವಾಗಿ ಕಾರ್ಯನಿರ್ವಹಿಸುವ ಮೂಲಕ ಈ ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಬೇಕು," ಎಂದು ಕರೆ ನೀಡಿದರು.

ಹೊಸದಾಗಿ ನೇಮಕಗೊಂಡ ಜಾಗೃತಿ ಸಮಿತಿ ಸದಸ್ಯರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್. ಪಿ ಬಾಗೇವಾಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್, ಅಪರ ಜಿಲ್ಲಾಧಿಕಾರಿ ಎಸ್. ಎಂ. ಮಂಗಳ, ಜಿಲ್ಲಾ ಅರಣ್ಯ ಸಂರಕ್ಷಣಾ ಅಧಿಕಾರಿ ಸರಿನಾ ಸಿಕ್ಕಲಿಗರ್, ಎಲ್ಲಾ ತಾಲ್ಲೂಕಿನ ತಹಸೀಲ್ದಾರ್‌ಗಳು, ಸಮಿತಿ ಸದಸ್ಯರು ಮತ್ತು ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಕುಡಿಯುವ ನೀರು, ಜಾನುವಾರು ಮೇವಿಗೆ ಅಭಾವವಾಗದಂತೆ ಸೂಚನೆ

ರಾಮನಗರ

ಬೇಸಿಗೆ ಕಾಲದಲ್ಲಿ ಜಿಲ್ಲೆಯಾದ್ಯಂತ ಕುಡಿಯುವ ನೀರು ಹಾಗೂ ಜಾನುವಾರುಗಳ ಮೇವುಗಳಿಗೆ ಅಭಾವವಾಗದಂತೆ ಎಲ್ಲಾ ರೀತಿಯ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸುವಂತೆ ಜಿಲ್ಲಾಧಿಕಾರಿ ಯಶವಂತ್ ವಿ.ಗುರುಕರ್ ಅವರು ಸಂಬಂಧಿಸಿದ ಇಲಾಖೆಗಳ ಜಿಲ್ಲಾ, ತಾಲ್ಲೂಕು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅವರು ಏ.28ರ ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬೇಸಿಗೆ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ವಹಿಸಬೇಕಾದ ವಿವಿಧ ರೀತಿಯ ಮುನ್ನೆಚ್ಚರಿಕಾ ಕ್ರಮಗಳ ಬಗ್ಗೆ ನಿರ್ದೇಶನ ನೀಡಿದ ಅವರು, ಜಿಲ್ಲೆಯ ತಾಲ್ಲೂಕುಗಳಲ್ಲಿನ ಕೆಲವೆಡೆ ಟ್ಯಾಂಕರ್ ಮೂಲಕ ಈಗಾಗಲೇ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ, ಆ ಟ್ಯಾಂಕರ್‌ಗಳಲ್ಲಿ ಸರಬರಾಜು ಮಾಡುವ ಟ್ರಿಪ್‌ಗಳ ನಿಖರ ಲೆಕ್ಕಾಚಾರ ತಿಳಿಯಲು ಅನುಕೂಲವಾಗುವಂತೆ ನೀರಿನ ಟ್ಯಾಂಕರ್‌ಗಳ ಎಲ್ಲಾ ವಾಹನಗಳಿಗೆ ಕೂಡಲೇ ಜಿ.ಪಿ.ಎಸ್ ಅಳವಡಿಸಬೇಕು. ಆಗ ಟ್ರಿಪ್‌ಗಳ ಲೆಕ್ಕಾಚಾರ ನಿಖರವಾಗಿ ತಿಳಿದುಬರಲಿದೆ ಎಂದು ಸೂಚನೆ ನೀಡಿದರು.



ಜಿಲ್ಲೆಯ ಕೆಲವೊಂದು ಕಡೆಗಳಲ್ಲಿ ಖಾಸಗಿ ಟ್ಯಾಂಕರ್‌ಗಳ ಮೂಲಕವೂ ನೀರನ್ನು ಪೂರೈಸಲಾಗುತ್ತಿದೆ. ಅಂತಹ ಸ್ಥಳಗಳಲ್ಲಿ ಬೋರ್‌ವೆಲ್ ಕೊರೆಸುವಂತೆ ಈ ಹಿಂದೆಯೇ ಸೂಚನೆ ನೀಡಲಾಗಿತ್ತು. ಆ ದಿಸೆಯಲ್ಲಿ ಕ್ರಮ ವಹಿಸುವಂತೆ ತಿಳಿಸಿದ ಜಿಲ್ಲಾಧಿಕಾರಿಗಳು ಬೋರ್‌ವೆಲ್ ಕೊರೆಸಲು ಟಾಸ್ಕ್‌ಫೋರ್ಸ್‌ನಿಂದ ಹಣ ಕಡಿಮೆಯಾದಲ್ಲಿ ಇತರೆ ಮೂಲದಿಂದ ಒದಗಿಸುವುದಾಗಿ ತಿಳಿಸಿದರು.

ಅಗತ್ಯವಿರುವ ಸ್ಥಳಗಳಲ್ಲಿ ಕೂಡಲೇ ಬೋರ್‌ವೆಲ್‌ಗಳನ್ನು ಕೊರೆಸಬೇಕು. ಹೊಸದಾಗಿ ಬೋರ್‌ವೆಲ್ ಕೊರೆಯಿಸಬೇಕಾದರೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಗಮನಕ್ಕೆ ತರಬೇಕು. ಮುಖ್ಯವಾಗಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದಲೇ ಬೋರ್‌ವೆಲ್‌ಗಳನ್ನು ಕೊರೆಯಿಸಬೇಕು ಎಂದು ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಶೇಖರ್, ಜಿಲ್ಲೆಯ ಎಲ್ಲಾ ತಾಲ್ಲೂಕು ತಹಶೀಲ್ದಾರರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಸಭೆಯಲ್ಲಿದ್ದರು.

# 'ಕೆರೆ ಒತ್ತುವರಿ ತೆರವುಗೊಳಿಸಿ ನೀರು ಮಲಿನ ತಪ್ಪಿಸಿ'

ತುಮಕೂರು

ತುಮಕೂರು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಫೆಕ್ಸ್ ಸಮಿತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಇಂದು ಜಿಲ್ಲಾಧಿಕಾರಿಗಳ ನ್ಯಾಯಾಲಯ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಫೆಕ್ಸ್ ಸಮಿತಿ ಸಭೆ ನಡೆಯಿತು.

ಸಭೆಯಲ್ಲಿ ಜಿಲ್ಲೆಯ ಗ್ರಾಮೀಣಾಭಿವೃದ್ಧಿ, ಸಣ್ಣ ನೀರಾವರಿ ಸೇರಿದಂತೆ ವಿವಿಧ ಇಲಾಖೆಗಳ ವ್ಯಾಪ್ತಿಯ ಒಟ್ಟು 2,047 ಕೆರೆಗಳ ಸ್ಥಿತಿಗತಿಗಳ ಕುರಿತು ಸಮಗ್ರ ಪರಿಶೀಲನೆ ನಡೆಸಲಾಯಿತು. ಕೆರೆಗಳ ಸರ್ವೇ ಪ್ರಗತಿ, ಸರ್ವೇ ಬಾಕಿ ಇರುವ ಕೆರೆಗಳ ವಿವರ, ಒತ್ತುವರಿ ಪ್ರದೇಶಗಳ ಗುರುತಿಸುವಿಕೆ, ಈಗಾಗಲೇ ತೆರವುಗೊಳಿಸಿರುವ ಹಾಗೂ ಇನ್ನೂ ತೆರವುಗೊಳಿಸಬೇಕಿರುವ ಒತ್ತುವರಿಗಳ ಕುರಿತು ಇಲಾಖಾವಾರು ಮಾಹಿತಿ ಪಡೆದುಕೊಳ್ಳಲಾಯಿತು.



ಕೆರೆಗಳ ಒತ್ತುವರಿ ತೆರವು ಕಾರ್ಯವನ್ನು ತ್ವರಿತಗೊಳಿಸುವುದರ ಜೊತೆಗೆ, ಗುರುತಿಸಲಾದ ಒತ್ತುವರಿ ಪ್ರದೇಶಗಳ ನಿಖರ ವಿವರಗಳನ್ನು ಮುಂದಿನ ಸಭೆಗೆ ಸಲ್ಲಿಸುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚಿಸಿದರು. ಈಗಾಗಲೇ ಗುರುತಿಸಲಾದ ಕೆರೆಗಳನ್ನು ರಕ್ಷಣಾತ್ಮಕ ಕ್ರಮಗಳ ಮೂಲಕ ಇಲಾಖೆಗಳು ಸಂಪೂರ್ಣ ವಶಕ್ಕೆ ಪಡೆದು ಸಂರಕ್ಷಿಸಬೇಕೆಂದರು.

ಕೆರೆಗಳಿಗೆ ರಾಸಾಯನಿಕ ತ್ಯಾಜ್ಯ, ಮಲಿನ ನೀರು ಹಾಗೂ ಇತರೆ ಮಾಲಿನ್ಯಕಾರಿ ಅಂಶಗಳು ಸೇರುವುದನ್ನು ಕಟ್ಟುನಿಟ್ಟಾಗಿ ತಡೆಯುವಂತೆ ಸೂಚಿಸಲಾಯಿತು. ತುಮಕೂರು ಅಮಾನಿಕೆರೆಗೆ ಕಲುಷಿತ ನೀರು ಸೇರುತ್ತಿರುವುದು ಕಂಡುಬಂದಿದ್ದು, ಈ ಹಿನ್ನೆಲೆಯಲ್ಲಿ ಮಹಾನಗರ ಪಾಲಿಕೆಗೆ ತಕ್ಷಣ ಕ್ರಮ ಕೈಗೊಂಡು ಸಮಸ್ಯೆ ಪರಿಹರಿಸಲು ನಿರ್ದೇಶನ ನೀಡಿದರು.

ಕುಡಿಯುವ ನೀರಿನ ಮೂಲಗಳ ಸಂರಕ್ಷಣೆ ಹಾಗೂ ನೀರಿನ ಗುಣಮಟ್ಟ ಕಾಪಾಡುವ ವಿಚಾರದಲ್ಲಿ ತುಮಕೂರು ಆಯಾ ಇಲಾಖೆ, ಪ್ರಾಧಿಕಾರಗಳು ನಿಯಮಾನುಸಾರ ಕ್ರಮವಹಿಸಬೇಕೆಂದು ತಿಳಿಸಿದರು.

ರೈತರು ಹೊಲಗಳಿಗೆ ಮಣ್ಣು ಸಾಗಾಣಿಕೆ ಮಾಡುವ ಸಂಬಂಧ ಪ್ರಸ್ತುತ ಜಾರಿಯಲ್ಲಿರುವ ನಿಯಮಾನುಸಾರ ಕೆರೆ ಅಭಿವೃದ್ಧಿ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಸಂಬಂಧಿತ ಇಲಾಖೆಗಳು ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸ್ಪಷ್ಟ ನಿರ್ದೇಶನ ನೀಡಿದರು.

ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಶಶಿಧರ್ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಹೇಮಾವತಿ, ಎತ್ತಿನಹೊಳೆ, ಸಣ್ಣ ನೀರಾವರಿ, ಗ್ರಾಮೀಣಾಭಿವೃದ್ಧಿ ಮತ್ತು ಇತರೆ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ನಗರ ಪಾಲಿಕೆಗಳ ಸಾರ್ವತ್ರಿಕ ಚುನಾವಣೆಗೆ ಸಕಲ ಸಿದ್ಧ: ಆಯೋಗ

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ 5 ನಗರಪಾಲಿಕೆಗಳಿಗೆ ಘನ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ 2026 ನೇ ಜೂನ್ 30 ರೊಳಗಾಗಿ ಚುನಾವಣಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಾಗಿದ್ದು, ಈ ಸಂಬಂಧ ರಾಜ್ಯ ಚುನಾವಣಾ ಆಯೋಗವು ಸಕಲ ಸಿದ್ಧತೆಗಳನ್ನು ಕೈಗೊಂಡಿದೆ.

ಆಯೋಗದ ನಿರ್ದೇಶನದಂತೆ ಒಟ್ಟು 369 ವಾರ್ಡ್‌ಗಳಿಗೆ ಅಂತಿಮ ಮತದಾರರ ಪಟ್ಟಿಯನ್ನು ಈಗಾಗಲೇ 18.04.2026 ರಂದು ಪ್ರಕಟಿಸಲಾಗಿದೆ.

ರಾಜ್ಯದಲ್ಲಿ ಏಪ್ರಿಲ್ 16 ರಿಂದ ಮೇ 15 ರವರೆಗೆ ನಡೆಯಲಿರುವ ಜನಗಣತಿ ಕಾರ್ಯ, ಭಾರತ ಚುನಾವಣಾ ಆಯೋಗದ ಮತದಾರರ ಪಟ್ಟಿ ಪರಿಷ್ಕರಣೆ ಮತ್ತು ಶೈಕ್ಷಣಿಕ ಪರೀಕ್ಷಾ ಕರ್ತವ್ಯಗಳಿಗೆ ಸಿಬ್ಬಂದಿಗಳನ್ನು ನಿಯೋಜಿಸಿರುವುದರಿಂದ, ಚುನಾವಣಾ ಕಾಲಮಿತಿಯನ್ನು 30.09.2026 ರವರೆಗೆ ವಿಸ್ತರಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಆಯೋಗಕ್ಕೆ ಕೋರಿದ್ದಾರೆ.

ಸರ್ಕಾರದ ಈ ಕೋರಿಕೆಯನ್ನು ಆಯೋಗವು ಘನ ಸರ್ವೋಚ್ಚ ನ್ಯಾಯಾಲಯದ ಗಮನಕ್ಕೆ ತಂದಿದೆ. ಆದರೆ, ಆಯೋಗವು ನ್ಯಾಯಾಲಯಕ್ಕೆ ಸಲ್ಲಿಸಿರುವ ಅಫಿಡವಿಟ್‌ನಲ್ಲಿ ಚುನಾವಣೆ ನಡೆಸಲು ಹೆಚ್ಚಿನ ಸಮಯಾವಕಾಶವನ್ನಾಗಲೀ ಅಥವಾ ಚುನಾವಣೆ ಮುಂದೂಡುವ ಬೇಡಿಕೆಯನ್ನಾಗಲೀ ಸಲ್ಲಿಸಿರುವುದಿಲ್ಲ ಎಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

# ದಾಖಲಾತಿಗೆ ತಾತ್ಕಾಲಿಕ ನಿರ್ಬಂಧ

ತಿಪಟೂರು

ವಿದ್ಯಾರ್ಥಿಗಳ ಪೋಷಕರಿಂದ ಬಂದ ದೂರಿನ ಆಧಾರದ ಮೇಲೆ ತಿಪಟೂರಿನ ಕಲ್ಪತರು ಸೆಂಟ್ರಲ್ ಸ್ಕೂಲ್‌ಗೆ ಕ್ಷೇತ್ರ ಶಿಕ್ಷಣಾಧಿಕಾರಿ ತಾರಾಮಣಿ ಭೇಟಿ ನೀಡಿ ಪರಿಶೀಲನೆ ನಡೆಸಿ, 2026 27ನೇ ಸಾಲಿಗೆ ಹೊಸ ವಿದ್ಯಾರ್ಥಿಗಳ ದಾಖಲಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವಂತೆ ಸೂಚನೆ ನೀಡಿದ್ದಾರೆ.

ಪರಿಶೀಲನೆಯ ವೇಳೆ ಕೆಲವು ವಿದ್ಯಾರ್ಥಿಗಳಿಗೆ ಅಂಕಪಟ್ಟಿ ನೀಡಲಾಗಿಲ್ಲ ಎಂಬುದು ದೃಢಪಟ್ಟಿದ್ದು, ತಕ್ಷಣವೇ ಎಲ್ಲಾ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ವಿತರಿಸಿ, ಅದರ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ವರದಿ ಸಲ್ಲಿಸಲು ಶಾಲಾ ಆಡಳಿತಕ್ಕೆ ಸೂಚಿಸಲಾಗಿದೆ.

ಇದಲ್ಲದೆ, 2025–26ನೇ ಸಾಲಿನಲ್ಲಿ ಸರ್ಕಾರದ ನಿಯಮಗಳಿಗೆ ವಿರುದ್ಧವಾಗಿ ಎರಡು ಪ್ರತ್ಯೇಕ ರಶೀದಿಗಳ ಮೂಲಕ ವಸೂಲಿ ಮಾಡಿರುವ ಶುಲ್ಕದ ವಿವರಗಳನ್ನು ಸಲ್ಲಿಸುವಂತೆ ಕೂಡ ಆದೇಶಿಸಲಾಗಿದೆ. ಶಾಲೆಯ ಸೂಚನಾ ಫಲಕದಲ್ಲಿ ಪ್ರಕಟಿಸಿರುವ 2026–27ನೇ ಸಾಲಿನ ಶುಲ್ಕದ ಬಗ್ಗೆ ಪೂರ್ವಾನುಮತಿ ಪಡೆಯದೇ ಪ್ರಕಟಿಸಿರುವ ಹಿನ್ನೆಲೆಯಲ್ಲಿ, ಆ ಶುಲ್ಕದ ಕುರಿತು ಸಂಪೂರ್ಣ ಆಡಿಟ್ ವರದಿ ನೀಡುವಂತೆ ಕೇಳಲಾಗಿದೆ.

ಶಾಲಾ ಶುಲ್ಕದ ಪರಿಶೀಲನೆ ಪೂರ್ಣಗೊಳ್ಳುವವರೆಗೆ ಯಾವುದೇ ರೀತಿಯ ಹೊಸ ದಾಖಲಾತಿಗಳನ್ನು ಮಾಡಿಕೊಳ್ಳಬಾರದು ಎಂದು ಸ್ಪಷ್ಟ ಸೂಚನೆ ನೀಡಲಾಗಿದೆ. ಈ ವಿಷಯವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಿಪಟೂರು ಉಪವಿಭಾಗಾಧಿಕಾರಿಗಳ ಗಮನಕ್ಕೆ ತಂದಿದ್ದು, ಪೋಷಕರಿಗೂ ಮಾಹಿತಿಯನ್ನು ಹಂಚಲಾಗಿದೆ.

# ತಿಪಟೂರಿನಲ್ಲಿ ಭವ್ಯ ಬಸವೇಶ್ವರ ಜಯಂತ್ಯೋತ್ಸವ ಆಚರಣೆ

ತಿಪಟೂರು

ತಾಲ್ಲೂಕಿನ ವೀರಶೈವ ಲಿಂಗಾಯತ ಯುವ ವೇದಿಕೆ ಹಾಗೂ ವೀರಶೈವ ಲಿಂಗಾಯತ ಸಂಘಟನೆಯ ವತಿಯಿಂದ ಬಸವೇಶ್ವರ ಜಯಂತ್ಯೋತ್ಸವವನ್ನು ಭಕ್ತಿಭಾವದಿಂದ ಆಚರಿಸಲಾಯಿತು. ನಗರದ ಕಲ್ಲೇಶ್ವರ ದೇವಾಲಯದಿಂದ ಗುರುಕುಲಾನಂದಾಶ್ರಮ ಕಲ್ಯಾಣ ಮಂಟಪದವರೆಗೆ ಭವ್ಯ ಮೆರವಣಿಗೆ ನಡೆಯಿತು.

ಮೆರವಣಿಗೆಗೆ ಕೆರೆಗೋಡಿ ರಂಗಾಪುರದ ಗುರುಪರದೇಶಿಕೇಂದ್ರ ಸ್ವಾಮೀಜಿ, ಗುರುಕುಲಾನಂದಾಶ್ರಮದ ಇಮ್ಮಡಿ ಕರಿಬಸವ ದೇಶಿಕೇಂದ್ರ ಸ್ವಾಮೀಜಿ ಹಾಗೂ ನೊಣವಿನಕೆರೆ ಕಾಡಸಿದ್ದೇಶ್ವರ ಮಠದ ಅಭಿನವ ಕಾಡಸಿದ್ದೇಶ್ವರ ಸ್ವಾಮೀಜಿ ಚಾಲನೆ ನೀಡಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ಬಸವಣ್ಣನವರ ಭಾವಚಿತ್ರದೊಂದಿಗೆ ನಂದಿಧ್ವಜ, ಬಸವನಗಾರಿ, ವೀರಗಾಸೆ ಕುಣಿತ, ಕಾಳಿ ಕುಣಿತ, ಹೆಣ್ಣುಮಕ್ಕಳ ವೀರಗಾಸೆ ಹಾಗೂ ಲಿಂಗದವೀರರ ಕುಣಿತದೊಂದಿಗೆ ಸಾವಿರಾರು ಬಸವ ಅನುಯಾಯಿಗಳು ಭಾಗವಹಿಸಿ ಮೆರವಣಿಗೆಯನ್ನು ಕಂಗೊಳಿಸಿದರು. ಕೋಡಿ ಸರ್ಕಲ್, ದೊಡ್ಡಪೇಟೆ ಮತ್ತು ಬಿ.ಎಚ್. ರಸ್ತೆ ಮೂಲಕ ಮೆರವಣಿಗೆ ಸಾಗಿತು.



ವೇದಿಕೆ ಕಾರ್ಯಕ್ರಮದಲ್ಲಿ ಷಡಕ್ಷರಮಠದ ರುದ್ರಮುನಿ ಸ್ವಾಮೀಜಿ ಮಾತನಾಡಿ, 12ನೇ ಶತಮಾನದ ಮಹಾನ್ ಸಮಾಜ ಸುಧಾರಕ ಬಸವಣ್ಣ ಅವರ ಆದರ್ಶಗಳು ಇಂದಿಗೂ ದಾರಿದೀಪವಾಗಿವೆ. ಯುವಕರು ಒಗ್ಗೂಡಿ ಬಸವ ಜಯಂತಿ ಆಚರಿಸುತ್ತಿರುವುದು ಸಂತೋಷದ ವಿಷಯ ಎಂದರು.

ರಾಜ್ಯ ಬಿಜೆಪಿ ವಕ್ತಾರ ಎಚ್. ಎನ್. ಚಂದ್ರಶೇಖರ್ ಮಾತನಾಡಿ, ಬಸವಣ್ಣನವರು ಮಾತಿನಲ್ಲಿ ಮಾತ್ರವಲ್ಲ, ಕಾರ್ಯದಲ್ಲಿ ತೋರಿಸಿದ ಮಹಾನ್ ವ್ಯಕ್ತಿ. ಮಹಿಳಾ ಸಮಾನತೆ, ಅಸ್ಪೃಶ್ಯತೆ ನಿರ್ಮೂಲನೆ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಅವರು ಅನುಭವ ಮಂಟಪದ ಮೂಲಕ ಜಾರಿಗೆ ತಂದಿದ್ದರು ಎಂದು ಹೇಳಿದರು.

ಜೆಡಿಎಸ್ ಮುಖಂಡ ಕೆ.ಟಿ. ಶಾಂತಕುಮಾರ್ ಮಾತನಾಡಿ, ಸಮಸಮಾಜ ನಿರ್ಮಾಣಕ್ಕೆ ಬಸವಣ್ಣನವರ ಕ್ರಾಂತಿ ಮಾದರಿಯಾಗಿದೆ. ವಚನಗಳ ಮೂಲಕ ಸಮಾಜದಲ್ಲಿ ಬದಲಾವಣೆ ತಂದ ಅವರು, ಶೋಷಣೆ ಮತ್ತು ಮೌಢ್ಯತೆಗಳ ವಿರುದ್ಧ ಹೋರಾಟ ನಡೆಸಿದರು ಎಂದು ಹೇಳಿದರು.

ವೀರಶೈವ ಲಿಂಗಾಯತ ಸಂಘಟನೆಯ ತಾಲ್ಲೂಕು ಅಧ್ಯಕ್ಷ ರೇಣುಕಾರಾಧ್ಯ ಪ್ರಾಸ್ತಾವಿಕವಾಗಿ ಮಾತನಾಡಿ, ಬಸವಣ್ಣನವರ ವಚನಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಜೀವನ ಪಾವನವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಡಾ. ಶ್ರೀಧರ್, ಡಾ. ವಿವೇಚನ್, ನಿವೃತ್ತ ಪೊಲೀಸ್ ಅಧಿಕಾರಿ ಲೋಕೇಶ್ವರ್, ಸಿ.ಬಿ. ಶಶಿಧರ್, ನ್ಯಾಕೇನಹಳ್ಳಿ ಸುರೇಶ್, ನವಿಲೆ ಪರಮೇಶ್, ಮಡೆನೂರು ಕಾಂತರಾಜು, ಪ್ರಸನ್ನಕುಮಾರ್ ಸೇರಿದಂತೆ ಹಲವಾರು ಮುಖಂಡರು ಹಾಗೂ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಯೋಗೇಶ್‌ಗೌಡ ಕೊಲೆ ಪ್ರಕರಣ: ಸಿಬಿಐಗೆ ಹೈಕೋರ್ಟ್ ನೋಟೀಸ್

ಬೆಂಗಳೂರು

ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ವಿಶೇಷ ನ್ಯಾಯಾಲಯವು ವಿಧಿಸಿರುವ ಜೀವಾವಧಿ ಶಿಕ್ಷೆ ಬದಿಗೆ ಸರಿಸುವಂತೆ ಕೋರಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಮತ್ತು ಚಂದ್ರಶೇಖರ್ ಇಂಡಿ ಸಲ್ಲಿಸಿರುವ ಕ್ರಿಮಿನಲ್ ಮೇಲ್ಮನವಿಗಳ ಸಂಬಂಧ ಕೇಂದ್ರೀಯ ತನಿಖಾ ದಳಕ್ಕೆ (ಸಿಬಿಐ) ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ.

ಪ್ರಕರಣದಲ್ಲಿ ಅಪರಾಧಿಗಳಾಗಿರುವ ವಿನಯ್ ಕುಲಕರ್ಣಿ ಮತ್ತು ಚಂದ್ರಶೇಖರ್ ಇಂಡಿ ಅಲಿಯಾಸ್ ಚಂದು ಮಾಮ ಸಲ್ಲಿಸಿರುವ ಕ್ರಿಮಿನಲ್ ಮೇಲ್ಮನವಿಗಳ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ಮೊಹಮ್ಮದ್ ನವಾಜ್ ಮತ್ತು ಟಿ ವೆಂಕಟೇಶ್ ನಾಯಕ್ ಅವರ ವಿಭಾಗೀಯ ಪೀಠ ನಡೆಸಿತು.

ವಿನಯ್ ಕುಲಕರ್ಣಿ ಪರವಾಗಿ ಹಾಜರಾಗಿದ್ದ ಹಿರಿಯ ವಕೀಲ ಸಿ ವಿ ನಾಗೇಶ್ ಅವರು "ಯಾವುದೇ ಸಾಕ್ಷಿ ಇಲ್ಲಿದಿದ್ದರೂ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ. ವಿಚಾರಣೆಯ ಹಂತದಲ್ಲಿ ವಿನಯ್ ಮತ್ತು ಚಂದ್ರಶೇಖರ್ ಜಾಮೀನಿನ ಮೇಲೆ ಹೊರಗಿದ್ದರು. ಮೆರಿಟ್ ಆಧರಿಸಿ ಆರೋಪಿಗಳಿಗೆ ಸುಪ್ರೀಂ ಕೋರ್ಟ್ ಜಾಮೀನು ಮಂಜೂರು ಮಾಡಿತ್ತು. ನ್ಯಾಯದಾನದಲ್ಲಿ ಹಸ್ತಕ್ಷೇಪ ಮಾಡಿದ್ದರೆ ಎಂದು ಕೆಲಕಾಲ ಆರೋಪಿಗಳ ಜಾಮೀನು ರದ್ದತಿ ಮಾಡಿ, ಜೈಲಿಗೆ ಕಳುಹಿಸಲಾಗಿತ್ತು. ಆನಂತರ ಮತ್ತೆ ನ್ಯಾಯಾಲಯವು ಜಾಮೀನು ನೀಡಲಾಗಿತ್ತು. ಏಳು ಪ್ರತ್ಯಕ್ಷದರ್ಶಿಗಳು, ಇತರೆಲ್ಲಾ ಪ್ರಾಸಿಕ್ಯೂಷನ್ ಸಾಕ್ಷಿಗಳು ಪ್ರತೀಕೂಲವಾಗಿವೆ. ವಿಚಾರಣೆಗೆ ಪರಿಗಣಿಸಿ, ದಾಖಲೆ ಸಲ್ಲಿಸಲು ನಿರ್ದೇಶಿಸಬೇಕು" ಎಂದು ಕೋರಿದರು.

ಚಂದ್ರಶೇಖರ್ ಇಂಡಿ ಪರ ಹಿರಿಯ ವಕೀಲ ಎಂ ನಾಗಮುತ್ತು ಅವರು "ಪಿತೂರಿ ಆರೋಪಕ್ಕೆ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ. ಶಿಕ್ಷೆ ಅಮಾನತು ಮಾಡಬೇಕು ಎಂದು ಕೋರುತ್ತಿದ್ದೇವೆ. 16ನೇ ಆರೋಪಿಯಾದ ಚಂದ್ರಶೇಖರ್ ವಿರುದ್ಧ ಯಾವುದೇ ಸಾಕ್ಷಿಗಳಿಲ್ಲ. ಅಪ್ರೂವರ್ ಆಗಿದ್ದ ವ್ಯಕ್ತಿ ಪ್ರತಿಕೂಲ ಸಾಕ್ಷಿಯಾಗಿ ಬದಲಾಗಿದ್ದಾರೆ" ಎಂದರು.

ಆಗ ಪೀಠ "ಮೆರಿಟ್ ಮೇಲೆ ಈಗ ವಿಚಾರಣೆ ನಡೆಸುವುದಿಲ್ಲ" ಎಂದಿತು. ಅಲ್ಲದೇ, ಸಿಬಿಐಗೆ ನೋಟಿಸ್ ಜಾರಿಗೊಳಿಸಿತು. ಈ ಹಂತದಲ್ಲಿ ಸಿ.ವಿ.ನಾಗೇಶ್ ಅವರು ರಜಾಕಾಲದ ಪೀಠದ ಮುಂದೆ ಅರ್ಜಿ ವಿಚಾರಣೆ ಕೋರುವ ಸ್ವಾತಂತ್ಯ ನೀಡಬೇಕು ಎಂಬ ಮನವಿಯನ್ನೂ ನ್ಯಾಯಾಲಯ ಪುರಸ್ಕರಿಸಿತು. ಇದಕ್ಕೆ ಆಕ್ಷೇಪಿಸಿದ ಸಿಬಿಐ ಪರ ವಕೀಲ ರಾಹುಲ್ ಕೃಷ್ಣಾರೆಡ್ಡಿ ಅವರು "ವಿಚಾರಣಾಧೀನ ನ್ಯಾಯಾಲಯದ ತೀರ್ಪು 680 ಪುಟಗಳಿವೆ. ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ಬೇಕಾಗುತ್ತದೆ. ಹೀಗಾಗಿ, ತಮ್ಮ ಆಕ್ಷೇಪಣೆಯನ್ನು ದಾಖಲಿಸಬೇಕು" ಎಂದು ಕೋರಿದರು. ಇದನ್ನೂ ನ್ಯಾಯಾಲಯವು ಆದೇಶದಲ್ಲಿ ದಾಖಲಿಸಿ, ವಿಚಾರಣೆ ಮುಂದೂಡಿತು.

ಮಧ್ಯಂತರ ಪರಿಹಾರದ ಭಾಗವಾಗಿ ವಿಚಾರಣಾಧೀನ ನ್ಯಾಯಾಲಯ ವಿಧಿಸಿರುವ ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸಿ, ಜಾಮೀನು ಮಂಜೂರು ಮಾಡಬೇಕು ಎಂದು ವಿನಯ್ ಕುಲಕರ್ಣಿ ಹಾಗೂ ಚಂದ್ರಶೇಖರ್ ಇಂಡಿ ಕೋರಿದ್ದಾರೆ.

01/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸಮತೋಲನ

## ಗೊಬ್ಬರಗಳ ಬಳಕೆಗೆ ಕರೆ

ರಾಮನಗರ

ರೈತರು ಸಮತೋಲನ ಗೊಬ್ಬರ ಬಳಕೆಗೆ ಆದ್ಯತೆ ನೀಡಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಅಂಬಿಕಾ ಅವರು ತಿಳಿಸಿದರು.

ರಾಮನಗರದ ಉಪ ಕೃಷಿ ಕಚೇರಿಯಲ್ಲಿ ಬೆಂಗಳೂರಿನ ಜಿಕೆವಿಕೆ ಕೃಷಿ ವಿಶ್ವವಿದ್ಯಾಲಯದ ಆಶ್ರಯದಲ್ಲಿ ಹಾಗೂ ಅಖಿಲ ಭಾರತ ಸುಸಂಘಟಿತ ಖುಷ್ಕಿ ಬೆಳೆ ಪ್ರಯೋಜನೆ ಮತ್ತು ಕೇಂದ್ರ ಪುರಸ್ಕೃತ ಆತ್ಮ ಯೋಜನೆಯ ಸಹಯೋಗದಲ್ಲಿ ಸಮತೋಲನ ಗೊಬ್ಬರಗಳ ಬಳಕೆಯ ಕುರಿತು ಜಾಗೃತಿ ಮೂಡಿಸಲು ಆಯೋಜಿಸಲಾಗಿದ್ದ ವಿಶೇಷ ಆಂದೋಲನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಣ್ಣಿನ ಆರೋಗ್ಯ ಕಾಪಾಡಲು ಹಾಗೂ ಉತ್ತಮ ಉತ್ಪಾದನೆ ಪಡೆಯಲು ಸಮತೋಲನ ಗೊಬ್ಬರ ಬಳಕೆ ಅಗತ್ಯವೆಂದು ಹೇಳಿದರು.

ಪ್ರಯೋಜನೆಯ ಮುಖ್ಯಸ್ಥರಾದ ಡಾ. ಮೂಡಲಗಿರಿಯಪ್ಪ ಅವರು, ಮಣ್ಣಿನ ಪರೀಕ್ಷೆಯ ಆಧಾರದ ಮೇಲೆ ಗೊಬ್ಬರ ಬಳಕೆ ಮಾಡುವ ಮಹತ್ವವನ್ನು ತಿಳಿಸಿ, ವೈಜ್ಞಾನಿಕ ವಿಧಾನಗಳನ್ನು ಅನುಸರಿಸಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ ಎಂದರು.

ಸಂಪನ್ಮೂಲ ವ್ಯಕ್ತಿಗಳಾದ ಡಾ. ವೆಂಕಟಗೌಡ ಅವರು, ಮಣ್ಣಿನ ಆರೋಗ್ಯ ಕಾಪಾಡಲು ಹಸಿರೆಲೆ ಗೊಬ್ಬರಗಳ ಬಳಕೆ ಅತ್ಯಂತ ಉಪಯುಕ್ತ, ಹಸಿರೆಲೆ ಗೊಬ್ಬರಗಳು ಮಣ್ಣಿಗೆ ಅಗತ್ಯವಾದ ಸಾವಯವ ದ್ರವ್ಯವನ್ನು ಹೆಚ್ಚಿಸಿ, ಮಣ್ಣಿನ ರಚನೆ ಸುಧಾರಿಸಲು ಸಹಾಯ ಮಾಡುತ್ತವೆ ಎಂದು ಹೇಳಿದರು.

ಹಸಿರೆಲೆ ಗೊಬ್ಬರ ಬೆಳೆಗಳಾದ ಅಪ್ಸೆಣಬು, ಚಂಬೆ, ಹುರಳಿ ಹಾಗೂ ಇತರ ಎಲ್ಲಾ ದ್ವಿದಳ ಧಾನ್ಯ ಬೆಳೆಗಳು ಮಣ್ಣಿನಲ್ಲಿ ನೈಸರ್ಗಿಕವಾಗಿ ನೈಟ್ರೋಜನ್ ಸ್ಥಿರೀಕರಣ ಮಾಡುವುದರಿಂದ ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸುತ್ತವೆ, ಈ ಬೆಳೆಗಳನ್ನು 40–45 ದಿನಗಳಲ್ಲಿ ಬೆಳೆಸಿ, ನಂತರ ಮಣ್ಣಿನಲ್ಲಿ ಮಿಶ್ರಣ ಮಾಡಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ ಎಂದು ಹೇಳಿದರು.

ಹಸಿರೆಲೆ ಗೊಬ್ಬರಗಳಲ್ಲಿ ಮುಖ್ಯವಾಗಿ ನೈಟ್ರೋಜನ್ ಅಂಶ ಹೆಚ್ಚು ಇರುವುದರ ಜೊತೆಗೆ, ಕೆಲವು ಪ್ರಮಾಣದಲ್ಲಿ ಫಾಸ್ಫರಸ್ ಮತ್ತು ಪೊಟಾಶ್ ಅಂಶಗಳೂ ಲಭ್ಯವಿರುತ್ತವೆ. ಉದಾಹರಣೆಗೆ, ಅಪ್ಸೆಣಬು ಬೆಳೆ ಹೆಚ್ಚು ನೈಟ್ರೋಜನ್ ಒದಗಿಸುವುದರಿಂದ ಮುಂದಿನ ಬೆಳೆಗಳಿಗೆ ಪೋಷಕಾಂಶಗಳ ಕೊರತೆ ಆಗುವುದಿಲ್ಲ ಎಂದು ತಿಳಿಸಿದರು.

ಹಸಿರೆಲೆ ಗೊಬ್ಬರಗಳ ಬಳಕೆಯಿಂದ ಮಣ್ಣಿನ ತೇವಾಂಶ ಕಾಯ್ದುಕೊಳ್ಳಲು ಸಹಾಯವಾಗುತ್ತದೆ, ಕೀಟ ಹಾಗೂ ರೋಗಗಳ ಪ್ರಭಾವ ಕಡಿಮೆಯಾಗುತ್ತದೆ ಹಾಗೂ ರಾಸಾಯನಿಕ ಗೊಬ್ಬರಗಳ ಮೇಲಿನ ಅವಲಂಬನೆ ಕಡಿಮೆಯಾಗುತ್ತದೆ, ಹಸಿರೆಲೆ ಗೊಬ್ಬರಗಳನ್ನು ರೈತರು ತಮ್ಮ ಬೆಳೆ ಚಕ್ರದಲ್ಲಿ ಅಳವಡಿಸಿಕೊಂಡರೆ, ದೀರ್ಘಕಾಲಿಕವಾಗಿ ಮಣ್ಣಿನ ಆರೋಗ್ಯವನ್ನು ಉಳಿಸಿಕೊಳ್ಳಬಹುದು ಮತ್ತು ಉತ್ತಮ ಉತ್ಪಾದನೆ ಪಡೆಯಬಹುದು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕನಕಪುರ, ಮಾಗಡಿ ಹಾಗೂ ಚನ್ನಪಟ್ಟಣ ತಾಲೂಕುಗಳ ಸಹಾಯಕ ಕೃಷಿ ನಿರ್ದೇಶಕರು ಮತ್ತು ಜಿಲ್ಲೆಯ ಎಲ್ಲಾ ತಾಲೂಕುಗಳಿಂದ ರೈತರು ಭಾಗವಹಿಸಿದ್ದರು.

## ಇ–ಪೌತಿ ಖಾತೆ ಸೃಜಸಿ ತುಮಕೂರು ಜಿಲ್ಲೆ ರಾಜ್ಯಕ್ಕೆ ಪ್ರಥಮ

ತುಮಕೂರು

ಸರ್ಕಾರದ ನಿರ್ದೇಶನದಂತೆ ಜಾರಿಯಲ್ಲಿರುವ ಇ–ಪೌತಿ ಖಾತಾ ಆಂದೋಲನದಲ್ಲಿ ತುಮಕೂರು ಜಿಲ್ಲೆ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಗಮನಾರ್ಹ ಸಾಧನೆ ಮಾಡಿದೆ.

ಜಿಲ್ಲೆಯಲ್ಲಿ ಇದುವರೆಗೆ ಒಟ್ಟು 80,262 ಇ–ಪೌತಿ ಖಾತೆಗಳು ಯಶಸ್ವಿಯಾಗಿ ಸೃಜಿಸಲ್ಪಟ್ಟಿದ್ದು, ಈ ಮೂಲಕ ತುಮಕೂರು ಜಿಲ್ಲೆ ರಾಜ್ಯದಲ್ಲೇ ಮೊದಲ ಸ್ಥಾನವನ್ನು ಅಲಂಕರಿಸಿದೆ.

ಈ ಮಹತ್ವದ ಸಾಧನೆಗೆ ಗ್ರಾಮ ಆಡಳಿತಾಧಿಕಾರಿಗಳು, ರಾಜಸ್ವ ನಿರೀಕ್ಷಕರು, ಶಿರಸ್ತೆದಾರರು, ಭೂಮಿ ತಂತ್ರಾಂಶದ ತಾಂತ್ರಿಕ ಸಮಾಲೋಚಕರಾದ ಬಿಲ್ವ ಪ್ರಸಾದ್ ಮತ್ತು ನಂದಕುಮಾರ್ ಸಮನ್ವಯದ ಸಹಕಾರ ಪ್ರಮುಖ ಕಾರಣವಾಗಿದೆ.

ಈ ಬಗ್ಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಜಿಲ್ಲೆಯ ಎಲ್ಲಾ ಕಂದಾಯ ಇಲಾಖೆ ಸಿಬ್ಬಂದಿಯನ್ನು ಅಭಿನಂದಿಸಿ, ಇದೇ ಉತ್ಸಾಹ ಮತ್ತು ಬದ್ಧತೆಯಿಂದ ಸಾರ್ವಜನಿಕ ಸೇವೆಯಲ್ಲಿ ಮತ್ತಷ್ಟು ಉತ್ತಮ ಸಾಧನೆ ಮಾಡಲು ಕರೆ ನೀಡಿದ್ದಾರೆ.

## ಮೇ.1ರಂದು ಕೆಜಿಎಫ್‌ನಲ್ಲಿ ಬುದ್ಧ ಜಯಂತಿ ಕಾರ್ಯಕ್ರಮ

ಕೆಜಿಎಫ್

ಕೆಜಿಎಫ್ ನಗರದ ಅಶೋಕ ದಮ್ಮಧೂತ ಬುದ್ದ ಸಂಘದ ಆಧ್ಯಾತ್ಮಕ ಮಂದಿರದಲ್ಲಿ ಮೇ.1 ರಂದು ಶುಕ್ರವಾರ ಬುದ್ದ ಜಯಂತಿಯ ಆಚರಣೆ ಕಾರ್ಯಕ್ರಮ ವೈಶಾಖ ಬುದ್ದ ಹುಣ್ಣಿಮೆಯ 2570ನೇ ಪವಿತ್ರ ಬುದ್ದ ಜಯಂತಿ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಡಾ॥ ಎಂ.ಆರ್.ರವಿ ಅವರು ಭಾಗವಹಿಸುವರು.

ಮಹಾ ಬುದ್ದ ಸಂಸ್ಥೆಯ ವತಿಯಿಂದ ವೈಶಾಖ ಬುದ್ದ ಹುಣ್ಣಿಮೆಯ 2570ನೇ ಪವಿತ್ರ ಬುದ್ದ ಜಯಂತೋತ್ಸವದ ಅಂಗವಾಗಿ ಧಮ್ಮ ಪಾದಉತ್ಸವವು ಇದೇ ಬುದ್ದ ಹುಣ್ಣಿಮೆಯ ಆಚರಣೆ ಕಾರ್ಯಕ್ರಮ ಸಂದರ್ಭದಲ್ಲಿ ವಿಶೇಷವಾದ ರೀತಿಯಲ್ಲಿ ನಡೆಯಲಿದೆ.

ಬೆಂಗಳೂರು ಮಹಾಬೋಧಿ ಸಮಾಜದ ಭಂತೇಜಿ ಧಮ್ಮಚಿತ್ತ ಮಹಾತೀರ, ಕಾರ್ಯದರ್ಶಿ ಭಂತೇಜಿಜೀನವಾಸಂ ಬಿಕ್ಕು, ಅಶೋಕ ದಮ್ಮದತ್ತ ಬೌದ್ದ ಸಮಾಜದ ಕಾರ್ಯದರ್ಶಿ ಭಂತೇಜಿ ಖೇಮಿಂಡೋ ಅವರುಗಳ ಸಾನ್ನಿಧ್ಯದಲ್ಲಿ ಹಲವಾರು ಭಂತೇಜಿಗಳು, ಉಪಾಸಕರು ಮತ್ತು ಉಪಾಸಿಕರು ಭಕ್ತಿಭಾವದಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿ ಧಾರ್ಮಿಕ ವಿಧಿವಿಧಾನಗಳನ್ನು ನಡೆಸಿಕೊಡುವರು.

ವೈಶಾಖ ಬುದ್ದ ಹುಣ್ಣಿಮೆಯ 2570ನೇ ಪವಿತ್ರ ಬುದ್ದ ಜಯಂತಿ ಹಾಗೂ ಬುದ್ದ ಹುಣ್ಣಿಮೆಯ ಆಚರಣೆ ಕಾರ್ಯಕ್ರಮದಲ್ಲಿ ಸಮಸ್ತ ನಾಗರೀಕ ಬಂಧುಗಳು, ಬುದ್ದನ ಅನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಲು ಬುದ್ದ ಸಂಘದ ಉಪಾಸಕ ಡಾ॥ ಆರ್.ಪ್ರಭುರಾಂ ಅವರು ಕೋರಿದ್ದಾರೆ.

ಮೇ.1 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನಡೆಯುವ ಧಮ್ಮ ಪಾದ ಉತ್ಸವ ಹಾಗೂ ಬುದ್ದ ಜಯಂತಿಯ ಆಚರಣೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಜಿಲ್ಲಾಧಿಕಾರಿ ಡಾ॥ ಎಂ.ಆರ್.ರವಿ ಅವರನ್ನು ಬುದ್ದಗುರು ಕೆಮೆಂಡೋ ಬಂತೇಜಿ, ಉಪಾಸಕ ಡಾ॥ ಆರ್.ಪ್ರಭುರಾಂ ಅವರುಗಳು ಸಾಂಪ್ರದಾಯಿಕವಾಗಿ ಆಮಂತ್ರಿಸಿದರು.

## ಬಿದರಹಳ್ಳಿ ಕ್ರಾಸ್ ಲಕ್ಷ್ಮೀನರಸಿಂಹಸ್ವಾಮಿಗೆ ಏ.30ರಂದು ತಿರುಕಲ್ಯಾಣೋತ್ಸವ ಸಂಭ್ರಮ

ಕೋಲಾರ

ಕೋಲಾರ–ಬೆಂಗಳೂರು ರಸ್ತೆಯ ಬಿದರಹಳ್ಳಿ ಕ್ರಾಸ್‌ನಲ್ಲಿರುವ ಶ್ರೀಲಕ್ಷ್ಮೀನರಸಿಂಹ ಸ್ವಾಮಿ ದೇವಾಲಯದಲ್ಲಿ ಸ್ವಾಮಿಯ 10ನೇ ವರ್ಷದ ವಾರ್ಷಿಕೋತ್ಸವ ಹಾಗೂ ಜಯಂತಿ,ತಿರುಕಲ್ಯಾಣೋತ್ಸವ ಕಾರ್ಯಕ್ರಮಗಳನ್ನು ಏ.30 ರಂದು ಹಮ್ಮಿಕೊಳ್ಳಲಾಗಿದೆ ಎಂದು ದೇವಾಲಯದ ವ್ಯವಸ್ಥಾಪಕರಾದ ಸಿ.ವಿ.ಶಂಕರಮೂರ್ತಿ ತಿಳಿಸಿದ್ದಾರೆ.

ಏ.30 ರಂದು ಬೆಳಗ್ಗೆ 6–30 ಗಂಟೆಗೆ ಸುಪ್ರಭಾತ ಸೇವೆ,ವೇದ ಪಾರಾಯಣ, ಮೂಲ ದೇವರಿಗೆ ಫಲ ಪಂಚಾಮೃತ, ಅಭಿಷೇಕ, ವಿಶೇಷ ಅಲಂಕಾರವಿದೆ, ಇದೇ ಸಂದರ್ಭದಲ್ಲಿ ಗಣಹೋಮ, ನವಗ್ರಹಹೋಮ, ಮೃತ್ಯುಂಜಯ ಹೋಮ, ಲಕ್ಷ್ಮೀ ನರಸಿಂಹಸ್ವಾಮಿ ಮೂಲ ಮಂತ್ರಹೋಮ ನಡೆಯಲಿದ್ದು, ಕುರುಬೂರಿನ ಭುವನೇಶ್ವರಿ ಕನ್ನಡ ಕಲಾ ಸಂಘದಿಂದ ಭಜನೆ ಸೇವೆ ಇದೆ. ಬೆಳಗ್ಗೆ 10–30ಕ್ಕೆ ತಿರುಕಲ್ಯಾಣೋತ್ಸವ ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ಅನ್ನದಾಸೋಹವನ್ನು ಕೆ.ಆರ್.ಪುರಂನ ಶೈಲಜಾ ಮತ್ತು ಶ್ರೀಮನೋಹರ್ ಕುಟುಂಬದವರು ಹಮ್ಮಿಕೊಂಡಿದ್ದು, ಹರಿದಾಸ ಸಂಘದ ಅಧ್ಯಕ್ಷ ಹರಾ ನಾಗರಾಜಚಾರ್ಯರು ಉಪಸ್ಥಿತರಿರುವರು.

# ತುಮಕೂರು ವಿವಿಯಲ್ಲಿ ರಾಜ್ಯ ಮಟ್ಟದ ಮಾಧ್ಯಮ ಉತ್ಸವ

ತುಮಕೂರು

ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಹಾಗೂ ವಿಶ್ವವಿದ್ಯಾನಿಲಯ ಕಲಾ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ವತಿಯಿಂದ ಮೇ 18 ಮತ್ತು 19 ರಂದು 'ಇಂಪ್ರೆಷನ್–2026' ರಾಜ್ಯಮಟ್ಟದ ಮಾಧ್ಯಮ ಉತ್ಸವವನ್ನು ಹಮ್ಮಿಕೊಳ್ಳಲಾಗಿದೆ. ಇದರ ಪೋಸ್ಟರ್ ಅನ್ನು ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಎಂ. ವೆಂಕಟೇಶ್ವರಲು ಮಂಗಳವಾರ ಅನಾವರಣಗೊಳಿಸಿದರು.




ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಾಧ್ಯಮ ಉತ್ಸವವು ವಿದ್ಯಾರ್ಥಿಗಳ ಸೃಜನಶೀಲತೆ ಹಾಗೂ ಪ್ರತಿಭೆಯನ್ನು ಅಭಿವ್ಯಕ್ತಿಸಲು ಪರಿಣಾಮಕಾರಿ ವೇದಿಕೆಯಾಗಲಿ. ರಾಜ್ಯದ ವಿವಿಧ ಭಾಗಗಳ ವಿದ್ಯಾರ್ಥಿಗಳು ತುಮಕೂರು ವಿಶ್ವವಿದ್ಯಾನಿಲಯಕ್ಕೆ ಬಂದು ಭಾಗವಹಿಸುವುದಕ್ಕೆ ಅವಕಾಶವಾಗಲಿ ಎಂದು ಶುಭ ಹಾರೈಸಿದರು.

ಮಾಧ್ಯಮ ಹಬ್ಬವು ವಿಶ್ವವಿದ್ಯಾನಿಲಯದ ಸರ್ ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ "ಸೃಜಿಸಿ, ಸಂವಹಿಸಿ, ಆಕರ್ಷಿಸಿ – ಮಾಧ್ಯಮದ ಧ್ವನಿಯಾಗಿ" ಎಂಬ ಘೋಷವಾಕ್ಯದೊಂದಿಗೆ ನಡೆಯಲಿದೆ. ಹನ್ನೆರಡು ವಿವಿಧ ಬಗೆಯ ಏಕವ್ಯಕ್ತಿ ಮತ್ತು ಗುಂಪು ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಸ್ಪರ್ಧೆಗಳ ವಿವರ: ಏಕವ್ಯಕ್ತಿ ಸ್ಪರ್ಧೆಗಳು: ವರದಿಗಾರಿಕೆ, ಟಿವಿ ಸುದ್ದಿ ಪ್ರಸ್ತುತಿ, ರೇಡಿಯೋ ಜಾಕಿ, ಛಾಯಾಗ್ರಹಣ, ಪೋಸ್ಟರ್ ವಿನ್ಯಾಸ, ಪುಟ್ಟಕತೆ, ರೀಲ್ಸ್ ಮೇಕಿಂಗ್, ಪೀಸ್ ಟು ಕ್ಯಾಮೆರಾ. ಗುಂಪು ಸ್ಪರ್ಧೆಗಳು: ಚರ್ಚಾ ಸ್ಪರ್ಧೆ, ರಸಪ್ರಶ್ನೆ, ಜಾಹೀರಾತು ನಿರ್ಮಾಣ, ಸಮೂಹ ನೃತ್ಯ ಸ್ಪರ್ಧೆ.

ಈ ಸ್ಪರ್ಧೆ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಸೀಮಿತವಾಗಿಲ್ಲ. ಯಾವುದೇ ಪದವಿ ಅಥವಾ ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಈ ಸ್ಪರ್ಧೆಗಳಲ್ಲಿ ಭಾಗವಹಿಸಬಹುದು. ವಿಜೇತರಿಗೆ ಆಕರ್ಷಕ ನಗದು ಬಹುಮಾನ, ಸ್ಮರಣಿಕೆ ಹಾಗೂ ಪ್ರಶಸ್ತಿ ಪತ್ರಗಳನ್ನು ನೀಡಲಾಗುವುದು.

ಆಸಕ್ತ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ವಿಭಾಗದ ಸಂಯೋಜಕರಾದ ಡಾ.ಸಿಬಂತಿ ಪದ್ಮನಾಭ ಕೆ.ವಿ 9449525854 ಅಥವಾ ವಿದ್ಯಾರ್ಥಿ ಸಂಚಾಲಕರಾದ ಪ್ರದೀಪ್ ಡಿ.ಎಸ್ 6362099062 ಇವರನ್ನು ಸಂಪರ್ಕಿಸಬಹುದು.

## 'ಮೂಲದಲ್ಲಿಯೇ ಕಸ ವಿಂಗಡಿಸಿ ಪರಿಸರ ಉಳಿಸಿ'



ಶ್ರೀನಿವಾಸಪುರ

ಪಟ್ಟಣದ ಪುರಸಭಾ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಪುರಸಭೆಯ ಪೌರಕಾರ್ಮಿಕರಿಗೆ ಕಸ ವಿಂಗಡಣೆ ಕುರಿತು ತಿಳುವಳಿಕೆ ನೀಡಲಾಯಿತು.

ಪುರಸಭೆ ಮುಖ್ಯಾಧಿಕಾರಿ ವಿ.ನಾಗರಾಜ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಪೌರ ಕಾರ್ಮಿಕರು ಮೂಲದಲ್ಲಿಯೇ ಹಸಿ ಕಸ, ಒಣ ಕಸ ಹಾಗೂ ಪ್ಲಾಸ್ಟಿಕ್ ತ್ಯಾಜ್ಯವನ್ನು ವಿಂಗಡಿಸಿಕೊಳ್ಳಬೇಕು. ಹಾಗೆ ಮಾಡುವುದರಿಂದ ಕಸದ ಸಂಸ್ಕರಣೆ ಸುಲಭವಾಗುತ್ತದೆ ಎಂದು ಹೇಳಿದರು.

ಪಟ್ಟಣದ ನಾಗರಿಕರು ತಮ್ಮ ಮನೆಯಲ್ಲಿನ ತ್ಯಾಜ್ಯ ವಸ್ತುಗಳನ್ನು ನಿಯಮಾನುಸಾರ ವಿಂಗಡಿಸಿ ಪೌರ ಕಾರ್ಮಿಕರಿಗೆ ನೀಡುವುದರ ಮೂಲಕ ಸಹಕರಿಸಬೇಕು. ಪಟ್ಟಣದ ಸ್ವಚ್ಛತೆಗೆ ಪೂರಕವಾಗಿ ನಡೆದುಕೊಳ್ಳಬೇಕು ಎಂದು ಹೇಳಿದರು.

ಮೇ.1 ರಂದು ಪಟ್ಟಣದಲ್ಲಿ ಸ್ವಚ್ಛತಾ ಆಂದೋಲನ ಏರ್ಪಡಿಸಲಾಗಿದೆ. ಆ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಭಾಗವಹಿಸುವುದರ ಮೂಲಕ ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ಪುರಸಭೆ ಆರೋಗ್ಯ ನಿರೀಕ್ಷಕ ವಿಜಯಕುಮಾರ್ ಮಾತನಾಡಿ, ಸ್ವಚ್ಛತೆ ನಾಗರಿಕತೆಯ ಮುಖ್ಯ ಲಕ್ಷಣ.

ಪಟ್ಟಣದ ನಾಗರಿಕರು ವೈಯಕ್ತಿಕ ಸ್ವಚ್ಛತೆಗೆ ನೀಡುವಷ್ಟೇ ಪ್ರಾಮುಖ್ಯತೆಯನ್ನು ಪಟ್ಟಣದ ಸ್ವಚ್ಛತೆಗೆ ನೀಡಬೇಕು. ಅದಕ್ಕೆ ಪೂರಕವಾಗಿ ಕಸವನ್ನು ವಿಂಗಡಿಸಿ ಪೌರ ಕಾರ್ಮಿಕರಿಗೆ ನೀಡಬೇಕು ಎಂದು ಹೇಳಿದರು.

ಕಂದಾಯ ಅಧಿಕಾರಿ ಶಂಕರ್, ಪರಿಸರ ಅಭಿಯಂತರ ಲಕ್ಷ್ಮೀಶ, ಕಿರಿಯ ಆರೋಗ್ಯ ನಿರೀಕ್ಷಕ ಟಿ.ವಿ.ಸುರೇಶ್, ಪೌರಕಾರ್ಮಿಕರ ಮೇಸ್ತ್ರೀ ಬಾಲಕೃಷ್ಣ, ಸಿಬ್ಬಂದಿ ಸಂತೋಷ್, ನಾಗರಾಜ್, ಪ್ರಕಾಶ್, ಚೇತನ್ ಇದ್ದರು.

## ಹಳೆ ವಿದ್ಯಾರ್ಥಿಗಳಿಂದ ಸಬರಮತಿ ಪ್ರೌಢಶಾಲೆಯಲ್ಲಿ ಗುರುವಂದನೆ: ಸ್ನೇಹಸಮ್ಮಿಲನ

ಕೋಲಾರ

ಅಕ್ಷರ ಕಲಿಸಿದ ಗುರುವನ್ನು ಮರೆಯದೇ 24 ವರ್ಷಗಳ ನಂತರವೂ ಸ್ಮರಿಸುವ ಕೆಲಸಕ್ಕೆ ಮುಂದಾಗಿರುವ ಹಳೆ ವಿದ್ಯಾರ್ಥಿಗಳ ಕಾರ್ಯ ಶಾಲೆಯ ಮಕ್ಕಳಿಗೆ ಆದರ್ಶವಾಗಿದೆ ಎಂದು ತಾಲ್ಲೂಕಿನ ಸುಗಟೂರು ಸಬರಮತಿ ಪ್ರೌಢಶಾಲೆ ಆಡಳಿತಾಧಿಕಾರಿ ಬಿ.ವೆಂಕಟೇಶ್ ಹರ್ಷ ವ್ಯಕ್ತಪಡಿಸಿದರು.

ಶಾಲೆಯ ಆವರಣದಲ್ಲಿ 2000–01ನೇ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಮುಗಿಸಿದ್ದ ನೂರಾರು ವಿದ್ಯಾರ್ಥಿಗಳು ಒಟ್ಟುಗೂಡಿ 'ನಮ್ಮ ಶಾಲೆ ನಮ್ಮ ಹೆಮ್ಮೆ'ಕಾರ್ಯಕ್ರಮದಡಿ ಗುರುಗಳನ್ನು ಸ್ಮರಿಸುವ ಆಯೋಜಿಸಿದ್ದ ಸ್ನೇಹಮಿಲನ ಹಾಗೂ ಗುರುವಂದನೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

3 ವರ್ಷಗಳ ಕಾಲ ಮಕ್ಕಳಿಗೆ ನೀಡಿದ ನೈತಿಕ ಶಿಕ್ಷಣದಿಂದಲೇ ಇಂದು ಹಳೆ ವಿದ್ಯಾರ್ಥಿಗಳು ಮತ್ತೆ ಶಾಲೆಯತ್ತ ಬಂದು ಅಕ್ಷರ ಕಲಿಸಿದ ಗುರುಗಳ ಋಣ ತೀರಿಸುವ ಕೆಲಸ ಮಾಡುತ್ತಿದ್ದಾರೆ. ಶಾಲೆಗಳನ್ನು ಮುನ್ನಡೆಸುವುದ ಕಷ್ಟದ ಕೆಲಸವಾಗಿದೆ ಇಂತಹ ಸಂದರ್ಭದಲ್ಲೂ 54 ವರ್ಷ ಶಾಲೆಯನ್ನು ಮುನ್ನಡೆಸಿದ್ದು, ಇಂದು 1800 ಮಕ್ಕಳು ಓದುತ್ತಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಶಾಲೆಯ ಕೊಠಡಿಗಳಿಗೆ ಕಿಟಕಿಗಳನ್ನು ಕಕೊಡುಗೆಯಾಗಿ ನೀಡಿದ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ನಿವೃತ್ತ ಶಿಕ್ಷಕರಾದ ಜಿ.ನಂಜುಂಡಪ್ಪ, ಎನ್.ಶ್ರೀನಿವಾಸರೆಡ್ಡಿ, ಧಾನಪ್ರಕಾಶ್ ಮತ್ತಿತರರು ಮಾತನಾಡಿ, ನಿವೃತ್ತರಾದ ನಂತರವೂ 20 ವರ್ಷಗಳ ಹಿಂದಿನ ಶಿಷ್ಯರು ಸ್ಮರಿಸಿ ಕರೆದಿರುವುದು ಅತಿ ಹೆಚ್ಚು ಸಂತಸ ಉಂಟು ಮಾಡಿದೆ ಎಂದು ತಿಳಿಸಿದರು.

ಗುರಿ ಸಾಧನೆಗೆ ಗುರು ಇರಬೇಕು ಎಂಬ ಮಾತಿದೆ ಆದರೆ ಇತ್ತೀಚಿನ ದಿನಗಳಲ್ಲಿ ಗುರುವನ್ನು ಮರೆಯುವ ಸಂಸ್ಕೃತಿ ಹೆಚ್ಚಿದೆ ಎಂದ ಅವರು, ಇಂತಹ ಪರಿಸ್ಥಿತಿಯಲ್ಲೂ ಗುರುಗಳನ್ನು ನೆನಪು ಮಾಡಿಕೊಂಡಿರುವ ಹಳೆ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಇದೇ ಸಂದರ್ಭದಲ್ಲಿ ಹಾಲಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದ ಅವರು, ತಂದೆ,ತಾಯಿ ದುಡಿದು, ಕೂಲಿ ಮಾಡಿ ನಿಮ್ಮನ್ನು ಶಾಲೆಗೆ ಕಳುಹಿಸಿದ್ದಾರೆ, ನೀವು ಚೆನ್ನಾಗಿ ಓದುವ ಮೂಲಕ ಅವರ ಆಶಯಗಳನ್ನು ಈಡೇರಿಸುವ ಸಂಕಲ್ಪ ಹೊಂದಿರಬೇಕು, ಗುರುಹಿರಿಯರನ್ನು ಗೌರವಿಸುವ ಸಂಸ್ಕಾರ ಬೆಳೆಸಿಕೊಳ್ಳಿ, ವಿದ್ಯೆಗೆ ವಿನಯವೇ ಆಭರಣ ಎಂಬುದನ್ನು ಮರೆಯದಿರಿ ಎಂದು ಹೇಳಿದರು.

ಹಳೆ ವಿದ್ಯಾರ್ಥಿಗಳಾದ ಶ್ಯಾಮಲ, ರಾಮಾಂಜಿ, ಕಮಲ,ಉಮಾಶಂಕರ್, ಸುಭಾಷ್‌ಚಂದ್ರಬೋಸ್, ಮತ್ತಿತರರು ಕಾರ್ಯಕ್ರಮದ ಉಸ್ತುವಾರಿ ವಹಿಸಿದ್ದು, ಸ್ಪರ್ಧಾತ್ಮಕ ಯುಗದಲ್ಲಿ ಯಾರಲ್ಲಿ ಶ್ರಮ,ಕನಸು, ಪ್ರಯತ್ನ ಇರುತ್ತದೆಯೋ ಅವರು ಮಾತ್ರ ಬೆಳೆಯುತ್ತಾರೆ, ಎಸ್ಸೆಸ್ಸೆಲ್ಸಿ ಟರ್ನಿಂಗ್ ಪಾಯಿಂಟ್ ಆಗಿದ್ದು, ಇಲ್ಲೇ ನಿಮ್ಮ ಮುಂದಿನ ಭವಿಷ್ಯದ ಹಾದಿ ನಿರ್ಧಾರವಾಗುತ್ತದೆ ಎಂದರು.

ಪ್ರಪಂಚ ಇಂದು ಗ್ಲೋಬಲ್ ವಿಲೇಜ್ ಆಗಿದೆ,ಕಂಪ್ಯೂಟರ್ ಜ್ಞಾನವಿಲ್ಲದಿದ್ದರೆ ಮುಂದಿನ ದಿನಗಳಲ್ಲಿ ಅಂತಹವರನ್ನೇ ಅನಕ್ಷರಸ್ಥರೆಂದು ಪರಿಗಣಿಸುವ ಕಾಲ ಬರಲೂಬಹುದು ಎಂದು ತಿಳಿಸಿ, ಮಕ್ಕಳು ಇಂದಿನಿಂದಲೇ ಕಂಪ್ಯೂಟರ್ ಜ್ಞಾನ ಬೆಳೆಸಿಕೊಳ್ಳಿ ಎಂದರು. ಇದೇ ಸಂದರ್ಭದಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಶಾಲೆಯ ನಾಲ್ವರು ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಕರಾದ ಪಿ.ಎಂ.ನಾರಾಯಣ ಸ್ವಾಮಿ, ಎಸ್.ಆರ್.ಮೋಹನ್, ಎನ್.ಶ್ರೀರಾಮರೆಡ್ಡಿ, ಸಿ.ನಾರಾಯಣಸ್ವಾಮಿ, ಕೆಂಚೇಗೌಡ, ವಿಶ್ವನಾಥ್, ನಾರಾಯಣಸ್ವಾಮಿ, ನಾಗಭೂಷಣ್, ಅನಂತಪದ್ಮನಾಭ್, ಹೆಚ್.ನಾರಾಯಣಸ್ವಾಮಿ, ಆರ್.ವೆಂಕಟೇಶ್, ಸಿ.ವೆಂಕಟೇಶಪ್ಪ, ಬಾಲಕೃಷ್ಣ, ಕೆ.ವಿ.ರಾಜಣ್ಣ ಮತ್ತಿತರರಿದ್ದರು.

## ಮುಂದಿನ ಚುನಾವಣೆಯಲ್ಲಿ ಸ್ಪರ್ಧೆ ಖಚಿತ

ಗುಡಿಬಂಡೆ

ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ನಾನು ಬಾಗೇಪಲ್ಲಿ–ಗುಡಿಬಂಡೆ ವಿಧಾನಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡುವುದು ಖಚಿತ, ಸದಾ ಜನರ ಬಳಿಯಿರುವ ನಾನು ಜನರ ಬಳಿಗೆ ಹೋಗಿ ಮತ ಹಾಕುವಂತೆ ಕೇಳಿಕೊಳ್ಳುತ್ತೇನ, ಜನ ನನಗೆ ಆಶೀರ್ವಾದ ಮಾಡುತ್ತಾರೆ ಎಂದು ಮುಖಂಡ ಡಿ.ಜೆ.ನಾಗರಾಜರೆಡ್ಡಿ ತಿಳಿಸಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಮ್ಮ ಬೆಂಬಲಿಗರೊಂದಿಗೆ ಸಭೆ ನಡೆಸಿ ಬಳಿಕ ಮಾದ್ಯಮಗಳೊಂದಿಗೆ ಮಾತನಾಡಿದ ಅವರು, ನಾನು ಕ್ಷೇತ್ರದಲ್ಲಿ ನಿರಂತರವಾಗಿ ಜನರ ಸಂಪರ್ಕದಲ್ಲಿದ್ದೇನೆ. ಜನರ ಕಷ್ಟಸುಖಗಳಲ್ಲಿ ಭಾಗಿಯಾಗುತ್ತಿದ್ದೇನೆ. ಜನರಿಗೆ ನನ್ನ ಮೇಲೆ ಒಲವು ಇದೆ. ಕಳೆದ ಚುನಾವಣೆಯಲ್ಲೂ ಸಹ ನಾನು ಅಭ್ಯರ್ಥಿಯ ಆಕಾಂಕ್ಷಿಯಾಗಿದ್ದೆ. ಆದರೆ ಕೆಲವೊಂದು ಕಾರಣಗಳಿಂದ ನಾನು ಚುನಾವಣಾ ಕಣದಿಂದ ಹಿಂದೆ ಸರಿಯಬೇಕಾಯ್ತು. ಇದೇ ರೀತಿ ಪ್ರತೀ ಚುನಾವಣೆಯಲ್ಲೂ ನಡೆಯುತ್ತಿದೆ. ಜೆಡಿಎಸ್ ಪಕ್ಷದ ನಿಷ್ಟಾವಂತ ಕಾರ್ಯಕರ್ತನಾದ ನಾನು ಪಕ್ಷಕ್ಕಾಗಿ ದುಡಿದಿದ್ದೆ, ಆದರೆ ಚುನಾವಣೆಯ ಕೊನೆಯ ಕ್ಷಣದಲ್ಲಿ ನನಗೆ ಟಿಕೆಟ್ ಕೈ ತಪ್ಪಿತ್ತು. ಆದ ಕಾರಣ ನಾನು ಚುನಾವಣೆಯಿಂದ ಹಿಂದೆ ಸರಿಯಬೇಕಾಯ್ತು. ಈ ಬಾರಿ ನಾನು ಯಾವುದೇ ಕಾರಣಕ್ಕೂ ಚುನಾವಣಾ ಕಣದಿಂದ ಹಿಂದೆ ಸರಿಯುವುದಿಲ್ಲ ಎಂದರು.

ಇನ್ನೂ ಈ ಬಾರಿ ನಾನು ಯಾವುದೇ ಪಕ್ಷದಿಂದ ಸ್ಪರ್ಧೆ ಮಾಡುವುದಿಲ್ಲ. ಬದಲಿಗೆ ಸ್ವತಂತ್ರ ಅಭ್ಯರ್ಥಿಯಾಗಿ ಚುನಾವಣಾ ಕಣದಲ್ಲಿರುತ್ತೇನೆ. ಆದರೆ ಕ್ಷೇತ್ರದಲ್ಲಿ ಕೆಲವೊಂದು ಮಾತುಗಳು ಕೇಳಿಬರುತ್ತಿದ್ದು, ಅದರಂತೆ ನಾನು ಈ ಬಾರಿ ಸಿಪಿಎಂ ಪಕ್ಷದಿಂದ ಸ್ಪರ್ಧೆ ಮಾಡುವಂತೆ ಹಲವರು ಮಾತನಾಡುತ್ತಿದ್ದಾರೆ. ಪಕ್ಷದಲ್ಲೂ ಸಹ ಈ ಕುರಿತು ಚರ್ಚೆ ನಡೆದಿದೆ ಎನ್ನಲಾಗಿದ್ದು, ಒಂದು ವೇಳೆ ಸಿಪಿಎಂ ಪಕ್ಷದಿಂದ ಅವಕಾಶ ಸಿಕ್ಕರೇ ಸ್ಪರ್ಧೆ ಮಾಡಲು ಸಿದ್ದನಿರುತ್ತೇನೆ. ಕೆಲವೊಂದು ವೈಯುಕ್ತಿಕ ಕಾರಣಗಳಿಂದ ನಾನು ಕ್ಷೇತ್ರದಲ್ಲಿ ಸರಿಯಾಗಿ ಕಾಣಿಸಿಕೊಂಡಿಲ್ಲ, ಇನ್ನೂ ಸದಾ ಕ್ಷೇತ್ರದ ಜನತೆಯ ಸಮಸ್ಯೆಗಳಿಗೆ ಸ್ಪಂದನೆ ನೀಡುತ್ತೇನೆ ಎಂದರು.

ಇನ್ನೂ ಕ್ಷೇತ್ರದಲ್ಲಿ ಹಾಲಿ ಶಾಸಕರು ಸಾಕಷ್ಟು ಅಕ್ರಮಗಳನ್ನು ಮಾಡಿದ್ದಾರೆ. ಅವರ ವಿರುದ್ದ ನಾನು ಹೋರಾಟ ಮಾಡುತ್ತೇನೆ. ಅವರು ಯಾವುದೇ ಅಕ್ರಮಗಳನ್ನು ಮಾಡಿಲ್ಲ ಎಂದು ಸಾಬೀತು ಮಾಡಲಿ ಅಥವಾ ಒಂದೇ ವೇದಿಕೆಗೆ ಬರಲಿ ನಾನು ಚರ್ಚೆ ಮಾಡಲು ಸಿದ್ದನಿದ್ದೇನೆ. ಅವರ ವಿರುದ್ದ ಸಿಬಿಐ ತನಿಖೆ ಮಾಡಲು ನಾನು ಒತ್ತಾಯಿಸುತ್ತೇನೆ. ಕ್ಷೇತ್ರದಲ್ಲಿ ಸಾಕಷ್ಟು ಎಕರೆಗಳು ಜಮೀನನ್ನು ಅಕ್ರಮವಾಗಿ ಖರೀದಿ ಮಾಡಿದ್ದಾರೆ. ಅವರ ವಿರುದ್ದ ಅಕ್ರಮಗಳನ್ನು ಹಂತ ಹಂತವಾಗಿ ಬಯಲು ಮಾಡುತ್ತೇನೆ. ನಾನು ಸ್ವಚ್ಚ ರಾಜಕಾರಣ ಮಾಡಲು ರಾಜಕಾರಣಕ್ಕೆ ಬಂದಿದ್ದೇನೆ ಹೊರತು ಹಣ ಅಥವಾ ಆಸ್ತಿ ಸಂಪಾದನೆ ಮಾಡುವುದಕ್ಕಲ್ಲ ಎಂದರು.

ಈ ವೇಳೆ ಡಿ.ಜೆ.ನಾಗರಾಜರೆಡ್ಡಿಯವರ ಬೆಂಬಲಿಗರಾದ ಸೀತಾರಾಮಪ್ಪ, ವರ್ಲಕೊಂಡ ದೇವರಾಜು ಸೇರಿದಂತೆ ಹಲವರು ಹಾಜರಿದ್ದರು.

## 'ಗೋಮಾತೆಯನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸಬೇಕು'



ಕನಕಪುರ

ರೈತರ ಜೀವನಾಡಿಯಾಗಿರುವ ಹಾಗೂ ಹಿಂದುಗಳು ಪೂಜಿಸುವ ಗೋಮಾತೆ ಅಳಿವಿನ ಅಂಚಿನಲ್ಲಿದ್ದು, ಅದರ ರಕ್ಷಣೆಗೆ ಗೋಮಾತೆಯನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸಬೇಕು ಎಂದು ಶ್ರೀರಾಮ ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗಾರ್ಜುನ್ ಗೌಡ ಒತ್ತಾಯಿಸಿದರು.

ಗೋ ರಕ್ಷಣೆ ಮತ್ತು ಗೋವಂಶ ಸಂರಕ್ಷಣೆಗಾಗಿ ರಾಷ್ಟ್ರವ್ಯಾಪಿ ನಡೆಯುತ್ತಿರುವ ಅಭಿಯಾನದ ಅಂಗವಾಗಿ, ತಾಲ್ಲೂಕು ಆಡಳಿತದ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು. ಭಾರತೀಯ ಸಂಸ್ಕೃತಿ, ಕೃಷಿ, ಆರ್ಥಿಕತೆ ಹಾಗೂ ಆರೋಗ್ಯ ವ್ಯವಸ್ಥೆಯ ಪ್ರಮುಖ ಅಂಗವಾಗಿರುವ ಗೋವುಗಳು ಇಂದು ನಿರ್ಲಕ್ಷ್ಯ ಮತ್ತು ದುರ್ಬಲ ನೀತಿಗಳಿಂದ ಸಂಕಷ್ಟಕ್ಕೀಡಾಗಿವೆ ಎಂದು ವಿಷಾದ ವ್ಯಕ್ತಪಡಿಸಿದರು.

ಗೋಮಾತೆಯ ರಕ್ಷಣೆ ಕೇವಲ ಧಾರ್ಮಿಕ ವಿಷಯವಲ್ಲ, ಅದು ರಾಷ್ಟ್ರದ ಅಸ್ತಿತ್ವ, ರೈತರ ಬದುಕು ಮತ್ತು ಪರಿಸರ ಸಮತೋಲನಕ್ಕೆ ಸಂಬಂಧಿಸಿದ ಮಹತ್ವದ ವಿಚಾರವಾಗಿದೆ. ಸರ್ಕಾರಗಳು ಮಾತಿನಲ್ಲಿ ಮಾತ್ರ ಗೋಭಕ್ತಿ ತೋರಿಸುತ್ತಿದ್ದು, ನೆಲಮಟ್ಟದಲ್ಲಿ ಗೋವಂಶದ ಸ್ಥಿತಿ ದಯನೀಯವಾಗಿದೆ ಎಂದು ಆರೋಪಿಸಿದರು.

ಗೋವನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸುವುದು ಕಾಲದ ಅವಶ್ಯಕತೆಯಾಗಿದೆ. ಇದು ಭಾವನಾತ್ಮಕ ವಿಷಯವಷ್ಟೇ ಅಲ್ಲದೆ, ದೇಶದ ಕೃಷಿ ಮತ್ತು ಆರೋಗ್ಯದ ಭವಿಷ್ಯಕ್ಕೆ ಸಂಬಂಧಿಸಿದೆ. ಸರ್ಕಾರಗಳು ಇನ್ನೂ ಮೌನವಾಗಿದ್ದರೆ ಜನರ ಆಕ್ರೋಶವನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಶ್ರೀರಾಮ ಸೇನೆಯ ವತಿಯಿಂದ ನಡೆಯುತ್ತಿರುವ ಸಹಿ ಸಂಗ್ರಹ ಅಭಿಯಾನದಡಿ, ತಾಲ್ಲೂಕಿನಲ್ಲಿ ಜನರಿಂದ ಬೆಂಬಲ ಸಂಗ್ರಹಿಸಲಾಗುತ್ತಿದೆ. 90677 77323 ಸಂಖ್ಯೆಗೆ ಮಿಸ್ ಕಾಲ್ ಮಾಡುವ ಮೂಲಕ ಜನರು ತಮ್ಮ ಬೆಂಬಲ ಸೂಚಿಸಬಹುದು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾಧ್ಯಕ್ಷ ಪರಮೇಶ್ ಗೌಡ, ವಿಭಾಗೀಯ ಅಧ್ಯಕ್ಷ ನವೀನ್, ಪ್ರ. ಕಾರ್ಯದರ್ಶಿ ಸಾಗರ್ ಹಾಗೂ ಪದಾಧಿಕಾರಿಗಳಾದ ಚೀರಣಕುಪ್ಪೆ ಕುಮಾರ್, ರಾಜೇಶ್, ರಮೇಶ್, ಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಮನವಿ ಪತ್ರವನ್ನು ತಹಶೀಲ್ದಾರ್ ಸಂಜಯ್ ಅವರ ಮೂಲಕ ರಾಜ್ಯಪಾಲರಿಗೆ ಸಲ್ಲಿಸಲಾಯಿತು.

## ಒಂದೇ ಕುಟುಂಬದ ನಾಲ್ವರ ವಿರುದ್ಧ ಜಾಮೀನು ರಹಿತ ವಾರಂಟ್

ಬೆಂಗಳೂರು

ಸಾರ್ವಜನಿಕರಿಗೆ ಕೋಟ್ಯಂತರ ರೂಪಾಯಿ ವಂಚಿಸಿ ತಲೆಮರೆಸಿಕೊಂಡಿರುವ ಒಂದೇ ಕುಟುಂಬದ ನಾಲ್ವರು ಆರೋಪಿಗಳ ಪತ್ತೆಗಾಗಿ ಬೆಂಗಳೂರು ನಗರದ ಜಯನಗರ ಪೊಲೀಸ್ ಠಾಣೆಯು ಪ್ರಕಟಣೆ ಹೊರಡಿಸಿದೆ.

ಜಯನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಮೊಕದ್ದಮೆ ಸಂಖ್ಯೆ 182/2025, ಕಲಂ 318, 3(5) ಬಿ.ಎನ್.ಎಸ್ ಮತ್ತು ಕಲಂ 21 ಬಡ್ಸ್ ಕಾಯ್ದೆಯಡಿ ಈ ಕ್ರಮ ಕೈಗೊಳ್ಳಲಾಗಿದೆ. ಆರೋಪಿಗಳು ಸಾರ್ವಜನಿಕರಿಂದ ಹಣ ಪಡೆದು ನಂಬಿಕೆ ದ್ರೋಹ ಎಸಗಿದ್ದು, ಪ್ರಸ್ತುತ ಇವರ ವಿರುದ್ಧ ನ್ಯಾಯಾಲಯದಿಂದ ಜಾಮೀನು ರಹಿತ ವಾರಂಟ್ ಹೊರಡಿಸಲಾಗಿದೆ.

ಆರೋಪಿಗಳಾದ ಶ್ರೀಮತಿ ಸುಧಾ: ಗಂಡ ಸಿದ್ದಾಚಾರಿ (48 ವರ್ಷ), ಸಿದ್ದಾಚಾರಿ: ತಂದೆ ರಾಮಚಾರಿ (56 ವರ್ಷ), ಯಶವಂತ್: ತಂದೆ ಸಿದ್ದಚಾರಿ (28 ವರ್ಷ) ಮತ್ತು ಕುಮಾರಿ ಆರೋಪಿಗಳು ಸದ್ಯ ತಲೆಮರೆಸಿಕೊಂಡಿದ್ದು, ಇವರ ಬಗ್ಗೆ ಯಾವುದೇ ಮಾಹಿತಿ ಲಭ್ಯವಿದ್ದಲ್ಲಿ ಕೂಡಲೇ ದೂರವಾಣಿ ಸಂಖ್ಯೆ: 9480800155 ಮತ್ತು 080–22094445ಗಳಿಗೆ ಕರೆ ಮಾಡಿ ಮಾಹಿತಿ ನೀಡುವಂತೆ ಪೊಲೀಸರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಮಾಹಿತಿ ನೀಡುವವರ ವಿವರಗಳನ್ನು ಗೌಪ್ಯವಾಗಿಡಲಾಗುವುದು ಎಂದು ಜಯನಗರ ಠಾಣೆಯ ಇನ್ಸಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತನ ಹತ್ಯೆ: ತನಿಖೆ ಚುರುಕು

ಬಂಗಾರಪೇಟೆ

ತಾಲೂಕು ಗಡಿಗೆ ಹೊಂದಿಕೊಂಡಿರುವ ಆಂಧ್ರ ಪ್ರದೇಶದ ಚಿತ್ತೂರು ಜಿಲ್ಲೆಯ ವೆಂಕಟಗಿರಿ ಕೋಟೆ(ವಿಕೋಟೆ) ಯಲ್ಲಿ ವರದಿಗಾರ ಜಗನ್ಮೋಹನ್ ರೆಡ್ಡಿ ಅವರ ಭೀಕರ ಹತ್ಯೆ ಪ್ರಕರಣವು ರಾಜ್ಯಾದ್ಯಂತ ಸಂಚಲನ ಮೂಡಿಸಿದೆ.

ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ದಾಳಿ ನಡೆಸಿ ಅವರನ್ನು ನಿರ್ದಯವಾಗಿ ಕೊಂದಿರುವುದು ತಿಳಿದುಬಂದಿದ್ದು, ಈ ಘಟನೆ ಪತ್ರಕರ್ತರು ಸೇರಿದಂತೆ ಸಾರ್ವಜನಿಕರಲ್ಲಿ ಭೀತಿ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ.



ಹತ್ಯೆ ಪ್ರಕರಣದ ತನಿಖೆಯನ್ನು ಪೊಲೀಸರು ತೀವ್ರಗೊಳಿಸಿದ್ದು, ಇತ್ತೀಚೆಗೆ ಜೈಲಿನಿಂದ ಬಿಡುಗಡೆಯಾದ ರೌಡಿ ಶೀಟರ್ ಒಬ್ಬನ ಮೇಲೆ ಪ್ರಮುಖ ಅನುಮಾನ ವ್ಯಕ್ತವಾಗಿದೆ. ಆತನ ಚಲನವಲನಗಳ ಬಗ್ಗೆ ಪೊಲೀಸರು ಮಾಹಿತಿ ಸಂಗ್ರಹಿಸುತ್ತಿದ್ದು, ಪ್ರಕರಣದ ನಿಖರ ಕಾರಣವನ್ನು ಪತ್ತೆಹಚ್ಚಲು ಹಲವು ಕೋಣಗಳಲ್ಲಿ ತನಿಖೆ ನಡೆಸುತ್ತಿದ್ದಾರೆ.

ವೈಯಕ್ತಿಕ ವೈಷಮ್ಯವೇ ಅಥವಾ ವೃತ್ತಿ ಸಂಬಂಧಿತ ಕಾರಣವೇ ಎಂಬುದರ ಬಗ್ಗೆ ಇನ್ನೂ ಸ್ಪಷ್ಟತೆ ಲಭ್ಯವಾಗಿಲ್ಲ. ಈ ಘಟನೆಯನ್ನು ಖಂಡಿಸಿರುವ ಪಲ್ಲಾ ಶ್ರೀನಿವಾಸರಾವ್, ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಮಾಧ್ಯಮ ಪ್ರತಿನಿಧಿಗಳ ಮೇಲೆ ದಾಳಿ ಅಸಹ್ಯಕರ ಎಂದು ತಿಳಿಸಿದ್ದಾರೆ. ಆರೋಪಿಗಳನ್ನು ಶೀಘ್ರ ಬಂಧಿಸಿ ಕಠಿಣ ಶಿಕ್ಷೆ ನೀಡಬೇಕೆಂದು ಅವರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಹತ್ಯೆಗೆ ಒಳಗಾದ ಜಗನ್ಮೋಹನ್ ರೆಡ್ಡಿ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥನೆ ಸಲ್ಲಿಸಲಾಗಿದ್ದು, ಕುಟುಂಬದವರಿಗೆ ಸಂತಾಪ ಸೂಚಿಸಲಾಗಿದೆ. ಪ್ರಕರಣದ ಸತ್ಯಾಂಶ ತಿಳಿಯಲು ಪೊಲೀಸರು ವ್ಯಾಪಕ ತನಿಖೆಯನ್ನು ಮುಂದುವರೆಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy